ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೮

# ಪಟ್ಟಿ – ೦೮

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೆಂಟನೇಯ ಮುಂದುವರೆದ ಅಧಿವೇಶನ**

**ಗುರುವಾರ, ದಿನಾಂಕ : ೧೨ನೇ ಮಾರ್ಚ್, ೨೦೨೬**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಉಪ ಮುಖ್ಯಮಂತ್ರಿಗಳು

೩. ಗೃಹ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

೫. ಅಬಕಾರಿ ಸಚಿವರು

೬. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

---

## ಮಲೆನಾಡಿನಲ್ಲಿ ಕೆಳಮಟ್ಟದಲ್ಲಿ ವಿಮಾನ ಹಾರಾಡಿರುವ ಬಗ್ಗೆ

**ಡಾ॥ ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) :–**

೮೭೬ (೧೧೦೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಲೆನಾಡಿನ ಚಿಕ್ಕಮಗಳೂರು ಜಿಲ್ಲೆ, ಕಳಸದಿಂದ ಬಾಳೆಹೊನ್ನೂರಿನವರೆಗೆ ಭದ್ರಾನದಿ ಪಾತ್ರದಲ್ಲಿ ಸಣ್ಣ ವಿಮಾನವೊಂದು ಅತ್ಯಂತ ಕೆಳಮಟ್ಟದಲ್ಲಿ ಹಾರಟ ನಡೆಸಿ ಸಾರ್ವಜನಿಕವಾಗಿ ಆತಂಕ ಸೃಷ್ಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಂಚರಿಸಿದ ಈ ನಿಗೂಢ ವಿಮಾನದ ಬಗ್ಗೆ ಅಧಿಕಾರಿಗಳಿಗೆ ಯಾವುದೇ ಮಾಹಿತಿ ಇಲ್ಲವೇ ; ಈ ನಿಗೂಢ ವಿಮಾನ ಎಲ್ಲಿಂದ ಬಂದಿರುತ್ತದೆ ಮತ್ತು ಇದರೊಳಗೆ ಯಾರಿದ್ದರು ; ಇದರ ಉದ್ದೇಶವೇನು ಎಂಬುದು ಸದ್ಯಕ್ಕೆ ಯಕ್ಷ ಪ್ರಶ್ನೆಯಾಗಿರುವುದು ನಿಜವೇ ;

(ಇ) ಈ ಬಗ್ಗೆ ಸ್ಥಳೀಯ ಪೊಲೀಸ್ ಇಲಾಖೆಯಾಗಲಿ ಅಥವಾ ಅರಣ್ಯ ಇಲಾಖೆಯಾಗಲಿ ಯಾವುದೇ ಪೂರ್ಣ ಮಾಹಿತಿ ಹೊಂದಿಲ್ಲದಿರುವುದು ಪರಿಸ್ಥಿತಿಯ ಗಂಭೀರತೆಯನ್ನು ಹೆಚ್ಚಿಸಿದೆ ; ಅಧಿಕಾರಿಗಳಿಗೆ ಮಾಹಿತಿ ಇಲ್ಲದೆ ಹಾರಾಟ ನಡೆಸಿರುವುದು ಹತ್ತಾರು ಅನುಮಾನಗಳಿಗೆ ದಾರಿ ಮಾಡಿಕೊಟ್ಟಿರುವುದರಿಂದ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ?

## ಭದ್ರಾ ಜಲಾಶಯದ Crust Gate and Emergency Gate ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೭ (೧೦೨೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷದಲ್ಲಿ ಶಿವಮೊಗ್ಗ ಜಿಲ್ಲೆ ಭದ್ರಾ ಜಲಾಶಯದ ಎಡದಂಡೆ ನಾಲೆಯಲ್ಲಿ ಸೋರಿಕೆಯಾಗುತ್ತಿದ್ದ ನೀರನ್ನು ನಿಲ್ಲಿಸಲು Crust Gate and Emergency Gate ದುರಸ್ತಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳನ್ನು ಯಾವ ಗುತ್ತಿಗೆದಾರರಿಗೆ ಟೆಂಡರ್ ನೀಡಲಾಗಿದೆ ; ಕಾಮಗಾರಿ ಪೂರ್ಣಗೊಂಡಿದೆಯೇ ; ಇಲ್ಲದಿದ್ದಲ್ಲಿ, ಪೂರ್ಣಗೊಳಿಸಲು ಬೇಕಾಗುವ ಕಾಲಾವಧಿ ಎಷ್ಟು ;

(ಇ) ಕಾಮಗಾರಿ ಪೂರ್ಣಗೊಂಡಿದ್ದರೆ ಕಾಮಗಾರಿಯ ಗುಣಮಟ್ಟವನ್ನು ಪರಿಶೀಲಿಸಲು ಇರುವ ಮಾನದಂಡಗಳೇನು ;

(ಈ) ಸದರಿ Gate ದುರಸ್ತಿ ಕಾಮಗಾರಿ ಪೂರ್ಣಗೊಂಡ ನಂತರ ನೀರು ಹೆಚ್ಚಾಗಿ ಪೋಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ?

## ಯಶಸ್ವಿನಿ ಯೋಜನೆ ಬಗ್ಗೆ

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೮ (೧೦೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಶಸ್ವಿನಿ ಯೋಜನೆಯಡಿಯಲ್ಲಿ ಚಿಕಿತ್ಸೆಗಳ ದರ ಪರಿಷ್ಕರಣೆ ಸಂಬಂಧ ಯಾರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿ ರಚಿಸಲ್ಪಟ್ಟಿದೆ ; ಸಮಿತಿಯಲ್ಲಿ ಇರುವ ಸದಸ್ಯರ ಮಾಹಿತಿ ನೀಡುವುದು ಹಾಗೂ ತಜ್ಞರ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ ;

(ಆ) ಇದ್ದಲ್ಲಿ, ಯಾವ ಯಾವ ಚಿಕಿತ್ಸೆಗಳಿಗೆ ಎಷ್ಟು ದರ ಪರಿಷ್ಕರಿಸಲು ಶಿಫಾರಸ್ಸು ಮಾಡಲಾಗಿದೆ ; (ಚಿಕಿತ್ಸೆವಾರು ಹಿಂದಿನ ಮತ್ತು ಪರಿಷ್ಕೃತ ದರದ ಸಂಪೂರ್ಣ ವಿವರ ನೀಡುವುದು)

(ಇ) ಯಶಸ್ವಿನಿ ಯೋಜನೆ ಜಾರಿ ಬಳಿಕ ಎಷ್ಟು ಚಿಕಿತ್ಸೆಗಳನ್ನು ಹೆಚ್ಚುವರಿಯಾಗಿ ಸೇರ್ಪಡೆ ಮಾಡಲಾಗಿದೆ ; (ವಿವರ ನೀಡುವುದು)

(ಈ) ಯಶಸ್ವಿನಿ ಚಿಕಿತ್ಸಾ ದರಗಳು ಕಡಿಮೆ ಇರುವುದೆಂದು ಭಾವಿಸಿ ರಾಜ್ಯದ ಪ್ರಮುಖ ಆಸ್ಪತ್ರೆಗಳು ಸದರಿ ಯೋಜನೆಯಡಿ ನೋಂದಾಯಿಸಿಕೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಡಿಜಿಟಲ್ ಅರೆಸ್ಟ್ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೭೯ (೧೦೨೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಡಿಜಿಟಲ್ ಅರೆಸ್ಟ್‌ನಿಂದಾಗಿ ಅಮಾಯಕರ ಬ್ಯಾಂಕ್ ಖಾತೆಯಿಂದ ಕೋಟಿ ಕೋಟಿ ರೂಪಾಯಿ ವಂಚನೆ ಆಗುತ್ತಿದ್ದು, ನೊಂದವರು ಮಾನಸಿಕವಾಗಿ ಕುಗ್ಗುತ್ತಿರುವ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇದನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಈ ಸಂಬಂಧ ಎಷ್ಟು ಪ್ರಕರಣಗಳು ದಾಖಲಾಗಿವೆ ; ಇದರಿಂದ ಸಾರ್ವಜನಿಕರು ಕಳೆದುಕೊಂಡ ಹಣದ ಮೊತ್ತ ಎಷ್ಟು ; ಇದುವರೆಗೆ ಎಷ್ಟು ಪ್ರಕರಣಗಳಲ್ಲಿ ಎಷ್ಟು ಹಣವನ್ನು ವಶಪಡಿಸಿಕೊಳ್ಳಲಾಗಿದೆ ;

(ಇ) ಡಿಜಿಟಲ್ ಅರೆಸ್ಟ್ ವಂಚನೆಯನ್ನು ತಡೆಯುವ ಸಲುವಾಗಿ ಜಾಗೃತಿ ಮೂಡಿಸಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ?

# ರಾಯಚೂರು ಜಿಲ್ಲೆಯಲ್ಲಿ ಕೆ.ಎಸ್.ಆರ್.ಪಿ ಪಡೆಯನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೦ (೧೦೮೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗಳ ಸಂಖ್ಯೆ ಎಷ್ಟು ; ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿರುವ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ಪಡೆಗಳ ಸಂಖ್ಯೆ ಎಷ್ಟು ;

(ಆ) ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಿಗೆ ಕಾನೂನು ವ್ಯವಸ್ಥೆಗಳನ್ನು ಕಾಪಾಡುವ ಸಮಯದಲ್ಲಿ ಕೆ.ಎಸ್.ಆರ್.ಪಿ ತುಕಡಿಗಳನ್ನು ನೆರೆಯ ಜಿಲ್ಲೆಯ ಕಲಬುರಗಿ ಘಟಕದಿಂದ ನಿಯೋಜಿಸಲಾಗುತ್ತಿದ್ದು, ಸದರಿ ಸ್ಥಳದಿಂದ ಜಿಲ್ಲೆಯನ್ನು ತಲುಪಲು ತುಂಬಾ ಸಮಯ ತಗುಲಲಿದ್ದು ಇದರಿಂದ ತುರ್ತು ಸೇವೆ ಒದಗಿಸಲು ಕಷ್ಟಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ರಾಯಚೂರು ಜಿಲ್ಲೆಯಲ್ಲಿ ೧೩ನೇ ಕೆ.ಎಸ್.ಆರ್.ಪಿ ತುಕಡಿಯನ್ನು ಸ್ಥಾಪಿಸುವ ಕುರಿತು ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ರಾಯಚೂರು ಜಿಲ್ಲೆಯಲ್ಲಿ ಹೊಸ ಕೆ.ಎಸ್.ಆರ್.ಪಿ ಪಡೆಯನ್ನು ಸ್ಥಾಪಿಸಲಾಗುವುದು ?

## ಸಿಂಧನೂರಿನಲ್ಲಿರುವ CSF ಅಧೀನದ ಭೂಮಿಯಲ್ಲಿ ಕೆರೆ (Impounding Reservior) ನಿರ್ಮಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೧ (೧೯೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನ ೨೫ ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸುವ ಹಿನ್ನಲೆಯಲ್ಲಿ ಸಿಂಧನೂರಿನಲ್ಲಿ CSF ಅಧೀನದಲ್ಲಿ ಬರುವ ಜಮೀನಿನಲ್ಲಿ ಕೆರೆ (Impounding Reservoir) ಯನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಿ, ಸಿಂಧನೂರು ತಾಲ್ಲೂಕಿನ ಗ್ರಾಮಗಳಿಗೆ ಕುಡಿಯುವ ನೀರನ್ನು ಒದಗಿಸಲಾಗುವುದು ?

## ಅಂಬಾದೇವಿಯ ಅಂಬಾಮಠವನ್ನು ಪ್ರಸಿದ್ಧ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೨ (೧೯೯೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ಸುಪ್ರಸಿದ್ಧ ಅಂಬಾದೇವಿಯ ಅಂಬಾಮಠ ದೇವಸ್ಥಾನವು ಪುರಾತನ ದೇವಾಲಯುವಾಗಿದ್ದು, ಲಕ್ಷಾಂತರ ಭಕ್ತರ ಧಾರ್ಮಿಕ ಕ್ಷೇತ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಸ್ಥಳವನ್ನು ಪ್ರಸಿದ್ಧ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಹಂತದಲ್ಲಿದೆ ;

(ಇ) ಯಾವ ಕಾಲಮಿತಿಯೊಳಗೆ ಸದರಿ ಧಾರ್ಮಿಕ ಸ್ಥಳವನ್ನು ಪ್ರಸಿದ್ಧ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸಲಾಗುವುದು ?

## ಸಿಂಧನೂರು ತಾಲ್ಲೂಕಿನ ಪರಿಶಿಷ್ಟ ಪಂಗಡದ ಜನರಿಗೆ ಅಗತ್ಯ ಮೂಲಭೂತ ಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೩ (೧೮೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ಸಿಂಧನೂರು ತಾಲ್ಲೂಕಿನಲ್ಲಿ ಪರಿಶಿಷ್ಟ ಪಂಗಡದ ಜನರು ಹೆಚ್ಚಾಗಿ ವಾಸಿಸುವ ಕಡೆಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಸರ್ಕಾರದಿಂದ ಮಂಜೂರಾಗಿರುವ ಕಾಮಗಾರಿಗಳೆಷ್ಟು ;

(ಆ) ಸದರಿ ಕಾಮಗಾರಿಗಳ ಪೈಕಿ ಈಗಾಗಲೇ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ;

(ಇ) ಉಳಿದ ಕಾಮಗಾರಿಗಳು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ?

## ಸಿಂಧನೂರಿನ ಹೃದಯ ಭಾಗದಲ್ಲಿರುವ ಕ್ರೀಡಾಂಗಣವು ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೪ (೧೮೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರಿನ ಹೃದಯ ಭಾಗದಲ್ಲಿ ಮತ್ತು ಕೆರೆಯ ಪಕ್ಕದಲ್ಲಿರುವ ಕ್ರೀಡಾಂಗಣವು ಅಗತ್ಯ ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕ್ರೀಡಾಂಗಣದಲ್ಲಿ ಕುಡಿಯುವ ನೀರಿನ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದ್ದಲ್ಲಿ, ಸದರಿ ಕ್ರೀಡಾಂಗಣವನ್ನು ಒಂದು ಸುಸಜ್ಜಿತವಾದ ಕ್ರೀಡಾಂಗಣವಾಗಿ ಅಭಿವೃದ್ಧಿಪಡಿಸುವ ಕುರಿತು ಸರ್ಕಾರದ ನಿಲುವೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ಕ್ರೀಡಾಂಗಣವನ್ನು ಅಭಿವೃದ್ಧಿಗೊಳಿಸಿ ಆಸಕ್ತ ಕ್ರೀಡಾಪಟುಗಳ ಬಳಕೆಗೆ ಒದಗಿಸಲಾಗುವುದು ?

## ಅನುದಾನ ಬಿಡುಗಡೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೮೮೫ (೧೧೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯ ಸರ್ಕಾರ ಘೋಷಿಸಿದ ಬಜೆಟ್ ಗಾತ್ರವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಸರ್ಕಾರದ ಸಾಲದ ಮಾನದಂಡವೇನು: ಕಳೆದ ೩ ವರ್ಷಗಳಲ್ಲಿ ರಾಜ್ಯ ಸರ್ಕಾರ ಮಾಡಿದ ಸಾಲದ ಮೊತ್ತವೆಷ್ಟು ; ಪ್ರಸ್ತುತ ಇರುವ ರಾಜ್ಯ ಸರ್ಕಾರದ ಒಟ್ಟು ಸಾಲದ ಪ್ರಮಾಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಕಳೆದ ೩ ವರ್ಷದಲ್ಲಿ ಎಸ್.ಸಿ.ಪಿ., ಟಿ.ಎಸ್.ಪಿ., ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರಿಗೆ ಬಜೆಟ್‌ನಲ್ಲಿ ಘೋಷಿಸಿದ ಅನುದಾನವೆಷ್ಟು ; ಬಿಡುಗಡೆ ಮಾಡಿದ ಅನುದಾನವೆಷ್ಟು ; (ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಈ) ಅನುದಾನ ಪೂರ್ಣ ಪ್ರಮಾಣದಲ್ಲಿ ಬಿಡುಗಡೆಯಾಗದ ಕಾರಣ ಫಲಾನುಭವಿ ಆಯ್ಕೆ ಮಾಡಲು ಮತ್ತು ಯೋಜನೆಗಳನ್ನು ಅನುಷ್ಠಾನ ಮಾಡಲು ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇನ್ನು ಮುಂದಾದರೂ ಸಕಾಲದಲ್ಲಿ ಪೂರ್ಣ ಪ್ರಮಾಣದ ಅನುದಾನ ಬಿಡುಗಡೆ ಮಾಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ?

## ನಗರ ಪ್ರದೇಶದಲ್ಲಿ ಫ್ಲೆಕ್ಸ್, ಬ್ಯಾನರ್ಸ್ ಮತ್ತು ಕಟೌಟ್ ಹಾವಳಿ ಹೆಚ್ಚಾಗಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೬ (೧೦೦೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರವು ಸೇರಿದಂತೆ ರಾಜ್ಯಾದ್ಯಂತ ನಗರ ಮತ್ತು ಪಟ್ಟಣ್ಣ ಪ್ರದೇಶಗಳಲ್ಲಿ ಯಾವುದೇ ಫ್ಲೆಕ್ಸ್, ಬ್ಯಾನರ್ಸ್ ಮತ್ತು ಕಟೌಟ್‌ಗಳನ್ನು ಸಾರ್ವಜನಿಕ ಪ್ರದೇಶಗಳಲ್ಲಿ ಹಾಕಬಾರದೆಂಬುದಾಗಿ ಸರ್ಕಾರದಿಂದ ಯಾವುದಾದರೂ ಆದೇಶ ಹೊರಡಿಸಲಾಗಿದೆಯೇ ; (ಆದೇಶದ ಪ್ರತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ಅನಧಿಕೃತವಾಗಿ ಬ್ಯಾನರ್‌ಗಳನ್ನು ಹಾಕಿದವರಿಗೆ ಯಾವ ರೀತಿಯ ದಂಡ ಮತ್ತು ಶಿಕ್ಷೆಯನ್ನು ನೀಡಲಾಗುವುದು ;

(ಇ) ಸರ್ಕಾರದ ಆದೇಶವಿದ್ದರೂ ನಗರ ಪ್ರದೇಶಗಳಲ್ಲಿ ಅತೀ ಹೆಚ್ಚಾಗಿ ಫ್ಲೆಕ್ಸ್, ಬ್ಯಾನರ್ಸ್, ಕಟೌಟ್‌ಗಳನ್ನು ಎಲ್ಲೆಂದರಲ್ಲಿ ಹಾಕಿರುವುದು ಸ್ಥಳೀಯ ಅಧಿಕಾರಿಗಳ ಗಮನಕ್ಕೆ ಬಂದಿಲ್ಲವೇ ; ಹಾಗಿದ್ದಲ್ಲಿ, ಇದುವರೆಗೂ ತೆಗೆದುಕೊಂಡ ಕ್ರಮವೇನು ;

(ಈ) ಈ ರೀತಿಯಾಗಿ ಹಾಕಲಾಗುತ್ತಿರುವ ಬ್ಯಾನರ್ ಮತ್ತು ಕಟೌಟ್‌ಗಳಿಂದ, ಸಾರ್ವಜನಿಕರಿಗೆ ಮತ್ತು ವ್ಯಾಪಾರಸ್ಥರಿಗೆ

ತೊಂದರೆಯಾಗುತ್ತಿರುವುದು ಹಾಗೂ ಜಗಳ ಮತ್ತು ಸಾವುಗಳು ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇದುವರೆಗೂ ಎಷ್ಟು ದಂಡವನ್ನು ವಸೂಲಿ ಮಾಡಲಾಗಿದೆ; ಎಷ್ಟು ಜನರ ಮೇಲೆ ಪ್ರಕರಣಗಳು ದಾಖಲಾಗಿದೆ ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ರಾಜೀವ್ ಗಾಂಧಿ ಸಿಗ್ನಲ್ ಮುಕ್ತ ಅಷ್ಟಪಥ ರಸ್ತೆಯ ಕಾಮಗಾರಿ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೭ (೧೦೦೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಓಕಳಿಪುರಂ ನಿಂದ ರೈಲ್ವೆ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ರಾಜೀವ್ ಗಾಂಧಿ ಸಿಗ್ನಲ್ ಮುಕ್ತ ಅಷ್ಟಪಥ ರಸ್ತೆಯ ಕಾಮಗಾರಿಯು ಪ್ರಾರಂಭವಾಗಿದ್ದು ಯಾವಾಗ ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಕಾಮಗಾರಿಯುನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿತ್ತು ; ಕಾಮಗಾರಿ ಪೂರ್ಣಗೊಳಿಸಲು ನೀಡಲಾದ ಕಾಲಾವಾಧಿ ಎಷ್ಟು ; ನೀಡಲಾಗಿರುವ ಕಾಲವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿದ್ದಾರೆಯೇ ;

(ಇ) ಸರ್ಕಾರ ನೀಡಿರುವ ಸಮಯಕ್ಕೆ ಸರಿಯಾಗಿ ಕಾಮಗಾರಿ ಪೂರೈಸದಿದ್ದರೆ, ಸರ್ಕಾರದ ನಿಯಮದಡಿ ಗುತ್ತಿಗೆದಾರರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗುತ್ತದೆ ;

(ಈ) ಈ ಯೋಜನೆಗೆ ಪ್ರಾರಂಭದಲ್ಲಿ ಎಷ್ಟು ಕೋಟಿ ರೂಪಾಯಿ ಟೆಂಡರ್‌ಗೆ ಅನುಮತಿ ನೀಡಲಾಗಿದೆ,ತದನಂತರ ಹೆಚ್ಚುವರಿಯಾಗಿ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು ; (ಕಾರಣಗಳೊಂದಿಗೆ ಪೂರ್ಣ ವಿವರ ಒದಗಿಸುವುದು)

(ಉ) ಈ ಯೋಜನೆಯು ಅವೈಜ್ಞಾನಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ ; ಸದರಿ ಯೋಜನೆಯಿಂದ ಸಂಚಾರ ಮಾಡಲು ಕಷ್ಟವಾಗುತ್ತಿರುವುದನ್ನು ಅಧಿಕಾರಿಗಳು ಗಮನಹರಿಸಿಲ್ಲವೇ, ಹಾಗಿದ್ದರೆ, ಇದನ್ನು ಸರಿಪಡಿಸಲು ಯಾವ ಕಾಮಗಾರಿಯಿಂದ ಕ್ರಮ ತೆಗೆದುಕೊಳ್ಳಲಾಗಿದೆ ;

(ಊ) ಸದರಿ ಕಾಮಗಾರಿ ಇದುವರೆಗೂ ಪೂರ್ಣಗೊಳಿಸದಿರಲು ಇರುವ ಕಾರಣಗಳೇನು ; ಹಾಗಿದ್ದಲ್ಲಿ, ಸದಾಕಾಲ ಈ ರಸ್ತೆ ಟ್ರಾಫಿಕ್ ಜಾಮ್‌ನಿಂದ ಕೂಡಿರಲು ಕಾರಣಗಳೇನು ?

## ಎತ್ತಿನಹೊಳೆ ಯೋಜನೆ ಪೂರ್ಣಗೊಳಿಸುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೮ (೧೦೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನಹೊಳೆ ಸಮಗ್ರ ನೀರಿನ ಯೋಜನೆ ಪ್ರಾರಂಭಗೊಂಡು ಎಷ್ಟು ವರ್ಷಗಳು ಕಳೆದಿದೆ ; ಈ ಯೋಜನೆಗೆ ಸರ್ಕಾರ ನಿಗದಿಪಡಿಸಿರುವ ಅನುದಾನವೆಷ್ಟು ; ಈ ಯೋಜನೆಯನ್ನು ಪೂರ್ಣಗೊಳಿಸಲು ನಿಗದಿ ಪಡಿಸಿರುವ ಅವಧಿ ಎಷ್ಟು ;

(ಆ) ಸದರಿ ಕಾಮಗಾರಿಯನ್ನು ಎಷ್ಟು ಹಂತದಲ್ಲಿ ಕೈಗೆತ್ತಿಕೊಳ್ಳಲಾಗಿದೆ ; ಇದರ ಗುತ್ತಿಗೆಯನ್ನು ಯಾವ ಯಾವ ಸಂಸ್ಥೆಗಳಿಗೆ ನೀಡಲಾಗಿದೆ ; ಪ್ರತಿ ಗುತ್ತಿಗೆದಾರರಿಗೆ ಎಷ್ಟು ಕಾಮಗಾರಿಗಳನ್ನು ನೀಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರಸ್ತುತ ಈ ಯೋಜನೆಯಿಂದ ಎಷ್ಟು ಜಿಲ್ಲೆಗಳಿಗೆ ನೀರನ್ನು ಒದಗಿಸಲಾಗಿದೆ, ಇನ್ನು ಎಷ್ಟು ಜಿಲ್ಲೆಗಳು ಬಾಕಿ ಇದೆ ಹಾಗೂ ಎಷ್ಟು ಅನುದಾನದ ಅವಶ್ಯಕತೆ ಇದೆ ;

(ಈ) ಯೋಜನೆಗೆ ಬೇಕಾಗಿರುವ ಜಮೀನುಗಳನ್ನು ಎಲ್ಲಾ ಜಿಲ್ಲೆಗಳಲ್ಲಿ ಸಂಪೂರ್ಣವಾಗಿ ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ ಅಥವಾ ಬಾಕಿ ಇದೆಯೇ ಹಾಗೂ ಭೂಮಾಲೀಕರಿಗೆ ಪರಿಹಾರ ಹಣವನ್ನು ನೀಡಲಾಗಿದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಉ) ಎತ್ತಿನಹೊಳೆ ಸಮಗ್ರ ನೀರಿನ ಯೋಜನೆಗೆ ೧೫,೦೦೦ ಕೋಟಿ ರೂ ವೆಚ್ಚ ಮಾಡಿದರೂ ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗಳಿಗೆ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ಉದ್ದೇಶ ಈಡೇರಿಲ್ಲ ಎಂದು ಭಾರತ ಲೆಕ್ಕಾ ಪರಿಶೋಧಕರ ವರದಿಯಲ್ಲಿ ಆಕ್ಷೇಪ ವ್ಯಕ್ತಪಡಿಸಿದ್ದು, ಇದರ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೮೯ (೧೦೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಉದ್ದೇಶಗಳೇನು ;

(ಆ) ರಾಜ್ಯದಲ್ಲಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ನಿಗಮದ ಪ್ರಾರಂಭದಲ್ಲಿ ಎಷ್ಟು ಜಿಲ್ಲಾ ಕಛೇರಿಗಳಿದ್ದವು ಮತ್ತು ಈವರೆಗೂ ಎಷ್ಟು ಜಿಲ್ಲೆಗಳಲ್ಲಿ ಜಿಲ್ಲಾ ಕಛೇರಿಗಳನ್ನು ಮಂಜೂರು ಮಾಡಲಾಗಿದೆ ; (ಮಾಹಿತಿ ಒದಗಿಸುವುದು)

(ಇ) ಜಿಲ್ಲಾ ಕಛೇರಿ ಮತ್ತು ಸಿಬ್ಬಂದಿ ನೀಡಲು ಪರಿಶಿಷ್ಟ ಪಂಗಡಗಳ ಜನಸಂಖ್ಯೆ ಮಾನದಂಡವಾಗಿದೆಯೇ ; ಹೌದಾದಲ್ಲಿ, ಕಲ್ಯಾಣ ಕರ್ನಾಟಕ ಜಿಲ್ಲೆಗಳಾದ ಯಾದಗಿರಿ, ಬೀದರ್, ವಿಜಯನಗರ,

ಕೊಪ್ಪಳ ಹಾಗೂ ಕೋಲಾರ, ಮಂಗಳೂರು ಇನ್ನಿತರ ಜಿಲ್ಲೆಗಳಿಗೆ ಜಿಲ್ಲಾ ಕಛೇರಿ ಮತ್ತು ಸಿಬ್ಬಂದಿಗಳನ್ನು ಒದಗಿಸದೇ ಇರಲು ಕಾರಣವೇನು ; (ಮಾಹಿತಿ ಒದಗಿಸುವುದು)

(ಈ) ಕಲ್ಯಾಣ ಕರ್ನಾಟಕ ಜಿಲ್ಲೆಗಳಲ್ಲಿ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಕಛೇರಿಗಳನ್ನು ಯಾವಾಗ ಸ್ಥಾಪಿಸಲಾಗುವುದು ? (ಮಾಹಿತಿ ಒದಗಿಸುವುದು)

## ಕಳೆದ ೩ ವರ್ಷಗಳಲ್ಲಿ ಕಾಣೆಯಾಗಿರುವ ಮಹಿಳೆಯರು ಹಾಗೂ ಬಾಲಕಿಯರ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೦ (೧೦೩೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಕಾಣೆಯಾಗಿರುವ ಮಹಿಳೆಯರು ಹಾಗೂ ಬಾಲಕಿಯರ ಸಂಖ್ಯೆ ಎಷ್ಟು ; ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು ;

(ಆ) ಕಾಣೆಯಾದ ಮಹಿಳೆಯರು ಹಾಗೂ ಬಾಲಕಿಯರ ಪೈಕಿ ಎಷ್ಟು ಜನ ಪತ್ತೆಯಾಗಿದ್ದಾರೆ ; ಜಿಲ್ಲಾವಾರು ಮಾಹಿತಿ ಒದಗಿಸುವುದು ;

(ಇ) ಇಲ್ಲಿಯವರೆಗೂ ಪತ್ತೆಯಾಗದೇ ಇರುವ ಪ್ರಕರಣಗಳು ಎಷ್ಟು; (ವರ್ಷವಾರು ಹಾಗೂ ಜಿಲ್ಲಾವಾರು ಅಂಕಿ ಅಂಶಗಳನ್ನು ಒದಗಿಸುವುದು)

(ಈ) ಪತ್ತೆಯಾಗದೇ ಇರುವ ಪ್ರಕರಣಗಳಲ್ಲಿ ಪತ್ತೆ ಹಚ್ಚಲು ಸರ್ಕಾರ ಯಾವ ರೀತಿಯ ಕ್ರಮವನ್ನು ಕೈಗೊಂಡಿದೆ, ಮಾಹಿತಿ ಒದಗಿಸುವುದು ?

# ರಾಜ್ಯದಲ್ಲಿ ದಾಖಲಾಗಿರುವ ಗೃಹ ಹಿಂಸೆ ಹಾಗೂ ವರದಕ್ಷಿಣೆ ಪ್ರಕರಣಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೧ (೧೦೩೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ದಾಖಲಾಗಿರುವ ಗೃಹ ಹಿಂಸೆ ಹಾಗೂ ವರದಕ್ಷಿಣೆ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು )

(ಆ) ಈ ಪೈಕಿ ಎಷ್ಟು ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣೆ ಹಂತದಲ್ಲಿವೆ; ಖುಲಾಸೆಯಾದ ಪ್ರಕರಣಗಳು ಎಷ್ಟು ಹಾಗೂ ಶಿಕ್ಷೆಗೆ ಒಳಪಟ್ಟ ಪ್ರಕರಣಗಳು ಎಷ್ಟು; (ಮಾಹಿತಿ ಒದಗಿಸುವುದು)

(ಇ) ವಿಚಾರಣೆ ಹಂತದಲ್ಲಿ ಇರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಫಾಸ್ಟ್ ಟ್ರ್ಯಾಕ್ ಕೋರ್ಟ್‌ಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ; (ಮಾಹಿತಿ ಒದಗಿಸುವುದು)

(ಈ) ಇದ್ದಲ್ಲಿ, ಯಾವಾಗ ಫಾಸ್ಟ್ ಟ್ರ್ಯಾಕ್ ಕೋರ್ಟ್‌ಗಳನ್ನು ಸ್ಥಾಪಿಸಲಾಗುವುದು ? (ಮಾಹಿತಿ ಒದಗಿಸುವುದು)

# ಕರಾವಳಿ ಭಾಗದಲ್ಲಿ ಪ್ರಚೋದನಕಾರಿ ಭಾಷಣ ಮತ್ತು ಕೋಮುಗಲಭೆಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೨ (೧೦೬೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ದಕ್ಷಿಣ ಕನ್ನಡ, ಉಡುಪಿ ಮತ್ತು ಕಾರವಾರ ಜಿಲ್ಲೆಗಳಲ್ಲಿ ಪ್ರಚೋದನಕಾರಿ ಭಾಷಣ ಮತ್ತು

ಕೋಮುಗಲಭೆಗಳಿಗೆ ಪ್ರಚೋದನೆ ನೀಡುತ್ತಿರುವವರ ಮೇಲೆ ದಾಖಲಾದ ಪ್ರಕರಣಗಳೆಷ್ಟು ; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು ; (ವಿವರ ನೀಡುವುದು)

(ಆ) ಪ್ರಚೋದನಕಾರಿ ಭಾಷಣದ ಹಿಂದೆ ಇರುವವರನ್ನು ಗುರುತಿಸಲಾಗಿದೆಯೇ ; ಯಾವ ಉದ್ದೇಶಕ್ಕಾಗಿ ಭಾಷಣ ಮಾಡಲಾಗುತ್ತದೆ ; (ವಿವರ ನೀಡುವುದು)

(ಇ) ಕರಾವಳಿ ಜಿಲ್ಲೆಗಳಲ್ಲಿ ಎಷ್ಟು ಜನ ರೌಡಿಗಳನ್ನು ಮತ್ತು ಸಮಾಜ ವಿರೋಧಿಗಳನ್ನು ಗಡಿಪಾರು ಮಾಡಲಾಗಿದೆ ; ಗಡಿಪಾರಾದವರು ಯಾವ ಯಾವ ಜಿಲ್ಲೆಗಳಲ್ಲಿ ಆಶ್ರಯ ಪಡೆಯುತ್ತಿದ್ದಾರೆ ; (ವಿವರ ನೀಡುವುದು)

(ಈ) ಕರಾವಳಿ ಜಿಲ್ಲೆಗಳಲ್ಲಿ ಪ್ರಚೋದನಕಾರಿ ಭಾಷಣ ಮಾಡಿರುವ ಎಷ್ಟು ಮಂದಿ ನಾಯಕರು ಬೇರೆ ಜಿಲ್ಲೆಗಳಲ್ಲಿ ಸಾರ್ವಜನಿಕ ಸಭೆಗಳಿಗೆ ತೆರಳಲು, ಭಾಷಣ ಮಾಡಲು ನಿರ್ಬಂಧಿಸಲಾಗಿದೆ; ಇದು ಯಾವ ಕಾರಣಕ್ಕಾಗಿ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಉ) ವಿಶೇಷ ತನಿಖಾ ದಳ ಇದರ ವ್ಯಾಪ್ತಿ ಎಷ್ಟು ; ಇದು ಯಾವ ರೀತಿ ಕೆಲಸ ಮಾಡುತ್ತದೆ ; ಈ ದಳದಲ್ಲಿ ಎಷ್ಟು ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನ್ಯಾಯಾಲಯ ಕಟ್ಟಡ ನಿರ್ಮಾಣದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೩ (೧೦೬೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನ್ಯಾಯಾಲಯ ಕಟ್ಟಡವನ್ನು ನಿರ್ಮಾಣ ಮಾಡಬೇಕೆಂಬ ಅನೇಕ ಬೇಡಿಕೆಗಳು ಇದ್ದು, ಬೆಳ್ತಂಗಡಿ, ಪುತ್ತೂರು, ಬಂಟ್ವಾಳ ಮತ್ತು ಮಂಗಳೂರಿನಲ್ಲಿ ನ್ಯಾಯಾಲಯ ಕಟ್ಟಡ ಒದಗಿಸಲು ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಯಾವಾಗ ಪ್ರಾರಂಭಗೊಳ್ಳುವುದು ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಹೊಸದಾಗಿ ಪ್ರಾರಂಭಗೊಂಡ ತಾಲ್ಲೂಕುಗಳಾದ ಕಡಪು, ಮುಲ್ಕಿ ಮತ್ತು ಉಳ್ಳಾಲದಲ್ಲಿ ನ್ಯಾಯಾಲಯ ಪ್ರಾರಂಭಿಸಬೇಕೆಂಬ ಜನರ ಬೇಡಿಕೆಯುನ್ನು ಈಡೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಯಾವಾಗ ಪ್ರಾರಂಭಿಸಲಾಗುವುದು ; (ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ನ್ಯಾಯಾಂಗ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆ ಇರುವುದರಿಂದ ನ್ಯಾಯವನ್ನು ಪಡೆಯಲು ವಿಳಂಬವಾಗುತ್ತಿದೆ ಎಂಬ ಕೂಗು ಇದೆ ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಪಶ್ಚಿಮ ವಾಹಿನಿ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೪ (೧೦೬೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶ್ಚಿಮ ವಾಹಿನಿ ಯೋಜನೆಯನ್ನು ಕರಾವಳಿ ಭಾಗದಲ್ಲಿ ಕಾರ್ಯಗತಗೊಳಿಸಬೇಕೆಂಬ ರಾಜ್ಯದ ಬಜೆಟ್‌ನಲ್ಲಿ ಹಣವನ್ನು ನೀಡದೇ ಇರುವುದರಿಂದ ಹಾಗೂ ಕಡಿಮೆ ಮೊತ್ತ ನೀಡಿರುವುದರಿಂದ ಕರಾವಳಿ ಭಾಗದಲ್ಲಿ ಕೈಗೊಂಡ ಯೋಜನೆಗಳು ಮತ್ತು ಹೊಸದಾಗಿ ಯೋಜನೆಗಳನ್ನು ಮಾಡಲು ಅನುದಾನವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಪಶ್ಚಿಮ ವಾಹಿನಿ ಯೋಜನೆಗೆ ಮಂಜೂರಾದ ಹಣದ ಕೊರತೆಯಿಂದ ಕಾಮಗಾರಿಗಳು ಅರ್ಧದಲ್ಲಿ ನಿಂತಿವೆ ಎಂಬ ದೂರುಗಳಿದ್ದು, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ೨೦೨೩-೨೪ ಮತ್ತು ೨೦೨೪-೨೫ ರಲ್ಲಿ ಪಶ್ಚಿಮ ವಾಹಿನಿ ಯೋಜನೆಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಕೈಗೊಂಡ ಕಾಮಗಾರಿ ಹಾಗೂ ಬಾಕಿ ಇರುವ ಕಾಮಗಾರಿ ಎಷ್ಟು ; (ವಿವರ ನೀಡುವುದು)

(ಈ) ಪಶ್ಚಿಮ ವಾಹಿನಿ ಯೋಜನೆಯಲ್ಲಿ ಕಾಮಗಾರಿಗಳು ನಡೆದರೂ, ಗುತ್ತಿಗೆದಾರರಿಗೆ ಹಣ ಬಿಡುಗಡೆ ಮಾಡದೇ ತೊಂದರೆ ಎದುರಿಸುತ್ತಿದ್ದಾರೆ ಎಂಬ ಕೂಗು ಕೇಳಿಬರುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ;

(ಉ) ಪಶ್ಚಿಮ ವಾಹಿನಿ ಯೋಜನೆ ಅನುಷ್ಠಾನಕ್ಕೆ ಸರ್ಕಾರ ಹಿಂದೇಟು ಹಾಕುತ್ತಿರುವುದು ಸರಿಯೇ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಂಚಾರ ನಿಯಮ ಉಲ್ಲಂಘನೆ ಆಗುತ್ತಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೮೯೫ (೧೦೬೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಗಳೂರು ನಗರ ವ್ಯಾಪ್ತಿಯಲ್ಲಿ ಸಂಚಾರಿ ದಟ್ಟಣೆಯನ್ನು ನಿಯಂತ್ರಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಂಚಾರ ನಿಯಮ ಉಲ್ಲಂಘನೆ ಮಾಡುವ ವಾಹನ ಚಾಲಕರ ವಿರುದ್ಧ ಎಷ್ಟು ಪ್ರಕರಣ ದಾಖಲಾಗಿದೆ ; ಯಾವ ಯಾವ ಪ್ರಕರಣಕ್ಕೆ ಒಳಗಾಗಿರುತ್ತಾರೆ ; (ವಿವರ ನೀಡುವುದು)

(ಇ) ಸುಗಮ ಸಂಚಾರಕ್ಕೆ ಮಂಗಳೂರು ನಗರ ಪೊಲೀಸ್‌ರ ಮುಂದಿರುವ ಯೋಜನೆಗಳಾವುವು ; ರಸ್ತೆ ಅಪಘಾತ ತಡೆಗಟ್ಟುವ ಸಲುವಾಗಿ ಸರ್ಕಾರ ಕೈಗೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಗ್ರೇಟರ್ ಬೆಂಗಳೂರು ಅಥಾರಿಟಿಯಲ್ಲಿ ಆಸ್ತಿಗಳ ಡಿಜಿಟಲೀಕರಣದ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೬ (೧೦೧೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರೇಟರ್ ಬೆಂಗಳೂರು ಅಥಾರಿಟಿಗೆ ಸೇರಿದ ಐದು ಬೆಂಗಳೂರು ಮಹಾನಗರ ಪಾಲಿಕೆಗಳಲ್ಲಿ ಇಲ್ಲಿಯವರೆಗೂ ಎಷ್ಟು ಆಸ್ತಿಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ; (ಪಾಲಿಕೆವಾರು ಮಾಹಿತಿ ಒದಗಿಸುವುದು)

(ಆ) ಇ–ಖಾತಾ ಅಭಿಯಾನದಡಿ ಇಲ್ಲಿಯವರೆಗೂ ಎ–ಖಾತಾಗಾಗಿ ಸಾರ್ವಜನಿಕರಿಂದ ಸ್ವೀಕೃತಗೊಂಡ ಅರ್ಜಿಗಳ ಸಂಖ್ಯೆ ಎಷ್ಟು; ಸ್ವೀಕರಿಸಿದ ಅರ್ಜಿಗಳಲ್ಲಿ ಎ–ಖಾತಾ ನೀಡಿರುವ ಸಂಖ್ಯೆ ಎಷ್ಟು; (ಪಾಲಿಕೆವಾರು ಮಾಹಿತಿ ಒದಗಿಸುವುದು)

(ಇ) ಎ–ಖಾತೆಗಾಗಿ ಅರ್ಜಿ ಸ್ವೀಕರಿಸಿದ ಇಂತಿಷ್ಟು ದಿನಗಳೊಳಗಾಗಿ ಖಾತಾ ವಿತರಣೆ ಮಾಡಲು ಸಮಯವನ್ನು ನಿಗದಿಪಡಿಸಲಾಗಿದೆಯೇ; ಹಾಗೂ ನಿಗದಿಪಡಿಸಿದ ಅವಧಿಯೊಳಗೆ ಖಾತೆ ವಿತರಣೆ ಮಾಡದ ಅಧಿಕಾರಿ/ನೌಕರರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರಣೆ ನೀಡುವುದು)

(ಈ) ನಂಬಿಕೆ ನಕ್ಷೆ ಯೋಜನೆಯಡಿಯಲ್ಲಿ ಇಲ್ಲಿಯ ತನಕ ಸ್ವೀಕೃತಿಗೊಂಡ ಅರ್ಜಿಗಳ ಸಂಖ್ಯೆ ಎಷ್ಟು ; ಹಾಗೂ ವಿತರಣೆ ಮಾಡಿರುವ ನಕ್ಷೆಗಳ ಸಂಖ್ಯೆ ಎಷ್ಟು ; (ಪಾಲಿಕೆವಾರು ಮಾಹಿತಿಯನ್ನು ಒದಗಿಸುವುದು) ಹಾಗೂ ಈ ನಂಬಿಕೆ ನಕ್ಷೆ ವಿತರಿಸಲು ಸಮಯವಕಾಶವನ್ನು ನಿಗದಿಪಡಿಸಲಾಗಿದೆಯೇ ?

## ಬೆಂಗಳೂರಿನಲ್ಲಿ ಅಕ್ರಮ ವಲಸಿಗರು ನೆಲೆಸಿರುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೭ (೧೦೧೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರಾಜಧಾನಿ ಬೆಂಗಳೂರಿನಲ್ಲಿ ಎಷ್ಟು ಲಕ್ಷ ಜನ ಅಕ್ರಮ ವಲಸಿಗರು ನೆಲೆಸಿದ್ದಾರೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಮಾನ್ಯತೆ ಹೊಂದಿದ ಅಧಿಕೃತ ವೀಸಾ, ಪಾಸ್‌ಪೋರ್ಟ್ ಇಲ್ಲದೆ ಹಾಗೂ ವಿದೇಶಿಯರ ಪ್ರಾದೇಶಿಕ ಅಧಿಕಾರಿ(ಎಫ್.ಆರ್.ಆರ್.ಒ) ಕಛೇರಿಯಲ್ಲಿ ನೋಂದಣಿ ಮಾಡಿಸದೆ ಬೆಂಗಳೂರು ಮಹಾನಗರದಲ್ಲಿ ಅಕ್ರಮವಾಗಿ ಉಳಿದುಕೊಂಡಿರುವ ವಿದೇಶಿ ಪ್ರಜೆಗಳನ್ನು ಹೊರ ಹಾಕಲು ಗೃಹ ಇಲಾಖೆ ವಿಫಲವಾಗಿ ಕರ್ತವ್ಯ ಲೋಪವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕಾನೂನು ರೀತಿಯ ಕಠಿಣ ಕ್ರಮಗಳೇನು ; (ವಿವರ ನೀಡುವುದು)

(ಇ) ಅಕ್ರಮವಾಗಿ ನೆಲೆಸಿರುವ ವಿದೇಶಿಯರಿಂದ ದೇಶದ ಮತ್ತು ರಾಜ್ಯದ ಭದ್ರತೆಗೆ ಅಪಾಯವಿರುವ ಕುರಿತು ಹಾಗೂ ಇಂತಹ ಪ್ರಕರಣಗಳಲ್ಲಿ ರಾಜ್ಯ ಸರ್ಕಾರ ಜಾಣತನದ ಮೌನ ಪ್ರದರ್ಶಿಸುತ್ತಿರುವುದು ಹಾಗೂ ಮೂಕ ಪ್ರೇಕ್ಷಕನಾಗಿರಲು ಕಾರಣವೇನು ; (ವಿವರಣೆ ನೀಡುವುದು)

(ಈ) ಅಕ್ರಮ ವಿದೇಶಿಗರ ವಿರುದ್ಧ ಮಾದಕ ದ್ರವ್ಯ ನಿಗ್ರಹ ಕಾಯಿದೆ ೧೯೮೫(ಎನ್.ಡಿ.ಪಿ.ಎಸ್) ಅಡಿಯಲ್ಲಿ ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆಯೇ ; (ವಿವರ ನೀಡುವುದು)

(ಉ) ಇಲ್ಲಿಯವರೆಗೆ ರಾಜ್ಯದಲ್ಲಿರುವ ಎಷ್ಟು ಅಕ್ರಮ ವಿದೇಶಿಗರನ್ನು ಹೊರಹಾಕಲಾಗಿದೆ ? (ಮಾಹಿತಿ ಒದಗಿಸುವುದು)

## ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ ಯೋಜನೆ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯೮ (೧೦೧೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಬೆಂಗಳೂರು ಬ್ಯುಸಿನೆಸ್ ಕಾರಿಡಾರ್ (ಬಿಬಿಸಿ) ಯೋಜನೆಯನ್ನು ಜಾರಿಗೊಳಿಸುತ್ತಿದೆಯೇ ; ಹಾಗಿದ್ದಲ್ಲಿ, ಇದರ ರೂಪುರೇಷೆಗಳೇನು ; (ಸಂಪೂರ್ಣ ಮಾಹಿತಿಯೊಂದಿಗೆ ವಿವರ ನೀಡುವುದು)

(ಆ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಪ್ರತ್ಯೇಕವಾಗಿ ಬ್ಯುಸಿನೆಸ್ ಕಾರಿಡಾರ್ ಲಿಮಿಟೆಡ್ ಕಾರಿದಾರ್ (ಬಿಬಿಸಿಎಲ್)ಸ್ಥಾಪನೆ ಮಾಡಲಾಗಿದೆಯೇ ಹಾಗೂ ಈ ಬಿಬಿಸಿಎಲ್‌ಗೆ ಕೊಟ್ಟಿರುವ ಅಧಿಕಾರಗಳೇನು ಮತ್ತು ಕಾರ್ಯವೈಖರಿಗಳೇನು ; (ವಿವರ ನೀಡುವುದು)

(ಇ) ಈ ಯೋಜನೆಯು ರಸ್ತೆ ವಿನ್ಯಾಸ, ಪರಿಷ್ಕೃತ ಡಿ.ಪಿ.ಆರ್.ತಯಾರಿಸಲು ಯಾವ ಸಂಸ್ಥೆಯ ತಜ್ಞರ ತಂಡಕ್ಕೆ ವಹಿಸಲಾಗಿದೆ; ಇದಕ್ಕೆ ತಗಲುವ ವೆಚ್ಚವೆಷ್ಟು ; (ಎಲ್ಲಾ ಮಾಹಿತಿಯೊಂದಿಗೆ ವಿವರ ನೀಡುವುದು)

(ಈ) ಈ ಯೋಜನೆಗೆ ಒಟ್ಟು ಬೇಕಾಗುವ ಅನುದಾನವೆಷ್ಟು; ಈ ಅನುದಾನವನ್ನು ಯಾವ ಮೂಲಗಳಿಂದ ಭರಿಸಲಾಗುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ಒಟ್ಟಾರೆಯಾಗಿ ಈ ಯೋಜನೆಯ ಕಾಮಗಾರಿಯನ್ನು ಪೂರ್ಣಗೊಳಿಸಲು ಎಷ್ಟು ಸಮಯ ಬೇಕಾಗಬಹುದು ? (ವಿವರ ನೀಡುವುದು)

## ಬೆಂಗಳೂರು ಪಶ್ಚಿಮ ಮಹಾನಗರ ಪಾಲಿಕೆಯಲ್ಲಿ ಕಾಮಗಾರಿಗಳ ಅನುಷ್ಠಾನದ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೯ (೧೦೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಪಶ್ಚಿಮ ಮಹಾನಗರ ಪಾಲಿಕೆಯಲ್ಲಿ ಕಾಮಗಾರಿಗಳ ಅನುಷ್ಠಾನ/ನಿರ್ವಹಣೆ/ಉಸ್ತುವಾರಿಗಾಗಿ ಎಷ್ಟು ವಿಭಾಗಗಳನ್ನು ಹಾಗೂ ಎಷ್ಟು ಉಪ ವಿಭಾಗಗಳನ್ನು ರಚನೆ ಮಾಡಲಾಗಿದೆ; (ವಿಧಾನ ಸಭೆಯ ಕ್ಷೇತ್ರವಾರು ಸಂಪೂರ್ಣ ಮಾಹಿತಿ ಒದಗಿಸುವುದು) ಹಾಗೂ ರಚನೆ ಮಾಡಿರುವ ವಿಭಾಗ, ಉಪ ವಿಭಾಗಗಳಿಗೆ ನೇಮಿಸಲಾದ ಅಧಿಕಾರಿ/ಸಿಬ್ಬಂದಿಗಳ (ಇಂಜಿನಿಯರ್‌ಗಳನ್ನು ಒಳಗೊಂಡಂತೆ) ವಿವರಗಳೇನು ; (ವಿಧಾನ ಸಭೆಯ ಕ್ಷೇತ್ರವಾರು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಈ ಮಹಾನಗರ ಪಾಲಿಕೆಯಲ್ಲಿ ರಚನೆ ಮಾಡಿರುವ ವಿಭಾಗಗಳಲ್ಲಿ ಮತ್ತು ಉಪ ವಿಭಾಗಗಳಲ್ಲಿ ಪೂರ್ಣ ಪ್ರಮಾಣದ ಅಧಿಕಾರಿ/ ಸಿಬ್ಬಂದಿ ವರ್ಗದವರು ಇದ್ದಾರೆಯೇ ;

(ಇ) ಇಲ್ಲದಿದ್ದಲ್ಲಿ, ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಪೂರ್ಣ ಪ್ರಮಾಣದ ಅಧಿಕಾರಿಗಳನ್ನು ಯಾವಾಗ ನೇಮಿಸಲಾಗುವುದು ;

(ಈ) ಹಾಗೆಯೇ ಬೆಂಗಳೂರು ಪಶ್ಚಿಮ ಮಹಾನಗರ ಪಾಲಿಕೆಯಲ್ಲಿ ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ ಸಿಬ್ಬಂದಿಗಳ ವಿವರಗಳನ್ನು ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ಮಾಹಿತಿ ಒದಗಿಸುವುದು ?

## ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೦೦ (೧೦೧೭) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಡಿ ಸಣ್ಣ ನೀರಾವರಿ ಇಲಾಖೆಗೆ ನೀಡಿರುವ ಅನುದಾನವೆಷ್ಟು ; ನೀಡಿರುವ ಅನುದಾನದಲ್ಲಿ ಜಿಲ್ಲಾವಾರು ಹಂಚಿಕೆ ಮಾಡಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಬೆಂಗಳೂರು ನಗರ ಜಿಲ್ಲೆಗೆ ನೀಡಿರುವ ಅನುದಾನದಲ್ಲಿ ಯಶವಂತಪುರ ವಿಧಾನ ಸಭಾ ಕ್ಷೇತ್ರಕ್ಕೆ ಯಾವ ಯಾವ ಕಾಮಗಾರಿಗಳಿಗೆ ಅನುದಾನವನ್ನು ನೀಡಲಾಗಿದೆ ; (ವಿವರಗಳೊಂದಿಗೆ ಮಾಹಿತಿ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆಯ ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ಬರುವ ಯಾವ ಯಾವ ಕೆರೆಗಳನ್ನು ದುರಸ್ತಿ ಪಡಿಸಲಾಗಿದೆ ; ಇದಕ್ಕೆ ನೀಡಿರುವ ಅನುದಾನವೆಷ್ಟು ? (ವಿವರದೊಂದಿಗೆ ಮಾಹಿತಿ ನೀಡುವುದು)

# ರಾಜ್ಯ ಸರ್ಕಾರದ ಸಾಲಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೧ (೧೦೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ ರಾಜ್ಯ ಸರ್ಕಾರ ಪಡೆದ ಒಟ್ಟು ಸಾಲ ಎಷ್ಟು ; ಪ್ರಸ್ತುತ ರಾಜ್ಯದ ಒಟ್ಟು ಸಾರ್ವಜನಿಕ ಸಾಲದ ಪ್ರಮಾಣ ಎಷ್ಟು ; ಇದರಿಂದಾಗಿ ಪ್ರತಿಯೊಬ್ಬ ನಾಗರೀಕನ ಮೇಲಿನ ತಲಾ ಸಾಲದ ಹೊರೆ ಎಷ್ಟು ರೂಪಾಯಿಗಳಾಗಿವೆ ; (ವರ್ಷವಾರು ವಿವರವನ್ನು ನೀಡುವುದು)

(ಆ) ಸರ್ಕಾರವು ಪಡೆದ ಸಾಲದಲ್ಲಿ ಎಷ್ಟು ಮೊತ್ತ ಅಭಿವೃದ್ಧಿ ಯೋಜನೆಗಳಿಗೆ ಹಾಗೂ ಎಷ್ಟು ಮೊತ್ತ ಆಡಳಿತಾತ್ಮಕ ವೆಚ್ಚಗಳಿಗೆ ಬಳಸಲಾಗಿದೆ ; (ವಿಭಾಗವಾರು ವಿವರ ನೀಡುವುದು)

(ಇ) ಹಣಕಾಸು ಹೊಣೆಗಾರಿಕೆ ಮತ್ತು ಬಜೆಟ್ ನಿರ್ವಹಣಾ ನಿಯಮಾವಳಿಗಳ (FRBM) ಮಿತಿಗಳನ್ನು ಸರ್ಕಾರ ಪಾಲಿಸುತ್ತಿದೆಯೇ ; ಮೀರಿದ್ದರೆ, ಅದಕ್ಕೆ ಕಾರಣವೇನು ;

(ಈ) ರಾಜ್ಯದ ಆದಾಯ ವೃದ್ಧಿಗೆ ತೆರಿಗೆ ಸಂಗ್ರಹ ಸಾಮರ್ಥ್ಯ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ;

(ಉ) ಹೆಚ್ಚುತ್ತಿರುವ ಸಾಲದ ಬಡ್ಡಿ ಪಾವತಿಗಾಗಿ ವರ್ಷಕ್ಕೆ ಎಷ್ಟು ಮೊತ್ತ ವೆಚ್ಚವಾಗುತ್ತಿದೆ ; ಇದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿದೆಯೇ ;

(ಊ) ರಾಜ್ಯದ ಆರ್ಥಿಕ ಸ್ಥಿತಿಯನ್ನು ಸುಸ್ಥಿತಿಗೆ ತರುವ ಉದ್ದೇಶದಿಂದ ಮಧ್ಯಾವಧಿ ಹಾಗೂ ಧೀರ್ಘಾವಧಿ ಹಣಕಾಸು ಪುನರ್ ರಚನಾ ಯೋಜನೆಯನ್ನು ಸರ್ಕಾರ ರೂಪಿಸಿರುವುದೇ; ರೂಪಿಸಿದ್ದರೆ, ಅದರ ಮುಖ್ಯ ಅಂಶಗಳು ಯಾವುವು ; ಮುಂದಿನ ದಿನಗಳಲ್ಲಿ

ಸಾಲದ ಅವಲಂಬನೆ ಕಡಿಮೆ ಮಾಡಿ, ಆದಾಯ ಮೂಲಗಳನ್ನು ವಿಸ್ತರಿಸುವ ಸ್ಪಷ್ಟ ಕಾರ್ಯಯೋಜನೆಯನ್ನು ಸರ್ಕಾರ ರಚಿಸಿದೆಯೇ ?

## ವಿವಿಧ ಇಲಾಖೆಗಳಲ್ಲಿ ಭ್ರಷ್ಟಾಚಾರ ನಡೆದಿರುವ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೨ (೧೦೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಭ್ರಷ್ಟಾಚಾರ ಮಿತಿಮೀರಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ಮೂರು ವರ್ಷಗಳಲ್ಲಿ ಇಲಾಖಾವಾರು ಎಷ್ಟು ಭ್ರಷ್ಟಾಚಾರದ ಪ್ರಕರಣಗಳು ದಾಖಲಾಗಿವೆ ; (ಇಲಾಖೆ ಮತ್ತು ಹುದ್ದೆವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಸರ್ಕಾರದ ವಿವಿಧ ದರ್ಜೆಯ ಅಧಿಕಾರಿಗಳ ವಿರುದ್ಧ ಲೋಕಾಯುಕ್ತ ಸಂಸ್ಥೆಯು ದಾಳಿ ಮಾಡಿ ಬಂಧಿಸಿದ ಪ್ರಕರಣಗಳು ಎಷ್ಟು ; ಸದರಿ ದಾಳಿ ವೇಳೆಯಲ್ಲಿ ಪತ್ತೆಯಾದ ಅಕ್ರಮ ಆಸ್ತಿಗಳ ಮೌಲ್ಯ ಎಷ್ಟು ;

(ಇ) ಭ್ರಷ್ಟಾಚಾರ ಪ್ರಕರಣದಲ್ಲಿ ಎಷ್ಟು ಅಧಿಕಾರಿಗಳು/ಸಿಬ್ಬಂದಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ; ಎಷ್ಟು ಪ್ರಕರಣಗಳು ಇಲಾಖಾ ವಿಚಾರಣೆಯಲ್ಲಿವೆ ಹಾಗೂ ಎಷ್ಟು ಪ್ರಕರಣಗಳು ನ್ಯಾಯಾಲಯದ ವಿಚಾರಣೆಯಲ್ಲಿವೆ ; ಎಷ್ಟು ಪ್ರಕರಣಗಳು ಇಲಾಖೆ ಮತು ನ್ಯಾಯಾಲಯ ಹಂತದಲ್ಲಿ ಖುಲಾಸೆಗೊಂಡಿದೆ ;

(ಈ) ಸರ್ಕಾರಿ ಕಛೇರಿಗಳಲ್ಲಿ ಭ್ರಷ್ಟಾಚಾರ ನಿಯಂತ್ರಣಕ್ಕಾಗಿ ಸರ್ಕಾರ ಕೈಗೊಂಡಿರುವ ನಿರ್ದಿಷ್ಟ ಕ್ರಮಗಳು ಯಾವುವು ;

(ಉ) ವಿವಿಧ ಇಲಾಖೆಗಳ ಸಕಾಲ ಕಾಯ್ದೆಯಡಿ ನೀಡುತ್ತಿರುವ ಒಟ್ಟು ಸೇವೆಗಳು ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಸಕಾಲ ಕಾಯ್ದೆ ಉಲ್ಲಂಘನೆಗಾಗಿ ವಿಧಿಸಲಾದ ಮತ್ತು ವಸೂಲಿಯಾದ ದಂಡದ ಮೊತ್ತ ಎಷ್ಟು ;

(ಊ) ಸರ್ಕಾರದ ಯಾವೆಲ್ಲ ಇಲಾಖೆಗಳಲ್ಲಿ ಹಾಜರಾತಿಗೆ ಬಯೋ ಮೆಟ್ರಿಕ್ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ ; ಜಾರಿಗೊಳಿಸಲಾದ ದಿನಾಂಕ ಯಾವುದು ; ಯಾವ ಇಲಾಖೆಯಲ್ಲಿ ಇನ್ನೂ ಬಯೋ ಮೆಟ್ರಿಕ್ ಹಾಜರಾತಿ ಜಾರಿಗೊಳಿಸಲು ಬಾಕಿ ಇದೆ ; ಈವರೆಗೂ ಜಾರಿಗೊಳಿಸದಿರಲು ಕಾರಣವೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಮರ್ಯಾದೆಗೇಡು ಹತ್ಯೆಗಳ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೩ (೧೦೮೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮರ್ಯಾದೆಗೇಡು ಹತ್ಯೆಗಳ (Honor Killing) ಪ್ರಕರಣಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಕಳೆದ ಐದು ವರ್ಷಗಳಲ್ಲಿ ಎಷ್ಟು ಮರ್ಯಾದೆಗೇಡು ಹತ್ಯೆ ಪ್ರಕರಣಗಳು ದಾಖಲಾಗಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಪ್ರಕರಣಗಳಲ್ಲಿ ಎಷ್ಟು ಆರೋಪಿಗಳನ್ನು ಬಂಧಿಸಲಾಗಿದೆ ; ಎಷ್ಟು ದೋಷಾರೋಪ ಪಟ್ಟಿ ಸಲ್ಲಿಸಲಾಗಿದೆ ; ಎಷ್ಟು ನ್ಯಾಯಾಲಯಗಳು ತೀರ್ಪು ನೀಡಿವೆ ;

(ಈ) ಸರ್ಕಾರವು ಮರ್ಯಾದೆಗೇಡು ಹತ್ಯೆಗಳನ್ನು ತಡೆಯಲು ಯಾವುದೇ ಕಠಿಣ ಕಾನೂನು ಅಥವಾ ಪ್ರಾಮಾಣಿತ ಕಾರ್ಯಾಚರಣೆ ವಿಧಾನ (SOP) ಮಾಡಲಾಗಿದೆಯೇ ;

(ಉ) ಪ್ರೇಮ ವಿವಾಹ, ಅಂತರ್ಜಾತಿ ವಿವಾಹ ಮುಂತಾದ ವಿವಾಹಗಳ ಹಿನ್ನಲೆಯಲ್ಲಿ ಜೀವಭಯ ಹೊಂದಿರುವ ದಂಪತಿಗಳಿಗೆ ರಕ್ಷಣೆ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಜಿಲ್ಲಾ ಮಟ್ಟದಲ್ಲಿ ಸುರಕ್ಷತಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ ; ಇಂತಹ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಮದ್ಯ ಮಾರಾಟ ಮಳಿಗೆಗಳ ಪರವಾನಿಗೆ ಮತ್ತು ನವೀಕರಣ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೪ (೧೦೮೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮದ್ಯ ಮಾರಾಟ ಮಳಿಗೆ ಮತ್ತು ಹೋಟಲ್‌ಗಳನ್ನು ನಡೆಸಲು ಸರ್ಕಾರದಿಂದ ನೀಡುತ್ತಿರುವ ವಿವಿಧ ರೀತಿಯ ಪರವಾನಿಗೆಗಳು ಯಾವುವು ಮತ್ತು ಅವುಗಳಿಗೆ ವಿಧಿಸುತ್ತಿರುವ ಪರವಾನಿಗೆ ಶುಲ್ಕವೆಷ್ಟು ; ವಿವಿಧ ರೀತಿಯ ಪರವಾನಿಗೆಗಳನ್ನು ವಾರ್ಷಿಕವಾಗಿ ನವೀಕರಿಸಲು ವಿಧಿಸಲಾಗುತ್ತಿರುವ ಶುಲ್ಕವೆಷ್ಟು ; ಈಗಾಗಲೇ ವಿತರಿಸಲಾದ ಪರವಾನಿಗೆಗಳಿಗೆ ವಿಧಿಸಲಾಗುತ್ತಿರುವ ಶುಲ್ಕಗಳು ಎಷ್ಟು ;

(ಆ) ಕಳೆದ ಮೂರು ವರ್ಷದಲ್ಲಿ ಅಬಕಾರಿ ಇಲಾಖೆಯು ಮದ್ಯದ ಮಾರಾಟ ಸನ್ನದುದಾರರಿಂದ ಸಂಗ್ರಹಿಸಿದ ಒಟ್ಟು ಶುಲ್ಕಗಳು ಮತ್ತು ಇತರೆ ವಸೂಲಾತಿ ಎಷ್ಟು ಹಾಗೂ ೨೦೨೩–೨೪ನೇ ಸಾಲಿನಿಂದ ಇಲ್ಲಿಯವರೆಗೆ ಹೊಸದಾಗಿ ವಿತರಿಸಲಾದ ವಿವಿಧ

ರೀತಿಯ ಪರವಾನಿಗೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) MSIL ಹೊಂದಿರುವ ಒಟ್ಟು ಪರವಾನಿಗೆಗಳು ಎಷ್ಟು; ೨೦೨೩-೨೪ನೇ ಸಾಲಿನಿಂದ ಇಲ್ಲಿಯವರೆಗೆ ತೆರೆಯಲಾದ ಹೊಸ MSIL ಮಳಿಗೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಳೆದ ೦೩ ವರ್ಷಗಳಲ್ಲಿ ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರದ ಬಗ್ಗೆ ಸರ್ಕಾರಕ್ಕೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು ; ಪ್ರತಿ ತಿಂಗಳು ಸನ್ನದುದಾರರಿಂದ ಅಧಿಕಾರಿಗಳು ಲಂಚ ಸ್ವೀಕರಿಸುತ್ತಿರುವ ಬಗ್ಗೆ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ತಪ್ಪಿತಸ್ಥರ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ ;

(ಉ) ಕಳೆದ ಐದು ವರ್ಷಗಳಲ್ಲಿ ಅಬಕಾರಿ ಇಲಾಖೆಯ ಅಧಿಕಾರಿಗಳು/ ಸಿಬ್ಬಂದಿಗಳ ವಿರುದ್ಧ ದಾಖಲಾದ ಭ್ರಷ್ಟಾಚಾರದ ಪ್ರಕರಣಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಪ್ರಕರಣಗಳಿಗೆ ಶಿಕ್ಷೆ ವಿಧಿಸಲಾಗಿದೆ ;

(ಊ) ಅಬಕಾರಿ ಇಲಾಖೆಯಲ್ಲಿ ಪಾರದರ್ಶಕತೆ ಮತ್ತು ಜವಾಬ್ದಾರಿತ್ವ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಸುಧಾರಣಾ ಕ್ರಮಗಳು ಯಾವುವು ;

(ಋ) ಭ್ರಷ್ಟಾಚಾರ ತಡೆಗಟ್ಟಲು ತಂತ್ರಜ್ಞಾನ ಆಧಾರಿತ ವ್ಯವಸ್ಥೆಗಳು (Online licensing, e-auction, tracking system) ಸಂಪೂರ್ಣವಾಗಿ ಜಾರಿಗೊಂಡಿದೆಯೇ ?

## ಕೊಡಗು ಜಿಲ್ಲೆಯ ಕೊಡವ ಹೆರಿಟೇಜ್ ಕಾಮಗಾರಿಯ ಕುರಿತು

**ಶ್ರೀ ಕುಶಾಲಪ್ಪ ಎಂ. ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೫ (೧೦೧೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಹೆರಿಟೇಜ್ ಕಾಮಗಾರಿಯು ವಿಳಂಬವಾಗಲು ಕಾರಣವೇನು ;

(ಆ) ೨೦೨೫–೨೬ ನೇ ಸಾಲಿನಲ್ಲಿ ಮಾನ್ಯ ಮುಖ್ಯಮಂತ್ರಿಗಳು ಆಯವ್ಯಯ ಘೋಷಣೆಯಲ್ಲಿ ರಾಜ್ಯದ ಆಯ್ದ ೧೦ ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸುವುದು ಎಂದು ಘೋಷಿಸಲಾಗಿದ್ದು ಈ ಪೈಕಿ ಕೊಡಗು ಜಿಲ್ಲೆಯ ಕೊಡವ ಹೆರಿಟೇಜ್ ಕೇಂದ್ರವನ್ನು ಅಂದಾಜು ಮೊತ್ತ ರೂ.೫.೦೦ ಕೋಟಿಗಳಲ್ಲಿ ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಯಾವ ಹಂತದಲ್ಲಿದೆ ;

(ಇ) ಈ ಯೋಜನೆಗೆ ಸಂಬಂಧಿಸಿದಂತೆ ರೂ.೫.೦೦ ಕೋಟಿಗಳಿಗೆ ಮೀರದಂತೆ ವಿಸ್ತೃತ ಯೋಜನಾ ವರದಿಯನ್ನು (ಡಿ.ಪಿ.ಆರ್) ಸಿದ್ದ ಪಡಿಸಲು ಯಾವ ದಿನಾಂಕದಂದು, ಯಾರಿಗೆ ಜವಾಬ್ದಾರಿ ನೀಡಲಾಗಿದೆ ; ಕೋರಿಕೆಯಂತೆ ಡಿ.ಪಿ.ಆರ್ ಸಿದ್ದಪಡಿಸಿ ಸರ್ಕಾರಕ್ಕೆ ನೀಡಲಾಗಿದೆಯೇ ; ನೀಡಿದ್ದಲ್ಲಿ, ಅಂದಾಜು ಎಷ್ಟು ಮೊತ್ತದ ಡಿ.ಪಿ.ಆರ್ ಸಿದ್ದ ಪಡಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಡಿ.ಪಿ.ಆರ್ ಸಲ್ಲಿಕೆಯ ನಂತರ ಕೈಗೊಂಡಿರುವ ಕ್ರಮಗಳೇನು ; ಟೆಂಡರ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದೆಯೇ ; (ಮಾಹಿತಿ ನೀಡುವುದು)

(ಉ) ಯಾವ ಕಾಲಮಿತಿಯೊಳಗೆ ಕೊಡವ ಹೆರಿಟೇಜ್ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸುವ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೦೬ (೧೦೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ಇಲಾಖೆಯಡಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಯಾವ ವೃಂದದ ಹುದ್ದೆಗಳು ಖಾಲಿ ಇವೆ ; (ಮಾಹಿತಿ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳಲ್ಲಿ ಈಗಾಗಲೇ ಎಷ್ಟು ಹುದ್ದೆಗಳನ್ನು ಮತ್ತು ಯಾವ ಯಾವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗಿದೆ (ಅಧಿಸೂಚನೆ ಸಹಿತ ಮಾಹಿತಿ ನೀಡುವುದು) ಯಾವ ಕಾರಣಕ್ಕಾಗಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಿರುವುದಿಲ್ಲ ; (ಮಾಹಿತಿ ನೀಡುವುದು)

(ಇ) ಯಾವಾಗ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ವಹಿಸಲಾಗುವುದು ; ಭರ್ತಿ ಮಾಡಲು ಇದೇ ರೀತಿ ವಿಳಂಬವಾದಲ್ಲಿ ನಿರುದ್ಯೋಗ ಯುವಕ–ಯುವತಿಯರ ವಯಸ್ಸು ಮೀರುತ್ತಿರುವುದರಿಂದ ವಯೋಮಿತಿ ಸಡಿಲಿಕೆ ಮಾಡಲಾಗುವುದೇ ಅಥವಾ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಮಾಹಿತಿ ನೀಡುವುದು ;

(ಈ) ವಯೋಮಿತಿ ಸಡಿಲಿಕೆ ಮಾಡಿ ಕೆಲವೇ ಹುದ್ದೆಗಳನ್ನು ಭರ್ತಿ ಮಾಡಲು ಅಧಿಸೂಚನೆ ಹೊರಡಿಸಿದ್ದಲ್ಲಿ, ಲಕ್ಷಾಂತರ ನಿರುದ್ಯೋಗಿಗಳಿಗೆ ಅನ್ಯಾಯ ಮಾಡಿದಂತಾಗುವುದಿಲ್ಲವೇ; ಈ ಹಿನ್ನೆಲೆಯಲ್ಲಿ ಆಯಾ ಇಲಾಖೆಗಳು ಖಾಲಿ ಇರುವ ಹುದ್ದೆಗಳನ್ನು

ಭರ್ತಿ ಮಾಡಲು ಅಧಿಸೂಚನೆ ಹೊರಡಿಸುವ ದಿನಾಂಕದಿಂದ ವಯೋಮಿತಿ ಸಡಿಲಿಕೆಯ ಆದೇಶವನ್ನು ಪರಿಗಣಿಸಲು ಅರ್ಜಿ ಸಲ್ಲಿಸುವ ಆಕಾಂಕ್ಷಿಗಳಿಗೆ ಅನುವು ಮಾಡಿಕೊಡಲು ಸರ್ಕಾರ ಕ್ರಮ ವಹಿಸುವುದೇ ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವವರ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೦೭ (೧೦೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾನ್ಯತೆ ಹೊಂದಿದ ವೀಸಾ, ಪಾಸ್‌ಪೋರ್ಟ್ ಅವಧಿ ಮುಗಿದರೂ ಅಕ್ರಮವಾಗಿ ರಾಜ್ಯದಲ್ಲಿ ವಿದೇಶಿಯರು ನೆಲೆಸಿರುವುದು ಹಾಗೂ ವಿವಿಧ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮಗಳೇನು ;

(ಆ) ರಾಜ್ಯದಲ್ಲಿ ವೀಸಾ, ಪಾಸ್‌ಪೋರ್ಟ್ ಅವಧಿ ಇರುವ ಮತ್ತು ಅವಧಿ ಮೀರಿದ್ದರೂ ಅಕ್ರಮವಾಗಿ ನೆಲೆಸಿರುವ ವಿದೇಶಿಯರ ಸಂಖ್ಯೆ ಎಷ್ಟು; ಹಾಗೂ ದೇಶದೊಳಗೆ ಅಕ್ರಮವಾಗಿ ನುಸುಳಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಗರ ಸಂಖ್ಯೆ ಎಷ್ಟು; ಇದರಲ್ಲಿ ಯಾವ ಯಾವ ದೇಶದವರು ಇದ್ದಾರೆ, ಅವರ ಸಂಖ್ಯೆ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ಎಷ್ಟು ಮಂದಿ ವಿದೇಶಿಗರನ್ನು ರಾಜ್ಯದಿಂದ ವಾಪಸ್ಸು ಕಳುಹಿಸಲಾಗಿದೆ ;

(ಈ) ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿರುವ ವಿದೇಶಿಯರ ಸಂಖ್ಯೆ ಎಷ್ಟು; ಇವರು ಯಾವ ದೇಶದವರು ; ಯಾವ ರೀತಿಯ ಅಪರಾಧ ಕೃತ್ಯಗಳಲ್ಲಿ ಭಾಗಿಯಾಗಿದ್ದಾರೆ ? (ಸಂಪೂರ್ಣ ಮಾಹಿತಿ ನೀಡುವುದು)

## ಹುಸಿ ಬಾಂಬ್ ಕರೆ/ಸಂದೇಶಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೦೮ (೧೦೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦ ರಿಂದ ಈವರೆಗೆ ರಾಜ್ಯದಲ್ಲಿ ಶಾಲಾ–ಕಾಲೇಜು, ನ್ಯಾಯಾಲಯ, ಹೋಟೆಲ್, ದೇಗುಲ, ವಿಮಾನ ಮತ್ತು ರೈಲು ನಿಲ್ದಾಣ, ರಾಯಭಾರಿ ಕಛೇರಿ ಸೇರಿದಂತೆ ಇನ್ನಿತರೆ ಸ್ಥಳಗಳಿಗೆ ಬಾಂಬ್ ಇರಿಸಿರುವ ಬಗ್ಗೆ ಬೆದರಿಕೆಯ ಕರೆ/ಇ–ಮೇಲ್ ಸಂದೇಶಗಳು ಬಂದಿರುವ ಬಗ್ಗೆ ದಾಖಲಾಗಿರುವ ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ಪ್ರಕರಣಗಳ ಸಂಖ್ಯೆಯ ಮಾಹಿತಿ ನೀಡುವುದು)

(ಆ) ಸ್ವೀಕೃತವಾಗಿರುವ ಕರೆ/ಇ–ಮೇಲ್ ಸಂದೇಶಗಳ ಹಿನ್ನೆಲೆಯಲ್ಲಿ ಯಾವುದಾದರೂ ಸ್ಥಳಗಳಲ್ಲಿ ಬಾಂಬ್ ಪತ್ತೆಯಾಗಿರುವುದು ಕಂಡುಬಂದಿದೆಯೇ ; ಇದ್ದಲ್ಲಿ, ವಿವರ ನೀಡುವುದು ; ಈ ರೀತಿಯ ಕರೆ/ಸಂದೇಶಗಳು ಹುಸಿ ಬೆದರಿಕೆಯೇ ;

(ಇ) ಈ ಅವಧಿಯಲ್ಲಿ ಸ್ವೀಕೃತವಾಗಿರುವ ಬೆದರಿಕೆ ಕರೆಗಳ ಪೈಕಿ ಎಷ್ಟು ಪ್ರಕರಣಗಳಲ್ಲಿ ದುಷ್ಕರ್ಮಿಗಳನ್ನು ಪತ್ತೆ ಹಚ್ಚಲಾಗಿದೆ ; ಅಂತಹವರ ವಿರುದ್ಧ ತೆಗೆದುಕೊಂಡಿರುವ ಕಾನೂನು ರೀತ್ಯಾ ಕ್ರಮಗಳೇನು ; ಎಷ್ಟು ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆ ಆಗಿದೆ ; (ವರ್ಷವಾರು, ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಈ) ಅಲ್ಲದೆ ಕೃಷ್ಣರಾಜಸಾಗರ ಅಣೆಕಟ್ಟು ಸೇರಿದಂತೆ ರಾಜ್ಯದಲ್ಲಿನ ಇನ್ನಿತರೆ ಜಲಾಶಯಗಳಲ್ಲೂ ಬಾಂಬ್ ಇರಿಸಿರುವ ಬಗ್ಗೆ ಬೆದರಿಕೆ ಕರೆಗಳು ಬಂದಿರುವ ಬಗ್ಗೆ ಪ್ರಕರಣಗಳಿವೆಯೇ ; ಅಣೆಕಟ್ಟೆಯಂತಹ ಪ್ರಮುಖ ಸ್ಥಳಗಳಿಗೆ ಭದ್ರತೆ ಹೆಚ್ಚಿಸಲಾಗಿದೆಯೇ ? (ವಿವರ ನೀಡುವುದು)

## ವಿಶ್ವೇಶ್ವರಯ್ಯ ನಾಲೆಯ ಅಪಘಾತ ವಲಯದ ಸ್ಥಳಗಳಲ್ಲಿ ತಡೆಗೋಡೆ ನಿರ್ಮಿಸುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೦೯ (೧೦೫೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ವಿಶ್ವೇಶ್ವರಯ್ಯ ನಾಲೆಯಲ್ಲಿ ನೀರು ಹರಿವಿನ ಉದ್ದ ಎಷ್ಟು; ಯಾವ ತಾಲ್ಲೂಕಿನಲ್ಲಿ ಎಷ್ಟು ಕಿ.ಮೀ ಉದ್ದ ನೀರು ಹರಿಯಲಿದೆ; (ಸಂಪೂರ್ಣ ವಿವರ ನೀಡುವುದು)

(ಆ) ವಿಶ್ವೇಶ್ವರಯ್ಯ ನಾಲೆ/ಕಾಲುವೆ ಹಾದುಹೋಗಿರುವ ಕೆಲವು ಸ್ಥಳಗಳು ಜಲದುರಂತಗಳಿಗೆ ಕಾರಣವಾಗುತ್ತಿರುವ ಹಿನ್ನೆಲೆಯಲ್ಲಿ ಅಗತ್ಯವಿರುವ ಕಡೆ ತಡೆಗೋಡೆ (ಕ್ರ್ಯಾಶ್ ಬ್ಯಾರಿಯರ್) ನಿರ್ಮಿಸಲು ಸರ್ಕಾರದ ಕ್ರಮಗಳೇನು ;

(ಇ) ಈವರೆವಿಗೂ ಎಷ್ಟು ಸ್ಥಳಗಳನ್ನು 'ಅಪಘಾತ ವಲಯ' ಎಂದು ಗುರುತಿಸಲಾಗಿದೆ ಹಾಗೂ ನಾಲಾ ವ್ಯಾಪ್ತಿಯಲ್ಲಿ ಎಷ್ಟು ಕಿ.ಮೀ ಉದ್ದದ ತಡೆಗೋಡೆ ನಿರ್ಮಿಸಲಾಗಿದೆ; ಇದಕ್ಕಾಗಿ ಭರಿಸಿರುವ ವೆಚ್ಚ ಎಷ್ಟು; (ವಿವರ ನೀಡುವುದು)

(ಈ) ಇನ್ನೂ ಎಷ್ಟು ಕಿ.ಮೀ ಉದ್ದ ನಾಲಾ ಆಸುಪಾಸಿನಲ್ಲಿ ತಡೆಗೋಡೆ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ; ಹೆಚ್ಚಿನ ಅನುದಾನ ಕೋರಿ ಸಲ್ಲಿಕೆಯಾಗಿದ್ದ ಪ್ರಸ್ತಾವನೆ ಕುರಿತು ಸರ್ಕಾರದ ಕ್ರಮಗಳೇನು ?

## ವಿಶ್ವ ಪಾರಂಪರಿಕ ತಾಣಗಳ ಪಟ್ಟಿಯಲ್ಲಿರುವ ಸ್ಥಳಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೯೧೦ (೧೦೫೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯುನೆಸ್ಕೋ ವಿಶ್ವ ಪಾರಂಪರಿಕ ತಾಣಗಳ ಪಟ್ಟಿಯಲ್ಲಿರುವ ಕರ್ನಾಟಕದ ಸ್ಥಳಗಳು ಯಾವುವು ; ತಾತ್ಕಾಲಿಕ ಪಟ್ಟಿಯಲ್ಲಿರುವ ತಾಣಗಳು ಯಾವುವು ; ಜಿಲ್ಲೆ, ಸ್ಥಳ, ಸೇರ್ಪಡೆ ವರ್ಷ ಒಳಗೊಂಡಂತೆ ಮಾಹಿತಿ ನೀಡುವುದು ;

(ಆ) ಹೊಸದಾಗಿ ಯಾವ್ಯಾವ ತಾಣಗಳು ಹಾಗೂ ಸ್ಮಾರಕಗಳ ಸಮೂಹವನ್ನು ಒಳಗೊಂಡ ಸ್ಥಳಗಳನ್ನು ವಿಶ್ವ ಪಾರಂಪರಿಕ ತಾಣಗಳ ಪಟ್ಟಿಗೆ ಅಥವಾ ತಾತ್ಕಾಲಿಕ ಪಟ್ಟಿಯಲ್ಲಿ ಸೇರ್ಪಡೆಗೆ ನಾಮನಿರ್ದೇಶನ ಪ್ರಸ್ತಾವನೆ ಸಲ್ಲಿಸಲು ಸರ್ಕಾರ ಕಾರ್ಯ ಯೋಜನೆ ರೂಪಿಸಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ನಾಮನಿರ್ದೇಶನ ಪ್ರಸ್ತಾವನೆಯನ್ನು ಯಾವ ಸಂಸ್ಥೆಗಳಿಂದ ಸಿದ್ಧಪಡಿಸಲಾಗಿದೆ ಅಥವಾ ಸಿದ್ಧಪಡಿಸಲಾಗುತ್ತಿದೆ ; ಇದಕ್ಕಾಗಿ ಮೀಸಲಿರಿಸಿದ ಮೊತ್ತ ಎಷ್ಟು ; ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; ಇದ್ದಲ್ಲಿ, ಈ ಕುರಿತು ಸಮಗ್ರ ಮಾಹಿತಿ ನೀಡುವುದು ?

## ರಾಜ್ಯದಲ್ಲಿ PM-JANMAN ಯೋಜನೆಯಡಿ ಬಿಡುಗಡೆಯಾದ ಅನುದಾನದ ಬಳಕೆ

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೧ (೧೧೧೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩–೨೪ ರಿಂದ ೨೦೨೫–೨೬ರ ಅವಧಿಯಲ್ಲಿ ರಾಜ್ಯಕ್ಕೆ ಕೇಂದ್ರ ಸರ್ಕಾರವು PM-JANMAN ಯೋಜನೆಯಡಿ ಸುಮಾರು ೨೯ ಕೋಟಿ ರೂ.ಗಳನ್ನು ಬಿಡುಗಡೆ ಮಾಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಬಿಡುಗಡೆಯಾದ ಒಟ್ಟು ೨೯ ಕೋಟಿ ರೂ.ಗಳ ಪೈಕಿ ಕೇವಲ ೩ ಕೋಟಿ ರೂ.ಗಳಿಗೆ ಮಾತ್ರ ಬಳಕೆಯ ಪ್ರಮಾಣ

ಪತ್ರವನ್ನು (Utilization Certificate) ಸಲ್ಲಿಸಲು ಕಾರಣಗಳೇನು ;

(ಇ) ರಾಜ್ಯದ 'ವಿಶೇಷವಾಗಿ ಹಿಂದುಳಿದ ಬುಡಕಟ್ಟು ಗುಂಪುಗಳ' (Particularly Vulnerable Tribal Groups-PVTGS) ಅಭಿವೃದ್ಧಿಗಾಗಿ ಈ ಯೋಜನೆಯಡಿ ಇದುವರೆಗೆ ಕೈಗೊಳ್ಳಲಾದ ಕಾರ್ಯಕ್ರಮಗಳು ಮತ್ತು ವ್ಯಯಿಸಲಾದ ಮೊತ್ತದ ವಿವರಗಳೇನು ;

(ಈ) ಉಳಿದ ಅನುದಾನವನ್ನು ಬಳಸಲು ಸರ್ಕಾರವು ರೂಪಿಸಿರುವ ಕ್ರಿಯಾ ಯೋಜನೆ ಏನು ಮತ್ತು ನಿಗದಿತ ಅವಧಿಯೊಳಗೆ ಅನುದಾನ ಬಳಕೆ ಪ್ರಮಾಣ ಪತ್ರ ಸಲ್ಲಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ನಮ್ಮ ಮೆಟ್ರೋ ಯೋಜನೆಯ ದರ ಪರಿಷ್ಕರಣೆ ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೨ (೧೧೧೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮೆಟ್ರೋ ಪ್ರಯಾಣಿಕರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದರೂ, ಮೆಟ್ರೋ ದರ ಪರಿಷ್ಕರಣೆ ಮಾಡಲು ಸರ್ಕಾರ ಉದ್ದೇಶಿಸಿದೆಯೇ, ಹಾಗಿದ್ದಲ್ಲಿ, ದರ ಏರಿಕೆಗೆ ಇರುವ ಮಾನದಂಡಗಳೇನು ಮತ್ತು ಇದರಿಂದ ಸಾಮಾನ್ಯ ಪ್ರಯಾಣಿಕರ ಮೇಲೆ ಉಂಟಾಗುವ ಆರ್ಥಿಕ ಹೊರೆಯ ಬಗ್ಗೆ ಸರ್ಕಾರದ ನಿಲುವೇನು ;

(ಆ) ಕಳೆದ ೩ ವರ್ಷಗಳಲ್ಲಿ ಕೇಂದ್ರ ಸರ್ಕಾರವು ಮೆಟ್ರೋ ಯೋಜನೆಗೆ ಬಿಡುಗಡೆ ಮಾಡಿದ ಮೊತ್ತ ಎಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಮೆಟ್ರೋ ಕಾರ್ಯಾಚರಣೆಯ ವೆಚ್ಚವನ್ನು (Operational Cost) ಸರಿದೂಗಿಸಲು ಮತ್ತು ಸಾಲ ಮರುಪಾವತಿ ಮಾಡಲು ಸರ್ಕಾರವು ಕೇವಲ ದರ ಏರಿಕೆಯನ್ನೇ ಅವಲಂಬಿಸಿದೆಯೇ ಅಥವಾ ಇತರೆ ಆದಾಯದ ಮೂಲಗಳನ್ನು (Non-Fare Revenue) ಕಂಡುಕೊಳ್ಳುವಲ್ಲಿ ಕೈಗೊಂಡಿರುವ ಕ್ರಮಗಳೇನು ;

(ಈ) ಬೆಂಗಳೂರು ಮೆಟ್ರೋ ರೈಲು ನಿಗಮವು (BMRCL) ಪ್ರಸ್ತುತ ಎದುರಿಸುತ್ತಿರುವ ಒಟ್ಟು ಸಾಲದ ಮೊತ್ತ ಎಷ್ಟು; ಈ ಸಾಲದ ಮೇಲಿನ ಬಡ್ಡಿಯನ್ನು ಪಾವತಿಸಲು ಸರ್ಕಾರವು ವಾರ್ಷಿಕವಾಗಿ ನೀಡುತ್ತಿರುವ ಆರ್ಥಿಕ ನೆರವು ಎಷ್ಟು ?

## ಪ್ಯಾಕ್ಸ್ (**PACS**) ವ್ಯವಹಾರಕ್ಕೆ ಸರ್ಕಾರದ ನಿರ್ಧಾರದಿಂದ ಆಗುತ್ತಿರುವ ಹಿನ್ನಡೆ

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೩ (೧೧೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ರೈತರ ಆಧಾರಸ್ತಂಭವಾಗಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ (ಪ್ಯಾಕ್ಸ್) ಬಡ್ಡಿ ವಹಿವಾಟು ಮಾರ್ಜಿನ್ ಹಣವನ್ನು ಶೇ. ೩ರಿಂದ ಶೇ. ೧.೫ಕ್ಕೆ ಇಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಮಾರ್ಜಿನ್ ಹಣದ ಕಡಿತದಿಂದಾಗಿ ರಾಜ್ಯದ ಸಾವಿರಾರು ಪ್ಯಾಕ್ಸ್ ಸಂಘಗಳು ದೈನಂದಿನ ನಿರ್ವಹಣೆಗೆ (ಸ್ಟೇಷನರಿ, ಸಂಬಳ ಇತ್ಯಾದಿ) ಹಣವಿಲ್ಲದೆ ಮುಚ್ಚುವ ಸ್ಥಿತಿ ತಲುಪಿರುವುದು ನಿಜವೇ ;

(ಇ) ಕೃಷಿ ಸಾಲ ಹಂಚಿಕೆಗೆ ಮಾತ್ರ ಅವಕಾಶ ನೀಡಿ, ಉಳಿದ ವಾಣಿಜ್ಯ ವ್ಯವಹಾರಗಳಿಗೆ ನಿರ್ಬಂಧ ವಿಧಿಸಿರುವುದರಿಂದ ಸಂಘಗಳಿಗೆ ಆಗುತ್ತಿರುವ ನಷ್ಟವನ್ನು ಸರಿದೂಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಬಿಕ್ಕಟ್ಟನ್ನು ಬಗೆಹರಿಸಲು ಮಾರ್ಜಿನ್ ಹಣವನ್ನು ಪುನಃ ಶೇ. ೩ಕ್ಕೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಪರವಾನಗಿ ನೀತಿ ಕುರಿತು

**ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೪ (೧೧೦೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಬಕಾರಿ ಇಲಾಖೆಯಲ್ಲಿ ಹೊಸ ಮದ್ಯದ ಅಂಗಡಿಗಳಿಗೆ (CL-9) ಪರವಾನಗಿ ನೀಡುವುದನ್ನು ತಡೆಹಿಡಿದ 33 ವರ್ಷಗಳಷ್ಟು ಹಳೆಯದಾದ ನಿಯಮವು ಪ್ರಸ್ತುತ ಕಾಳಸಂತೆ ಮತ್ತು ಭ್ರಷ್ಟಾಚಾರಕ್ಕೆ ಮೂಲ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಜನಸಂಖ್ಯೆ ಮತ್ತು ನಗರೀಕರಣಕ್ಕೆ ಅನುಗುಣವಾಗಿ ಈ ನಿಯಮವನ್ನು ಸಡಿಲಗೊಳಿಸಿ, ಪಾರದರ್ಶಕವಾಗಿ ಪರವಾನಗಿ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ೨೦೨೪–೨೫ನೇ ಸಾಲಿನಲ್ಲಿ ಅಬಕಾರಿ ಇಲಾಖೆಯು ನಿಗದಿಪಡಿಸಿದ ವರಮಾನ ಸಂಗ್ರಹದಲ್ಲಿ ಸುಮಾರು ರೂ.೩೦೦೦ ಕೋಟಿ ಕೊರತೆ ಉಂಟಾಗಲು ಕಾರಣಗಳೇನು ; ಬಿಯರ್ ಮಾರಾಟದಲ್ಲಿ ಶೇ. ೨೦ ರಷ್ಟು ಕುಸಿತ ಕಂಡುಬರಲು ಅವೈಜ್ಞಾನಿಕ ತೆರಿಗೆ ಏರಿಕೆಯೇ ಕಾರಣವಲ್ಲವೆ ;

(ಇ) ನೆರೆ ರಾಜ್ಯವಾದ ಆಂಧ್ರಪ್ರದೇಶದಲ್ಲಿನ ಪಾರದರ್ಶಕ ಅಬಕಾರಿ ನೀತಿಯಿಂದಾಗಿ ಕರ್ನಾಟಕದ ಗಡಿ ಜಿಲ್ಲೆಗಳ ವಹಿವಾಟು ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕರ್ನಾಟಕ ರಾಜ್ಯದಲ್ಲಿಯೂ ಅಬಕಾರಿ ಸುಂಕವನ್ನು ತರ್ಕಬದ್ಧಗೊಳಿಸಲು ಮತ್ತು ಸಿಬ್ಬಂದಿ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಿದೆ ?

# ರಾಜ್ಯದಲ್ಲಿ ವಾಹನ ಸಂಚಾರ ಸುಗಮಗೊಳಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೫ (೧೧೧೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಂಚಾರ ನಿಯಮಗಳನ್ನು ಪರಿಣಾಮಕಾರಿಯಾಗಿ ಜಾರಿಯ ಮೂಲಕ ವಾಹನ ಸಂಚಾರವನ್ನು ಸುಗಮಗೊಳಿಸಲು ಗೃಹ ಇಲಾಖೆಯ ಸಂಚಾರಿ ಪೊಲೀಸ್ ವಿಭಾಗ ಕೈಗೊಂಡಿರುವ ಕ್ರಮಗಳೇನು ;

(ಆ) ನಗರ ಪ್ರದೇಶಗಳಲ್ಲಿ, ವಿಶೇಷವಾಗಿ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ಸಂಚಾರಕ್ಕೆ ಅಡ್ಡಿಯಾಗುತ್ತಿರುವ ಅನಧಿಕೃತ ಮಾರುಕಟ್ಟೆ ವಿಸ್ತರಣೆಗಳು, ಪುಟ್‌ಪಾತ್ ಅತಿಕ್ರಮಣಗಳು ಹಾಗೂ ಅನಗತ್ಯ ವಸ್ತುಗಳನ್ನು ತೆರವುಗೊಳಿಸಲು ಸರ್ಕಾರ ಸ್ಥಳೀಯ ಸಂಸ್ಥೆಗಳೊಂದಿಗೆ ಸಂಯೋಜನೆ ಮಾಡಿ ಕೈಗೊಂಡಿರುವ ಕ್ರಮಗಳೇನು ;

(ಇ) ಸಾರಿಗೆ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಪುನರಾವರ್ತಿತ ಸಂಚಾರ ನಿಯಮಗಳ ಉಲ್ಲಂಘಿತರನ್ನು ಸ್ವಯಂಚಾಲಿತವಾಗಿ ವಾಹನ ಮತ್ತು ಚಾಲನಾ ಪರವಾನಿಗೆ ಷರತ್ತುಗಳನ್ನು ದಾಖಲಿಸಿ ಎಚ್ಚರಿಕೆ ನೀಡುವ ಬಗ್ಗೆ ಪ್ರಮಾಣೀಕೃತ ಕಾರ್ಯ ವಿಧಾನವನ್ನು ರೂಪಿಸಿದೆಯೇ ; ಈ ಕುರಿತು ಸರ್ಕಾರದ ಕಾರ್ಯಕ್ರಮಗಳೇನು ;

(ಈ) ರಾಜ್ಯದಲ್ಲಿ ಸಂಚಾರ ದಟ್ಟಣೆ ನಿಯಂತ್ರಣಕ್ಕಾಗಿ ವಿಶೇಷ ಸಂಚಾರ ಪೊಲೀಸ್ ಸಿಬ್ಬಂದಿ ನೇಮಕ, ತಾಂತ್ರಿಕ ಸಾಧನಗಳಾದ ಸಿಸಿಟಿವಿ, ಸ್ಮಾರ್ಟ್ ಸಿಗ್ನಲ್ ವ್ಯವಸ್ಥೆ ಇತ್ಯಾದಿಗಳ ಬಳಕೆ ಹಾಗೂ ಜಾಗೃತಿ ಅಭಿಯಾನಗಳ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಉ) ಮಂಗಳೂರು ನಗರದಲ್ಲಿ ವಿವಿಧ ವೃತ್ತಗಳು ಹಾಗೂ ಮುಖ್ಯ ರಸ್ತೆಗಳಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆಯನ್ನು ಕಡಿಮೆ ಮಾಡಲು 'ಫ್ರೀ ಲೆಫ್ಟ್' ವ್ಯವಸ್ಥೆ, ಒನ್‌ವೇ ಜಾರಿ, ಪಾರ್ಕಿಂಗ್ ಪ್ರದೇಶ ನಿಗಧಿ/ನಿಯಂತ್ರಣ ಸೇರಿದಂತೆ ಇತರೆ ಅಗತ್ಯ ಸಂಚಾರ ಸುಧಾರಣಾ ಕ್ರಮಗಳನ್ನು ಕೈಗೊಳ್ಳದಿರಲು ಕಾರಣವೇನು ; ಈ ಸಂಬಂಧ ವಿವಿಧ ಇಲಾಖೆಗಳೊಂದಿಗೆ ಸಾಧಿಸಿರುವ ಸಮನ್ವಯಿತ ಕ್ರಮಗಳು ಹಾಗೂ ಮುಂದಿನ ಕಾರ್ಯಯೋಜನೆಗಳ ವಿವರಗಳೇನು ?

## ರಾಜ್ಯದಲ್ಲಿ ಪ್ರವಾಸೋದ್ಯಮ ನೀತಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೬ (೧೧೧೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾರಿಯಲ್ಲಿರುವ ಪ್ರವಾಸೋದ್ಯಮ ನೀತಿ ನಿಯಮಗಳೇನು ; ಪ್ರವಾಸೋದ್ಯಮವನ್ನು ಉತ್ತೇಜಿಸಲು ರೂಪಿಸಿರುವ ಸಮಗ್ರ ಕಾರ್ಯಯೋಜನೆ ಹಾಗೂ ಕೈಗೊಳ್ಳಲಿರುವ ಯೋಜನೆಗಳ ವಿವರಗಳೇನು ಮತ್ತು ಅವುಗಳನ್ನು ಜಾರಿಗೆ ತರುವ ಕಾಲಮಿತಿಯನ್ನು ನಿರ್ಧರಿಸಲಾಗಿದೆಯೇ ;

(ಆ) ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕಡಲತೀರ, ಧಾರ್ಮಿಕ, ಸಾಹಸ ಕ್ರೀಡೆ ಮತ್ತು ಪಾರಂಪರಿಕ/ ಸಾಂಸ್ಕೃತಿಕ ಪ್ರವಾಸೋದ್ಯಮ ಇತ್ಯಾದಿಗಳನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ವಿಶೇಷ ಕ್ರಮಗಳೇನು ;

(ಇ) ಕರಾವಳಿ ಪ್ರದೇಶದಲ್ಲಿ ಪೂರಕ ಮೂಲಸೌಕರ್ಯಗಳ ಕೊರತೆಯಿಂದ ಪ್ರವಾಸೋದ್ಯಮ ಕುಂಠಿತವಾಗುತ್ತಿರುವ ಹಿನ್ನೆಲೆಯಲ್ಲಿ ರಸ್ತೆ ಸಂಪರ್ಕ, ಶೌಚಾಲಯ, ಕುಡಿಯುವ ನೀರು,

ಪಾರ್ಕಿಂಗ್, ಭದ್ರತೆ, ವಸತಿ, ಮಾರ್ಗಸೂಚಿ ಫಲಕಗಳು ಹಾಗೂ ಡಿಜಿಟಲ್ ಪ್ರಚಾರ ಮುಂತಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಪದೋನ್ನತಿ ಹಾಗೂ ವೃಂದ ಮತ್ತು ನೇಮಕಾತಿ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೭ (೧೧೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇಲಾಖಾವಾರು ಪದೋನ್ನತಿಗಳನ್ನು ನೀಡಲು ಅಗತ್ಯವಾದ ವೃಂದ ಮತ್ತು ನೇಮಕಾತಿ (Cadre & Recruitment) ನಿಯಮಗಳನ್ನು ಎಲ್ಲಾ ಇಲಾಖೆಗಳಲ್ಲಿ ಕಾಲೋಚಿತಗೊಳಿಸಲಾಗಿದೆಯೇ ; ಬಾಕಿಯಿರುವ ಇಲಾಖೆಗಳಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು ;

(ಆ) ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಇಲಾಖೆಗಳು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ತಿದ್ದುಪಡಿ ಮಾಡಿ, ಈ ಹಿಂದೆ ರದ್ದುಗೊಂಡಿದ್ದ ಹುದ್ದೆಗಳಿಗೆ ಪುನಃ ನೇಮಕಾತಿ ಮಾಡಿವೆ ; ಅಂತಹ ಸಂದರ್ಭದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಪೂರ್ವಾನುಮತಿ ಪಡೆಯಲಾಗಿದೆಯೇ ;

(ಇ) ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶವಿಲ್ಲದ ಹುದ್ದೆಗಳಿಗೆ ನೇಮಕಾತಿ ಮಾಡಲು ಇಲಾಖೆಗಳಿಗೆ ಇರುವ ಅಧಿಕಾರ/ವಿಧಾನಗಳೇನು ; ಹೊಸ ಹುದ್ದೆಗೆ ನೇಮಕಾತಿ ಮಾಡಿದ ಬಳಿಕ ಎಷ್ಟು ಅವಧಿಯೊಳಗೆ ಆ ಹುದ್ದೆಯನ್ನು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಳವಡಿಸಿಕೊಳ್ಳಬೇಕಾಗಿದೆ ;

(ಈ) ಮೇಲ್ಕಂಡ ನಿಯಮಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕಂದಾಯ ಇಲಾಖೆ ಹಾಗೂ ಲೋಕೋಪಯೋಗಿ ಇಲಾಖೆಯಲ್ಲಿ ಸಮರ್ಪಕವಾಗಿ ಪಾಲನೆಯಾಗಿದೆಯೇ ? ಈ ಇಲಾಖೆಗಳಲ್ಲಿ ಯಾವ ಯಾವ ಹುದ್ದೆಗಳಿಗೆ ಈ ರೀತಿಯ ನೇಮಕಾತಿ ಮಾಡಲಾಗಿದೆ ;

(ಉ) ನಿರ್ದಿಷ್ಟ ಹುದ್ದೆಗೆ ನೇರ ನೇಮಕಾತಿಯ ಸಂದರ್ಭದಲ್ಲಿ ದಾಖಲಾತಿ ಪರಿಶೀಲನೆಗೆ ಹಾಜರಾಗದ, ವಿವಿಧ ಕಾರಣಗಳಿಗಾಗಿ ನೇಮಕಾತಿ ಆದೇಶ ನೀಡದ ಅಥವಾ ನೇಮಕಾತಿ ಆದೇಶ ಪಡೆದ ಬಳಿಕ ಕರ್ತವ್ಯಕ್ಕೆ ಹಾಜರಾಗದ ಅಭ್ಯರ್ಥಿಗಳ ಬದಲಿಗೆ ಮೆರಿಟ್ ಪಟ್ಟಿಯಲ್ಲಿರುವ ಮುಂದಿನ ಅಭ್ಯರ್ಥಿಗಳನ್ನು ನೇಮಕ ಮಾಡಿದಲ್ಲಿ, ಅವರ ಜೇಷ್ಠತೆಯನ್ನು ಯಾವ ಅನುಕ್ರಮದಲ್ಲಿ ನಿಗಧಿಪಡಿಸಲಾಗುತ್ತದೆ ; ಈ ಕುರಿತು ಪಾರಿಯಾಲ್ಲಿರುವ ನಿಯಮಗಳೇನು: ಎಷ್ಟು ಇಲಾಖೆಗಳಲ್ಲಿ ಇಂತಹ ಸಮಸ್ಯೆಗಳ ಉದ್ಭವಿಸಿವೆ ; ಈ ಕುರಿತು ಸರ್ಕಾರ ಪ್ರಮಾಣೀಕೃತ ಕಾರ್ಯವಿಧಾನವನ್ನು ಯಾವಾಗ ಅನುಷ್ಠಾನಗೊಳಿಸಲಾಗುವುದು ?

## ರಾಜ್ಯದಲ್ಲಿ ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೮ (೧೧೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವುದೇ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವ ಎಷ್ಟು ಪ್ರಸ್ತಾವನೆಗಳು ಸರ್ಕಾರದ ಮುಂದಿದೆ, ಈ ಕುರಿತು ಇ–ಕಡತಗಳೂ ಸೇರಿದಂತೆ ಎಷ್ಟು ಕಡತಗಳು ಚಾಲ್ತಿಯಲ್ಲಿವೆ ; ಅವುಗಳಲ್ಲಿ ಎಷ್ಟು ಕಡತಗಳನ್ನು ಯಾವ ಆಧಾರದಲ್ಲಿ ಮುಕ್ತಾಯಗೊಳಿಸಲಾಗಿದೆ ಅಥವಾ ವಿಲೀನಗೊಳಿಸಲಾಗಿದೆ ;

(ಆ) ದಕ್ಷಿಣ ಕನ್ನಡ/ಉಡುಪಿ ಜಿಲ್ಲೆಗಳಲ್ಲಿ ಇರುವ ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡಗಳ (Scheduled Tribes) ಪಟ್ಟಿಗೆ ಸೇರಿಸುವ ಕುರಿತು ಈವರೆಗಿನ ಪ್ರಗತಿಯೇನು ;ಈ ಕುರಿತು ಹಿಂದುಳಿದ ವರ್ಗಗಳ ಇಲಾಖೆಯಿಂದ ನಿರಾಕ್ಷೇಪಣ ಪತ್ರ ಪಡೆದುಕೊಂಡ ೬ ತಿಂಗಳಾದರೂ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸದಿರಲು ಕಾರಣವೇನು ; ಯಾವಾಗ ಈ ಕುರಿತು ಪ್ರಸ್ತಾವನೆ ಸಲ್ಲಿಸಲಾಗುವುದು ;

(ಇ) ಯಾವುದೇ ಸಮುದಾಯವನ್ನು ಪರಿಶಿಷ್ಟ ಪಂಗಡಗಳ ಪಟ್ಟಿಗೆ ಸೇರ್ಪಡೆ ಮಾಡುವ ಬಗೆಗಿನ ಎಷ್ಟು ಕಡತಗಳು ಎಷ್ಟು ಅವಧಿಯಿಂದ ಚಾಲನೆಯಾಗುತ್ತಿವೆ ಮತ್ತು ಅದಕ್ಕೆ ಕಾರಣಗಳೇನು ;

(ಈ) ಸರ್ಕಾರದ ಎಲ್ಲಾ ಇಲಾಖೆಗಳು, ನಗರ/ಗ್ರಾಮೀಣ ಸ್ಥಳೀಯ ಸಂಸ್ಥೆಗಳು, ವಿವಿಧ ಅಭಿವೃದ್ಧಿ ನಿಗಮಗಳು, ಪರಿಶಿಷ್ಟ ಪಂಗಡಗಳ ಸಮುದಾಯದವರಿಗಾಗಿ ಅಭಿವೃದ್ಧಿ ಕಾರ್ಯಕ್ರಮ ರೂಪಿಸುವಾಗ ಅನುಸರಿಸಬೇಕಾದ ಮಾರ್ಗಸೂಚಿಗಳು ಯಾವುವು ; ಅವುಗಳನ್ನು ಯಾವಾಗ ರೂಪಿಸಲಾಗಿತ್ತು ; ಅವುಗಳನ್ನು ಪರಿಷ್ಕರಿಸುವ ಆಲೋಚನೆಯಿದೆಯೇ ;

(ಉ) ಪರಿಶಿಷ್ಟ ಪಂಗಡ ಸಮುದಾಯದ ಜನರಿಗೆ ವಿವಿಧ ಕಲ್ಯಾಣ ಕಾರ್ಯಕ್ರಮಗಳಿಗೆ ಭೌತಿಕ/ಆರ್ಥಿಕ ಗುರಿಯನ್ನು ಯಾವ ನಿಗಧಿತ ಮಾನದಂಡವನ್ನು ಅನುಸರಿಸಿ ನಿರ್ಧರಿಸಲಾಗುತ್ತಿದೆ ; ಪರಿಶಿಷ್ಟ ಪಂಗಡ ಕಾಲನಿ ವ್ಯಾಖ್ಯಾನ, ಕಾರ್ಯಕ್ರಮ ಅನುಷ್ಟಾನಕ್ಕೆ ಮಾರಕವಾಗಿದ್ದು ಅವುಗಳನ್ನು ಯಾವಾಗ ಪರಿಷ್ಕರಿಸಲಾಗುತ್ತಿದೆ ?

# ಪಿಲಿಕುಳ ಅಭಿವೃದ್ಧಿ ಪ್ರಾಧಿಕಾರದ ಜೈವಿಕ ಉದ್ಯಾನವನದಲ್ಲಿರುವ ಮೃಗಾಲಯ ಅಭಿವೃದ್ಧಿ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೧೯ (೧೧೩೩) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರಿನ ಪಿಲಿಕುಳ ಮೃಗಾಲಯವನ್ನು ಮುಚ್ಚುವಂತೆ ನ್ಯಾಯಾಲಯ ಆದೇಶವಿರುವ ಮತ್ತು ಪರವಾನಿಗೆ ಮುಕ್ತಾಯಗೊಂಡಿರುವ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ವರದಿಯಾಗಿ ನಿಸರ್ಗಧಾಮ ಸಂದರ್ಶಕರಲ್ಲಿ ಮೂಡಬಹುದಾದ ಗೊಂದಲಗಳನ್ನು ಯಾವ ರೀತಿಯಲ್ಲಿ ನಿವಾರಿಸಿದೆ ; ಈ ಮೃಗಾಲಯ ಚಾಲ್ತಿಯಲ್ಲಿರುವ ಪರವಾನಿಗೆ ಹೊಂದಿದೆಯೇ ;

(ಆ) ಮೃಗಾಲಯ ಪ್ರಾಧಿಕಾರದ ಮಾರ್ಗಸೂಚಿಗಳಂತೆ ಪಿಲಿಕುಳ ಮೃಗಾಲಯದಲ್ಲಿ ಅಗತ್ಯವಾಗಿ ಇರಬೇಕಾದ ಸಿಬ್ಬಂದಿಯೆಷ್ಟು; ಪ್ರಸ್ತುತ ಇಲ್ಲಿರುವ ೧೯ ಸಿಬ್ಬಂದಿಯಿಂದ ಹಾಗೂ ೧ ಪಶು ವೈದ್ಯರಿಂದ ೧೦೦೦ ಕ್ಕೂ ಹೆಚ್ಚು ಪ್ರಾಣಿಗಳ ಸಮರ್ಪಕ ನಿರ್ವಹಣೆ ಸಾಧ್ಯವಿದೆಯೇ ; ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ; ಈ ಮೃಗಾಲಯವನ್ನು ಮೃಗಾಲಯ ಪ್ರಾಧಿಕಾರಕ್ಕೆ ಯಾವಾಗ ಹಸ್ತಾಂತರಿಸಲಾಗುವುದು ;

(ಇ) ಪಿಲಿಕುಳ ಜೈವಿಕ ಉದ್ಯಾನವನದ ಸಿಬ್ಬಂದಿಗೆ ಸಂಬಳ, ಭತ್ಯೆಗಳು, ವೈದ್ಯಕೀಯ ಸೌಲಭ್ಯಗಳು ಮತ್ತು ರಿಸ್ಕ್ ಆಲೊಯೆನ್ಸ್ ನೀಡುವ ಕುರಿತು ಸರ್ಕಾರದ ಕ್ರಮಗಳೇನು ; ಸುಮಾರು ೨೦೧೮ ರಿಂದ ಸಂಬಳ ಪರಿಷ್ಕರಣೆ ಮಾಡದಿರುವುದಕ್ಕೆ ಹಾಗೂ ವಾರ್ಷಿಕ ವೇತನ ಬಡ್ತಿ ನೀಡದಿರಲು ಕಾರಣವೇನು ; ಈ ಕುರಿತು ಯಾವಾಗ ಕ್ರಮ ಜರುಗಿಸಲಾಗುವುದು ;

(ಈ) ಮೃಗಾಲಯದ ಪ್ರಾಣಿಗಳಿಗೆ ವಿಷಪ್ರಾಶನ ಪ್ರಕರಣದಲ್ಲಿ ಆರೋಪಿತರಾಗಿರುವವರ ಸಂಬಂಧಿತ ಸಂಸ್ಥೆಗಳಿಗೆ ಆಹಾರ ಪೂರೈಕೆಯ ಉಪಗುತ್ತಿಗೆ ನೀಡಲಾಗಿರುವ ಆರೋಪಗಳಿದ್ದು, ಇಂತಹ ಘಟನೆಗಳು ಮರುಕಳಿಸದಂತೆ ಆಹಾರ ಪೂರೈಕೆ ಟೆಂಡರ್ ಪ್ರಕ್ರಿಯೆಯನ್ನು ಇ–ಪ್ರೊಕ್ಯೂರ್‌ಮೆಂಟ್ ತೃತೀಯಪಕ್ಷ ಗುಣಮಟ್ಟ ಪರಿಶೀಲನೆ ಇತ್ಯಾದಿ ಜಾರಿಗೊಳಿಸಲಾಗುವುದೇ ; ಸರ್ಕಾರದ ಕ್ರಮಗಳೇನು ;

(ಉ) ಪಿಲಿಕುಳ ಜೈವಿಕ ಉದ್ಯಾನವನಕ್ಕೆ ಪ್ರವಾಸಿಗರ ಸಂಖ್ಯೆ ಹೆಚ್ಚುತ್ತಿದ್ದು ವರ್ಷಕ್ಕೆ ಸರಾಸರಿ ಸುಮಾರು ೪ ಲಕ್ಷದಷ್ಟು ಸಂದರ್ಶಿಸುತ್ತಿದ್ದರೂ ಪಿಲಿಕುಳದಲ್ಲಿ ಭದ್ರತೆ ವ್ಯವಸ್ಥೆ, ಮಾರ್ಗದರ್ಶಕ ಸಿಬ್ಬಂದಿ, ಪಾರ್ಕಿಂಗ್, ಶೌಚಾಲಯಗಳು ಹಾಗೂ ಇತರೆ ಮೂಲ ಸೌಲಭ್ಯಗಳನ್ನು ವಿಸ್ತರಿಸಲು ಸರ್ಕಾರ ಯಾವ ಕಾಲಮಿತಿಯೊಳಗೆ ಸುಧಾರಣಾ ಕ್ರಮಗಳನ್ನು ರೂಪಿಸಲಿದೆ ?

## ಬೀದರ್ ಜಿಲ್ಲೆಯಲ್ಲಿ ಕೆರೆಗಳ ಅಭಿವೃದ್ಧಿ ಹಾಗೂ ಸಣ್ಣ ನೀರಾವರಿ ಕಾಮಗಾರಿಗಳ ಕುರಿತು

**ಡಾ॥ ಎಂ.ಜಿ.ಮುಳೆ (ವಿಧಾನಸಬಯಿಂದ ಚುನಾಯಿತರಾದವರು) :–**

೯೨೦ (೧೦೬೭) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೈಗೊಂಡಿರುವ ಒಟ್ಟು ಕಾಮಗಾರಿಗಳೆಷ್ಟು ; ಅವು ಯಾವುವು ; ಈ ಕಾಮಗಾರಿಗಳಿಗಾಗಿ ಸರ್ಕಾರವು ಎಷ್ಟು ಅನುದಾನ ಬಿಡುಗಡೆ ಮಾಡಿದೆ, ವೆಚ್ಚ ಮಾಡಿರುವ ಮತ್ತು ಬಾಕಿ ಉಳಿದಿರುವ ಅನುದಾನವೆಷ್ಟು ; (ವರ್ಷವಾರು, ಲೆಕ್ಕ ಶೀರ್ಷಿಕೆವಾರು ಹಾಗೂ ಕ್ಷೇತ್ರವಾರು ಸಂಪೂರ್ಣ ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಅಭಿವೃದ್ಧಿಗಾಗಿ ಕ್ಷೇತ್ರವಾರು ಕೈಗೊಳ್ಳಲಾದ ಯೋಜನೆಗಳು ಯಾವುವು ;

(ಇ) ಜಿಲ್ಲೆಯ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಕೆರೆಗಳ ಅಭಿವೃದ್ಧಿಗಾಗಿ ಈಗಾಗಲೇ ವೆಚ್ಚ ಮಾಡಿರುವ ಹಾಗೂ ೨೦೨೧ ರಿಂದ ಇಲ್ಲಿಯವರೆಗೆ ಬಿಡುಗಡೆ ಮಾಡಿದ ಒಟ್ಟು ಅನುದಾನವೆಷ್ಟು; (ಕ್ಷೇತ್ರವಾರು ಮಾಹಿತಿ ನೀಡುವುದು)

(ಈ) ಜಿಲ್ಲೆಯಲ್ಲಿರುವ ದೊಡ್ಡ ಕೆರೆಗಳು ಯಾವುವು : ಅವುಗಳ ಅಭಿವೃದ್ಧಿಗಾಗಿ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ಮತ್ತು ವಿಶೇಷವಾಗಿ ಜಿಲ್ಲೆಯ ನಗರ / ಪಟ್ಟಣ ಪ್ರದೇಶಗಳಲ್ಲಿರುವ ಕೆರೆಗಳ ಅಭಿವೃದ್ಧಿಗಾಗಿ ಹಮ್ಮಿಕೊಂಡಿರುವ ಯೋಜನೆಗಳೇನು ; ಇದಕ್ಕೆ ಒದಗಿಸಿರುವ ಹಾಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಯಾತ್ರಿ ನಿವಾಸಗಳ ನಿರ್ಮಾಣ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೧ (೧೦೬೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರವಾಸೋದ್ಯಮ ಇಲಾಖೆಯಲ್ಲಿರುವ ವಿವಿಧ ಯೋಜನೆಗಳು ಯಾವುವು ; ರಾಜ್ಯದಲ್ಲಿ ದಿನಾಂಕ ೦೧.೦೧.೨೦೨೩ ರಿಂದ ೩೧–೧೨–೨೦೨೫ರ ಅವಧಿಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು ; ಅವುಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ಅವುಗಳಲ್ಲಿ ಮಂಜೂರಾದ/ಪ್ರಗತಿಯಲ್ಲಿರುವ/ ಆರಂಭಗೊಳ್ಳದೆ ಇರುವ ಕಾಮಗಾರಿಗಳ ವಿವರಗಳನ್ನು ಮತಕ್ಷೇತ್ರವಾರು ನೀಡುವುದು ;

(ಆ) ಬೀದರ್ ಜಿಲ್ಲೆಯಲ್ಲಿ ಯಾತ್ರಿ ನಿವಾಸಗಳ ನಿರ್ಮಾಣ ಹಾಗೂ ಇತರ ಅಭಿವೃದ್ಧಿಗೆ ಸಲ್ಲಿಸಲ್ಪಟ್ಟ ಪ್ರಸ್ತಾವನೆಗಳ ವಿವರಗಳನ್ನು ನೀಡುವುದು ; ಅವುಗಳಿಗೆ ಅನುದಾನ ಬಿಡುಗಡೆ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಯಾವಾಗ ಮಾಡಲಾಗುವುದು ;

(ಇ) ಬೀದರ್ ಜಿಲ್ಲೆಯ ವಿವಿಧ ಮತಕ್ಷೇತ್ರಗಳಲ್ಲಿ ಯಾತ್ರಿ ನಿವಾಸಗಳ ನಿರ್ಮಾಣಕ್ಕೆ ಸಲ್ಲಿಸಿದ ಪ್ರಸ್ತಾವನೆಗಳ ಹಂತದ ಹಾಗೂ ಬಿಡುಗಡೆಗೆ ಸಲ್ಲಿಸಿದ ಅನುದಾನದ ವಿವರಗಳನ್ನು ನೀಡುವುದು ;

(ಈ) ಜಿಲ್ಲೆಯಲ್ಲಿ ಪ್ರಸ್ತಾಪಿತ ಕಾಮಗಾರಿಗಳಿಗೆ ಸಂಬಂಧಪಟ್ಟಂತೆ ಈವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರಗಳನ್ನು ನೀಡುವುದು)

## ಬೀದರ್ ಜಿಲ್ಲೆಯ ಸರ್ಕಾರಿ ಕಛೇರಿಗಳಲ್ಲಿ ಸಿಬ್ಬಂದಿ ಕೊರತೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೨ (೧೦೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯು ಕಲ್ಯಾಣ ಕರ್ನಾಟಕ ಭಾಗದ ಆಯಕಟ್ಟಿನ ಜಿಲ್ಲೆಯಾಗಿದ್ದರೂ, ಇಲ್ಲಿನ ಬಹುತೇಕ ಸರ್ಕಾರಿ ಕಛೇರಿಗಳಲ್ಲಿ ಮಂಜೂರಾದ ಹುದ್ದೆಗಳ ಪೈಕಿ ಶೇಕಡ ೪೦ಕ್ಕಿಂತ ಹೆಚ್ಚು ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯ ಕಂದಾಯ, ಶಿಕ್ಷಣ, ಆರೋಗ್ಯ ಮತ್ತು ಪೊಲೀಸ್ ಇಲಾಖೆಗಳಲ್ಲಿ ಪ್ರಸ್ತುತ ಮಂಜೂರಾದ, ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಇಲಾಖಾವಾರು ಮತ್ತು ವೃಂದವಾರು ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಎರಡು ವರ್ಷಗಳಿಂದ ಸಂವಿಧಾನದ ಕಲಂ ३೭೧(ಜೆ) ಅಡಿಯಲ್ಲಿ ಬೀದರ್ ಜಿಲ್ಲೆಯ ಸ್ಥಳೀಯ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಎಷ್ಟು ಹುದ್ದೆಗಳು ಭರ್ತಿಯಾಗದೆ ಬಾಕಿ ಉಳಿದಿವೆ ; ಈ ವಿಳಂಬಕ್ಕೆ ಕಾರಣವೇನು ;

(ಈ) ಸಿಬ್ಬಂದಿ ಕೊರತೆಯಿಂದಾಗಿ ಜಿಲ್ಲೆಯಲ್ಲಿ 'ಸಕಾಲ' ಸೇವೆಗಳು ಮತ್ತು ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದಲ್ಲಿ ತೀವ್ರ ಹಿನ್ನಡೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ;

(ಉ) ಹೈದರಾಬಾದ್–ಕರ್ನಾಟಕ (ಕಲ್ಯಾಣ ಕರ್ನಾಟಕ) ಭಾಗದ ವಿಶೇಷ ಅಭಿವೃದ್ಧಿ ಯೋಜನೆಯಡಿ ಬೀದರ್ ಜಿಲ್ಲೆಯ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ಅಭಿಯಾನ (Special Recruitment Drive) ಹಮ್ಮಿಕೊಳ್ಳುವ ಉದ್ದೇಶ ಸರ್ಕಾರಕ್ಕಿದೆಯೇ ; ಇದ್ದಲ್ಲಿ, ಈ ಪ್ರಕ್ರಿಯೆಯನ್ನು ಎಷ್ಟು ಕಾಲಮಿತಿಗಳಿಗೆ ಪೂರ್ಣಗೊಳಿಸಲಾಗುವುದು ?

## ಬೀದರ್ ಜಿಲ್ಲೆಯ ಅಪೂರ್ಣ ನೀರಾವರಿ ಯೋಜನೆಗಳು ಮತ್ತು ಕಾರಂಜಾ ಸಂತ್ರಸ್ತರ ಸಮಸ್ಯೆ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨३ (೧೦೭೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಪ್ರಮುಖ ನೀರಾವರಿ ಯೋಜನೆಯಾದ ಕಾರಂಜಾ ಜಲಾಶಯ ನಿರ್ಮಾಣವಾಗಿ ದಶಕಗಳೇ ಕಳೆದರೂ ಇಂದಿಗೂ ಕಾಲುವೆಗಳ ಜಾಲ (chanal network ) ಪೂರ್ಣಗೊಳ್ಳದೆ ಸಾವಿರಾರು ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರು ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಾರಂಜಾ ಯೋಜನೆಯಿಂದ ಭೂಮಿ ಕಳೆದುಕೊಂಡ ೨೮ ಗ್ರಾಮಗಳ ಸಂತ್ರಸ್ತರು ಕಳೆದ ೯೦೦ಕ್ಕೂ ಹೆಚ್ಚು ದಿನಗಳಿಂದ ನಡೆಸುತ್ತಿರುವ ನಿರಂತರ ಹೋರಾಟದ ಹಿನ್ನೆಲೆಯಲ್ಲಿ ಅವರಿಗೆ ನ್ಯಾಯಾಲಯದ ತೀರ್ಪಿನನ್ವಯ ಹೆಚ್ಚುವರಿ ಪರಿಹಾರ (Enhanced Compensation) ನೀಡಲು ಸರ್ಕಾರ ಈವರೆಗೆ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಜಿಲ್ಲೆಯ ಪ್ರಮುಖ ಯೋಜನೆಗಳಾದ ಕೆಳ ಮುಲ್ಲಾಮಾರಿ, ಮಂಜ್ರಾ ಮತ್ತು ವಿವಿಧ ಏತ ನೀರಾವರಿ ಯೋಜನೆಗಳು ಅರ್ಧಕ್ಕೆ ನಿಂತಿರುವುದರಿಂದ ಉಂಟಾಗಿರುವ ಆರ್ಥಿಕ ನಷ್ಟ ಎಷ್ಟು ; ಈ ಯೋಜನೆಗಳನ್ನು ಪೂರ್ಣಗೊಳಿಸಲು ಪ್ರಸ್ತುತ ಬಾಕಿ ಇರುವ ಅನುದಾನದ ಮೊತ್ತ ಎಷ್ಟು ;

(ಈ) ಗೋದಾವರಿ ಕೊಳ್ಳದ ಹಂಚಿಕೆಯಾದ ನೀರಿನ ಪೂರ್ಣ ಬಳಕೆಗೆ ಅಡ್ಡಿಯಾಗಿರುವ ತಾಂತ್ರಿಕ ಸಮಸ್ಯೆಗಳೇನು ; ನೆರೆಯ ರಾಜ್ಯಗಳೊಂದಿಗೆ (ತೆಲಂಗಾಣ/ ಮಹಾರಾಷ್ಟ್ರ) ಇರುವ ಜಲ ವಿವಾದಗಳಿಂದ ಬೀದರ್ ಜಿಲ್ಲೆಯ ಯೋಜನೆಗಳಿಗೆ ಹಿನ್ನಡೆಯಾಗುತ್ತಿದೆಯೇ ;

(ಉ) ಈ ಎಲ್ಲಾ ಅಪೂರ್ಣ ಯೋಜನೆಗಳನ್ನು ಪೂರ್ಣಗೊಳಿಸಲು ಮತ್ತು ಕಾರಂಜಾ ಸಂತ್ರಸ್ತರಿಗೆ ವೈಜ್ಞಾನಿಕ ಪರಿಹಾರ ನೀಡಲು ಸರ್ಕಾರವು “ವಿಶೇಷ ಆರ್ಥಿಕ ಪ್ಯಾಕೇಜ್” ಘೋಷಿಸಿ ಡಿಸೆಂಬರ್ ೨೦೨೬ ರ ಒಳಗೆ ಕಾಮಗಾರಿ ಪೂರ್ಣಗೊಳಿಸಲು ಕಾಲಮಿತಿ ನಿಗದಿಪಡಿಸಲಾಗುವುದೇ ?

# ಬೀದರ್ ಜಿಲ್ಲೆಯ ನ್ಯಾಯಾಂಗ ವ್ಯವಸ್ಥೆಯ ಬಲವರ್ಧನೆ ಮತ್ತು ಬಾಕಿ ಪ್ರಕರಣಗಳ ವಿಲೇವಾರಿ ಕುರಿತು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೪ (೧೦೭೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ಕಳೆದ ೦೩ ವರ್ಷಗಳಿಗಿಂತಲೂ ಹೆಚ್ಚು ಕಾಲದಿಂದ ಬಾಕಿ ಇರುವ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಮತ್ತು ವರ್ಷವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಮಂಜೂರಾದ ನ್ಯಾಯಾಧೀಶರ ಹುದ್ದೆಗಳ ಪೈಕಿ ಎಷ್ಟು ಹುದ್ದೆಗಳು ಖಾಲಿ ಇವೆ ನ್ಯಾಯಾಧೀಶರ ಕೊರತೆಯಿಂದಾಗಿ ಒಬ್ಬರೇ ನ್ಯಾಯಾಧೀಶರು ಏಕಕಾಲಕ್ಕೆ ಎರಡು ಅಥವಾ ಮೂರು ನ್ಯಾಯಾಲಯಗಳ ಹೆಚ್ಚುವರಿ ಉಸ್ತುವಾರಿ (Concurrent Charge) ವಹಿಸಿರುವುದು ನ್ಯಾಯಾದಾನದ ವಿಳಂಬಕ್ಕೆ ಕಾರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬೀದರ್ ಜಿಲ್ಲೆಯ ಗಡಿ ಭಾಗದ ತಾಲ್ಲೂಕುಗಳಾದ ಔರದ್ ಮತ್ತು ಕಮಲನಗರ ಭಾಗದ ಜನರಿಗೆ ಅನುಕೂಲವಾಗುವಂತೆ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳನ್ನು (Additional District & Sessions Court) ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ ;

(ಈ) ಇ–ಕೋರ್ಟ್ ಯೋಜನೆ ಅಡಿ ಬೀದರ್ ಜಿಲ್ಲೆಯ ಎಷ್ಟು ನ್ಯಾಯಾಲಯಗಳಲ್ಲಿ ವರ್ಚುಯಲ್ ಹಿಯರಿಂಗ್ (Virtual Hearing) ಸೌಲಭ್ಯ ಸಂಪೂರ್ಣವಾಗಿ ಕಾರ್ಯನಿರ್ವಹಿಸುತ್ತಿದೆ ; ತಾಂತ್ರಿಕ ಸಿಬ್ಬಂದಿಗಳ ಕೊರತೆಯಿಂದಾಗಿ ಈ ವ್ಯವಸ್ಥೆ ಕುಂಠಿತವಾಗಿರುವುದು ನಿಜವೇ ;

(ಉ) ಪ್ರಕರಣಗಳ ತ್ವರಿತ ವಿಲೇವಾರಿಗಾಗಿ ವಿಶೇಷ ನ್ಯಾಯಾಂಗ ಅಭಿಯಾನ (Special Judicial Drive) ಹಮ್ಮಿಕೊಳ್ಳುವ ಮೂಲಕ ಬಾಕಿ ಇರುವ ಹಳೆಯ ಪ್ರಕರಣಗಳನ್ನು (Old Pendency) ಮುಂದಿನ ಒಂದು ವರ್ಷದೊಳಗೆ ಶೇ 50ರಷ್ಟು ಕಡಿಮೆ ಮಾಡಲು ಸರ್ಕಾರ ಕಾಲಮಿತಿ ಹಾಕಿಕೊಳ್ಳುವುದೇ ?

## ರಾಜ್ಯ ಮಾನವ ಹಕ್ಕುಗಳ ಆಯೋಗದ ಕ್ರಮಗಳ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೫ (೧೦೭೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮಾನವ ಹಕ್ಕುಗಳ ಆಯೋಗದಲ್ಲಿ ಸುಮಾರು ೩,೫೦೦ ಕ್ಕಿಂತ ಹೆಚ್ಚು ಪ್ರಕರಣಗಳು ಬಾಕಿ ಇರುವುದು ನಿಜವೇ ; ಇದ್ದಲ್ಲಿ ಈ ಪ್ರಕರಣಗಳನ್ನು ವಿಲೇಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಮತ್ತು ಸದರಿ ಆಯೋಗದಲ್ಲಿ ಹೆಚ್ಚಿನ ತನಿಖಾ ಸಿಬ್ಬಂದಿಗಳನ್ನು ನೇಮಿಸಲು ೨೦೨೬–೨೭ನೇ ಆಯವ್ಯಯದಲ್ಲಿ ಅನುದಾನ ಒದಗಿಸಲಾಗುತ್ತಿದೆಯೇ ;

(ಆ) ಕಾರಾಗೃಹಗಳಲ್ಲಿ ಅಕ್ರಮ ಬಂಧನ ಕಸ್ಟಡಿಯಲ್ಲಿ ಚಿತ್ರಹಿಂಸೆ ಮತ್ತು ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕೆ.ಎಸ್.ಎಚ್.ಆರ್.ಸಿ ಯ ತನಿಖಾ ವಿಭಾಗವನ್ನು ಬಲಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇತ್ತೀಚಿನ ದಿನಗಳಲ್ಲಿ ಮಾನವ ಹಕ್ಕುಗಳು ಎಂಬ ಹೆಸರಿನಲ್ಲಿ ಅಧಿಕಾರಿಗಳಿಗೆ ಬೆದರಿಕೆ ಹಾಕುವ ನಕಲಿ ಸಂಘಟನೆಗಳು ಹೆಚ್ಚಾಗುತ್ತಿದ್ದು ಈ ದುರುಪಯೋಗವನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಎಂಬುದರ ಬಗ್ಗೆ ತಿಳಿಸುವುದು ?

# ಬೆಂಗಳೂರು ನಗರದ ದಿನ್ನೂರು ಮುಖ್ಯ ರಸ್ತೆಯನ್ನು ಅಗಲೀಕರಣಗೊಳಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೯೨೬ (೧೦೭೬) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ನಗರ ಆರ್.ಟಿ ನಗರ ಪೊಲೀಸ್ ಠಾಣೆಯಿಂದ ಡಾ॥ ಬಿ.ಆರ್. ಅಂಬೇಡ್ಕರ್ ಮೆಡಿಕಲ್ ಕಾಲೇಜುವರೆಗೆ ಸಂಪರ್ಕ ಕಲ್ಪಿಸುವ ರಸ್ತೆಯಾದ ದಿನ್ನೂರು ಮುಖ್ಯ ರಸ್ತೆಯನ್ನು ಬಿ.ಬಿ.ಎಂ.ಪಿಯ ೨೦೨೫-೨೬ನೇ ಸಾಲಿನ ಆಯವ್ಯಯದಲ್ಲಿ ಟಿ.ಡಿ.ಆರ್ (Transfer of Development Rights) ಯೋಜನೆಯಡಿ ಅಗಲೀಕರಣಗೊಳಿಸಲಾಗುವುದು ಎಂದು ಘೋಷಿಸಿದ್ದು, ಸದರಿ ಕಾಮಗಾರಿಯ ಪ್ರಸ್ತುತ ಹಂತವೇನು ; ಸದರಿ ಅಗಲೀಕರಣ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ; ಸದರಿ ಕಾಮಗಾರಿಗೆ ಎಷ್ಟು ಎಕರೆ ಭೂಮಿ ಅವಶ್ಯಕತೆ ಇದೆ ಮತ್ತು ಭೂ ಸ್ವಾಧೀನಗೊಳ್ಳುವ ಜಾಗದಲ್ಲಿ ದರ ನಿಗದಿಪಡಿಸಲಾಗಿದೆಯೇ ; ಇದ್ದಲ್ಲಿ, ಪ್ರತಿ ಚದರಡಿಗೆ ಎಷ್ಟು ಮೊತ್ತ ನಿಗದಿಪಡಿಸಲಾಗಿದೆ ;

(ಆ) ಟ್ಯಾನರಿ ರಸ್ತೆಯನ್ನು (ಟ್ಯಾನರಿ ರಸ್ತೆಯ ಕಸಾಯಿ ಖಾನೆಯಿಂದ ನಾಗವಾರದವರೆಗೆ) ಸಹ ಅಗಲೀಕರಣಗೊಳಿಸಿ ಅಭಿವೃದ್ಧಿಪಡಿಸಲು ಯೋಚಿಸಲಾಗಿತ್ತು, ಈಗ ಅರೆಬಿಕ್ ಕಾಲೇಜಿನ ಬಳಿ ಮೆಟ್ರೋ ಸ್ಟೇಷನ್ ಬರ್ತಿದ್ದು, ಮೆಟ್ರೋ ಕಾಮಗಾರಿಯಿಂದಾಗಿ ಪ್ರತಿದಿನವೂ ವಾಹನ ಸವಾರರು ಗಂಟೆಗಟ್ಟಲೆ ಟ್ರಾಫಿಕ್‌ನಲ್ಲಿ ಸಮಯ ಕಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಟ್ರಾಫಿಕ್ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಪರ್ಯಾಯ ರಸ್ತೆ ವ್ಯವಸ್ಥೆ

ಕಲ್ಪಿಸಲಾಗಿದೆಯೇ ; ಈ ಮೆಟ್ರೋ ಮಾರ್ಗ ನಿರ್ಮಾಣ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ಎಂಬುದರ ಬಗ್ಗೆ ಮಾಹಿತಿ ನೀಡುವುದು ?

## ಒಳಾಡಳಿತ ಇಲಾಖೆಯಿಂದ ಕೈಗೊಂಡಿರುವ ಕ್ರಮಗಳ ಕುರಿತು

**ಶ್ರೀ ಎಂ ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨೭ (೧೦೭೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು) ೨೦೨೬–೨೭ನೇ ಸಾಲಿನಲ್ಲಿ ಎಷ್ಟು ಹುದ್ದೆಗಳನ್ನು ಇಲಾಖೆ ವತಿಯಿಂದ ಭರ್ತಿ ಮಾಡಿಕೊಳ್ಳಲು ಯೋಜಿಸಿದೆ ;

(ಆ) ಈ ಹಿಂದಿನ ಸರ್ಕಾರದ ಅವಧಿಯಲ್ಲಿ ಅಂದರೆ ೨೦೨೨ನೇ ಸಾಲಿನಲ್ಲಿ ನಡೆದ ಪಿ.ಎಸ್.ಐ ನೇಮಕಾತಿ ಹಗರಣದ ಪುನರಾವರ್ತನೆಯನ್ನು ತಡೆಗಟ್ಟಲು, ಭವಿಷ್ಯದ ನೇಮಕಾತಿ ಪ್ರಕ್ರಿಯೆಗಳಲ್ಲಿ ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಇ) ರಾಜ್ಯ ಸರ್ಕಾರದ ವತಿಯಿಂದ ನೇಮಕಾತಿಗಳಲ್ಲಿ ವಯಸ್ಸಿನ ಮಿತಿಯಲ್ಲಿ ಸಡಿಲಿಕೆ ನೀಡಿದ್ದು ಇಲಾಖೆ ವತಿಯಿಂದ ಕೈಗೊಳ್ಳುವ ನೇಮಕಾತಿ ಪ್ರಕ್ರಿಯೆಯಲ್ಲಿ ಸಡಿಲಿಕೆ ನೀಡಲಾಗುವುದೇ ; ನೀಡಿದ್ದಲ್ಲಿ, ದೈಹಿಕ ದಕ್ಷತೆ ಮತ್ತು ತರಬೇತಿ ಗುಣಮಟ್ಟದ ಮೇಲೆ ಇದು ಪರಿಣಾಮ ಬೀರುವುದಿಲ್ಲವೇ ಎಂಬುದರ ಬಗ್ಗೆ ಮಾಹಿತಿ ನೀಡುವುದು ?

# ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಿಂದ ಕೈಗೊಂಡಿರುವ ಕ್ರಮಗಳ ಬಗ್ಗೆ

**ಶ್ರೀ ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೬೨೮ (೧೦೮೦) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೩೦ರ ವೇಳೆಗೆ ಬೆಂಗಳೂರನ್ನು ಹೊರತುಪಡಿಸಿ ೧೦.೦೦೦ ನವೋದ್ಯಮಗಳನ್ನು ರಚಿಸುವ ಗುರಿಯೊಂದಿಗೆ, ೨೦೨೫–೨೬ರ ಆರ್ಥಿಕ ವರ್ಷದಲ್ಲಿ ಟೈಯರ್ ೨ ಮತ್ತು ಟೈಯರ್ ೩ ನಗರಗಳಲ್ಲಿ (ಮೈಸೂರು, ಹುಬ್ಬಳ್ಳಿ, ಕಲಬುರಗಿ) ಎಷ್ಟು ನವೋದ್ಯಮಗಳು ನೋಂದಣಿ ಆಗಿವೆ ಮತ್ತು ಈ ನವೋದ್ಯಮಗಳಿಗೆ ಎಷ್ಟು ಅನುದಾನ ಹಂಚಿಕೆ ಮಾಡಲಾಗಿದೆ ;

(ಆ) ಮೈಸೂರು ಜಿಲ್ಲೆಯಲ್ಲಿ ೧೫೦ ಎಕರೆ ಜಾಗದಲ್ಲಿ ಪಿ.ಸಿ.ಬಿ (Printed Circuit Board) ಪಾರ್ಕ್ ಸ್ಥಾಪನೆ ಮತ್ತು ಬೆಳಗಾವಿ ಮತ್ತು ಧಾರವಾಡ ಜಿಲ್ಲೆಗಳನ್ನು Global Innovation Districts ಗಳನ್ನಾಗಿ ಮಾಡುವ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ ;

(ಇ) ೨೦೨೫–೨೬ನೇ ಸಾಲಿನಲ್ಲಿ ಹಂಚಿಕೆ ಮಾಡಲಾದ ಮತ್ತು IISC ಸಂಸ್ಥೆಯ ಸಹಯೋಗದೊಂದಿಗೆ ರಾಜ್ಯದಲ್ಲಿ ಕ್ವಾಂಟಮ್ ರಿಸರ್ಚ್ ಪಾರ್ಕ್ ಹಂತ–೨ನ್ನು ನಿರ್ಮಿಸುವ ಯೋಜನೆ ಪ್ರಸ್ತುತ ಯಾವ ಹಂತದಲ್ಲಿದೆ ; ಮಾಹಿತಿ ನೀಡುವುದು ?

# ಭದ್ರಾ ಮೇಲ್ದಂಡೆ ಯೋಜನೆಯಡಿ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೨೯ (೧೦೮೭) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭದ್ರಾ ಮೇಲ್ದಂಡೆ ಯೋಜನೆ ಅಡಿಯಲ್ಲಿ ಒಟ್ಟು ಎಷ್ಟು ಕೆರೆಗಳಿಗೆ ನೀರು ತುಂಬಿಸಲು ಆದೇಶವಾಗಿತ್ತು ;

(ಆ) ಈ ಯೋಜನೆಯಡಿ ಈವರೆಗೆ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ; ಎಷ್ಟು ಕೆರೆಗಳಿಗೆ ಇನ್ನೂ ನೀರು ತುಂಬಿಸಲು ಬಾಕಿ ಇದೆ ; ಬಾಕಿ ಉಳಿಯಲು ತಾಂತ್ರಿಕ ಕಾರಣಗಳೇನು ?

## ಜಾಹೀರಾತಿಗಾಗಿ ಖರ್ಚು ಮಾಡುತ್ತಿರುವ ಹಣದ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೦ (೧೦೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಸರ್ಕಾರದ ಯೋಜನೆಗಳ ಪ್ರಚಾರ ಮಾಡುವ ಉದ್ದೇಶಕ್ಕಾಗಿ ಪ್ರತಿ ವರ್ಷ ಎಷ್ಟು ಹಣ ಖರ್ಚು ಮಾಡುತ್ತಿದೆ ;

(ಆ) ಸರ್ಕಾರದ ಯೋಜನೆಗಳ ಹೊರತು ಬೇರೆ ಯಾವುದಾದರೂ ಯೋಜನೆಗಳ ಬಗ್ಗೆ ಅಥವಾ ಇತರ ಬೇರೆ ಜಾಹೀರಾತಿಗೆ ಸರ್ಕಾರ ಹಣವನ್ನು ಖರ್ಚು ಮಾಡುತ್ತಿದೆಯೇ ;

(ಇ) ಸರ್ಕಾರ ಪ್ರತಿ ವರ್ಷ ಈ ಜಾಹೀರಾತುಗಳನ್ನು ಮಾಡಲು ಎಷ್ಟು ಹಣ ಖರ್ಚು ಮಾಡುತ್ತಿದೆ ? (ಜಾಹೀರಾತುಗಳ ವಿವರಗಳನ್ನು ನೀಡುವುದು)

## ಎನ್.ಪಿ.ಎಸ್ ರದ್ದು ಪಡಿಸಿ ಓ.ಪಿ.ಎಸ್ ಜಾರಿಗೊಳಿಸುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೯೩೧ (೧೮೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎನ್.ಪಿ.ಎಸ್ ರದ್ದುಪಡಿಸಿ ಓ.ಪಿ.ಎಸ್ ಜಾರಿಗೆ ತರುವುದಾಗಿ ಸರ್ಕಾರವು ಚುನಾವಣಾ ಪೂರ್ವ ಪ್ರಣಾಳಿಕೆಯಲ್ಲಿ ಘೋಷಣೆ ಮಾಡಿರುವುದು ನಿಜವೇ; ನಿಜವಿದ್ದಲ್ಲಿ, ಪ್ರಣಾಳಿಕೆಯನ್ವಯ ಯಾವಾಗ ಜಾರಿಗೊಳಿಸಲಾಗುವುದು ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಆ) ಓ.ಪಿ.ಎಸ್ ತಕ್ಷಣದಿಂದ ಜಾರಿಗೆ ತರುವುದರಿಂದ ಸರ್ಕಾರಕ್ಕೆ ಇರುವ ಅಡಚಣೆಗಳೇನು ; ಇಲ್ಲಿಯವರೆಗೆ ಜಾರಿಗೊಳಿಸದಿರಲು ಕಾರಣಗಳೇನು ; (ಸಂಪೂರ್ಣ ಮಾಹಿತಿಯೊಂದಿಗೆ ವಿವರಿಸುವುದು)

(ಇ) ಓ.ಪಿ.ಎಸ್ ಜಾರಿಗೊಳಿಸುವ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡ ಕ್ರಮಗಳೇನು ; (ವಿವರಿಸುವುದು)

(ಈ) ಎನ್.ಪಿ.ಎಸ್ ನಿಂದ ಓ.ಪಿ.ಎಸ್ ಗೆ ಜಾರಿಗೊಳಿಸುವ ನಿಟ್ಟಿನಲ್ಲಿ ಸಮಿತಿ ರಚನೆ ಮಾಡಿರುವುದು ನಿಜವೇ; ಸಮಿತಿ ರಚನೆ ಮಾಡಿದ್ದಲ್ಲಿ, ಯಾವ ದಿನಾಂಕದಿಂದ ಮತ್ತು ಯಾವ ಯಾವ ಸದಸ್ಯರನ್ನೂ ಈ ಸಮಿತಿಗೆ ನೇಮಕ ಮಾಡಲಾಗಿದೆ; (ಈ ಕುರಿತು ಮಾಹಿತಿ ಮತ್ತು ಆದೇಶ ಪ್ರತಿ ನೀಡುವುದು)

(ಉ) ಸದರಿ ಸಮಿತಿಯು ತನ್ನ ಕಾರ್ಯವನ್ನು ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ಪ್ರಸ್ತುತ ಸಮಿತಿಯು ಕೈಗೊಂಡ ಕ್ರಮಗಳೇನು ; ಸದರಿ ಸಮಿತಿಗೆ ವರದಿಯನ್ನು ನೀಡುವಂತೆ ಕಾಲಮಿತಿ ನೀಡಲಾಗಿದೆಯೇ ?

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ಮತ್ತು ಕರ್ನಾಟಕ ಲೋಕಸೇವಾ ಆಯೋಗ ನಡೆಸುವ Group'c' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆ ಅವಧಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೯೩೨ (೧೯೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಗ್ರೂಪ್ 'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿ ಎರಡು ಗಂಟೆ ಇದ್ದು, ಕರ್ನಾಟಕ ಲೋಕಸೇವಾ ಆಯೋಗ ನಡೆಸುವ ಗ್ರೂಪ್ 'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿಯು ೦೧ ಗಂಟೆ ೩೦ ನಿಮಿಷ ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾರಣಕ್ಕಾಗಿ ಒಂದೇ ವೃಂದದ ಪರೀಕ್ಷೆಗಳಿಗೆ ಬೇರೆ-ಬೇರೆ ಕಾಲಾವಧಿ ನಿಗಧಿಪಡಿಸಲಾಗಿದೆ ; (ವಿವರ ನೀಡುವುದು)

(ಆ) ಕರ್ನಾಟಕ ಲೋಕಸೇವಾ ಆಯೋಗ ನಡೆಸುವ ಗ್ರೂಪ್'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿಯು ೦೧ ಗಂಟೆ ೩೦ ನಿಮಿಷ ನಿಗಧಿಪಡಿಸಿರುವುದರಿಂದ ಲಕ್ಷಾಂತರ ಸ್ಪರ್ಧಾರ್ಥಿಗಳಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮಗಳನ್ನು ವಿವರವಾಗಿ ಮತ್ತು ಸ್ಪಷ್ಟವಾಗಿ ವಿವರಿಸುವುದು ;

(ಇ) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ನಡೆಸುವ ಗ್ರೂಪ್ 'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿಯಂತೆ ಕರ್ನಾಟಕ ಲೋಕಸೇವಾ ಆಯೋಗ ನಡೆಸುವ ಗ್ರೂಪ್ 'ಸಿ' ವೃಂದದ ಸಾಮಾನ್ಯ ಜ್ಞಾನ ಪರೀಕ್ಷೆಯ ಕಾಲಾವಧಿಯನ್ನು ಎರಡು ಗಂಟೆಗಳಿಗೆ

ನಿಗಧಿಪಡಿಸಿಲು ಇರುವ ಅಡಚಣೆಗಳು ಯಾವುವು ; ಸಮಯ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯೊಳಗೆ ಹೆಚ್ಚಿಸಿ ಆದೇಶ ಹೊರಡಿಸಲಾಗುವುದು ?

## ರಾಜ್ಯದಲ್ಲಿ ಹಾಗೂ ಬಾಗಲಕೋಟೆ ಜಿಲ್ಲೆಯಲ್ಲಿ ಸಣ್ಣ ನೀರಾವರಿ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಬಗ್ಗೆ

**ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೩ (೧೧೨೭) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಸಂಖ್ಯೆ ಎಷ್ಟು ; ಜಿಲ್ಲಾವಾರು ಮಾಹಿತಿ ಒದಗಿಸುವುದು ;

(ಆ) ಬಾಗಲಕೋಟೆ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು ಹೋಬಳಿವಾರು, ತಾಲ್ಲೂಕಿನ ವಿವರ ಒದಗಿಸುವುದು)

(ಇ) ಕಳೆದ ೨ ವರ್ಷಗಳಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿ ಎಷ್ಟು ಕೆರೆಗಳ ಏರಿ ನಿರ್ಮಾಣ, ಹೂಳೆತ್ತುವ ಕಾಮಗಾರಿ ಮತ್ತು ಇನ್ನಿತರ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಅವುಗಳಿಗೆ ಮಂಜೂರು ಮಾಡಿದ ಅನುದಾನವೆಷ್ಟು ; ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ಒದಗಿಸುವುದು ;

(ಈ) ಬಾಗಲಕೋಟೆ ಜಿಲ್ಲೆಯಲ್ಲಿ ಈವರೆಗೆ ಎಷ್ಟು ಕೆರೆಗಳನ್ನು ಕೆರೆ ತುಂಬಿಸುವ ಯೋಜನೆಗೆ ಒಳಪಡಿಸಲಾಗಿದೆ ; ಇನ್ನು ಎಷ್ಟು ಕೆರೆಗಳನ್ನು ಈ ಯೋಜನೆಯ ವ್ಯಾಪ್ತಿಯಲ್ಲಿ ತರಲಾಗುವುದು ; ತಾಲ್ಲೂಕುವಾರು, ಹೋಬಳಿವಾರು, ಗ್ರಾಮವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು ;

(ಉ) ಸರ್ಕಾರ ಬಾಗಲಕೋಟೆ ಜಿಲ್ಲೆಗೆ ಎಷ್ಟು ಎಕರೆ ಜಮೀನು ನೀರಾವರಿ ವ್ಯಾಪ್ತಿಗೆ ಒಳಪಡಿಸಿದೆ ; ಇನ್ನು ಎಷ್ಟು ಪ್ರದೇಶವನ್ನು ನೀರಾವರಿ ವ್ಯಾಪ್ತಿಯಲ್ಲಿ ತರಲು ಬಯಸಿದೆ ; ತಾಲ್ಲೂಕುವಾರು, ಹೋಬಳಿವಾರು, ಗ್ರಾಮವಾರು ಮಾಹಿತಿ ನೀಡುವುದು ?

## ವಿಶ್ವ ಪರಂಪರೆ ತಾಣ ಪಟ್ಟದಕಲ್ಲಿನಲ್ಲಿ ಪಾರ್ಕಿಂಗ್ ಹಾಗೂ ರಸ್ತೆ ವ್ಯವಸ್ಥೆ ಕಲ್ಪಿಸುವ ಬಗ್ಗೆ

**ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೪ (೧೧೨೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವ ಪರಂಪರೆ ತಾಣ ಪಟ್ಟದಕಲ್ಲನ್ನು ವೀಕ್ಷಣೆ ಮಾಡಲು ಪ್ರವಾಸಿಗರು ಹೆಚ್ಚುತ್ತಿದ್ದು, ಸ್ಮಾರಕಗಳನ್ನು ವೀಕ್ಷಿಸಲು ಬರುತ್ತಿರುವ ಪ್ರವಾಸಿಗರ ವಾಹನ ನಿಲುಗಡೆ ಮಾಡಲು ಪಾರ್ಕಿಂಗ್ ವ್ಯವಸ್ಥೆ ಇಲ್ಲದೇ ಇರುವ ಕಾರಣಕ್ಕೆ ಪ್ರವಾಸಿಗರ ಸಂಖ್ಯೆ ಕಡಿಮೆಯಾಗಿರುವ ವಿಷಯ ಸರ್ಕಾರ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಪಟ್ಟದಕಲ್ಲಿನ ತಾಣದ ಪಕ್ಕದಲ್ಲಿ ಸರ್ಕಾರದ ಅಧೀನದ ನಿವೇಶನ ಲಭ್ಯವಿದ್ದರೂ ಪಾರ್ಕಿಂಗ್ ವ್ಯವಸ್ಥೆ ಮಾಡದೇ ಇರಲು ಕಾರಣಗಳೇನು ; ಈ ಪಾರ್ಕಿಂಗ್ ವ್ಯವಸ್ಥೆ ಯಾವಾಗ ಕಲ್ಪಿಸಲಾಗುವುದು ?

## ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಇಲ್ಲಿಯವರೆಗೂ ನಡೆದ ಸೈಬರ್ ಅಪರಾಧ ಪ್ರಕರಣಗಳ ಕುರಿತು ಹಾಗೂ ದೂರುಗಳ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೫ (೧೧೩೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಇಲ್ಲಿಯವರೆಗೂ ಸೈಬರ್ ಅಪರಾಧ ಪ್ರಕರಣಗಳ ಕುರಿತು ದಾಖಲಾದ ದೂರುಗಳ ಸಂಖ್ಯೆ ಎಷ್ಟು; ಎಷ್ಟು ಪ್ರಕರಣಗಳಲ್ಲಿ ಆರೋಪಿತರಿಗೆ ದಸ್ತಗಿರಿ ಮಾಡಲಾಗಿದೆ ; ಎಷ್ಟು ಪ್ರಕರಣಗಳಲ್ಲಿ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ (ಜಾರ್ಜ್ ಶೀಟ್) ಸಲ್ಲಿಸಲಾಗಿದೆ ; ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಆರ್ಥಿಕ ಸೈಬರ್ ವಂಚನೆ ಪ್ರಕರಣಗಳಲ್ಲಿ ದಾಖಲಾದ ದೂರುಗಳ ಸಂಖ್ಯೆ ಎಷ್ಟು; ಆ ಪ್ರಕರಣಗಳ ಮಾಹಿತಿ ಒದಗಿಸುವುದು ; ಕಳೆದುಕೊಂಡ ಮೊತ್ತ ಎಷ್ಟು; ಫ್ರೀಜ್ ಮಾಡಿಸಲಾದ ಖಾತೆಗಳು ಎಷ್ಟು ; ದೂರುದಾರರಿಗೆ ಹಿಂತಿರುಗಿಸಿದ ಮೊತ್ತ ಎಷ್ಟು; ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಸರ್ಕಾರವು ಸಿಇಎನ್ ಪೊಲೀಸ್ ಠಾಣೆಗಳಿಂದ Cyber Crime Police Station ಗಳಾಗಿ ಪ್ರತ್ಯೇಕವಾಗಿ ಪ್ರಾರಂಭಿಸಿ ಮೇಲ್ವಿಚಾರಣೆ ಮಾಡಲು ವಲಯವಾರು ಎಸ್‌ಪಿ ದರ್ಜೆಯ ಅಧಿಕಾರಿಯನ್ನು ನಿಯುಕ್ತಿಗೊಳಿಸಲಾಗುವುದು ಎಂದು ಆದೇಶದಲ್ಲಿ ತಿಳಿಸಿರುವುದು ಸರಿಯೆಷ್ಟೆ ; ಇವರೆಗೆ ಯಾವುದೇ ವಲಯಗಳಿಗೆ ಎಸ್. ಪಿ ದರ್ಜೆಯ ಅಧಿಕಾರಿಯನ್ನು ನೇಮಿಸದೆ ಇರುವುದರಿಂದ ಸೈಬರ್ ಅಪರಾಧ ಪ್ರಕರಣಗಳ ತನಿಖೆಯಲ್ಲಿ ಹಿನ್ನಡೆಯಾಗುತ್ತಿರುವ ಹಾಗೂ ಪ್ರಕರಣಗಳಿಂದ ವಂಚಿತರಾದ ಜನರಿಗೆ ನ್ಯಾಯ ದೊರಕುವುದು ಅಸಾಧ್ಯವೆಂಬ ಭಾವನೆ ಸಾರ್ವಜನಿಕ ವಲಯದಲ್ಲಿ ಮೂಡಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಯಾವ ಕಾಲಮಿತಿಯಲ್ಲಿ ಅಧಿಕಾರಿಗಳನ್ನು ಸ್ಥಳ ನಿಯುಕ್ತಿಗೊಳಿಸಲಾಗುವುದು ?

## ಸರ್ಕಾರವು ವಿಚಾರಣೆ ಸಂಬಂಧಿಸಿದಂತೆ ವಿಚಾರಣೆ ಆಯೋಗ ಹಾಗೂ ವಿಶೇಷ ತನಿಖಾ ತಂಡ ರಚಿಸಿರುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೩೬ (೧೧೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

**(ಅ)** ಕಳೆದ ೨.೫ ವರ್ಷದಿಂದ ಸರ್ಕಾರ ಎಷ್ಟು ಮತ್ತು ಯಾವ ಯಾವ ವಿಚಾರಕ್ಕೆ ಸಂಬಂಧಪಟ್ಟಂತೆ ವಿಚಾರಣಾ ಆಯೋಗ ಮತ್ತು ವಿಶೇಷ ತನಿಖಾ ತಂಡಗಳನ್ನು ರಚಿಸಿದೆ ; ಈ ವಿಚಾರಣಾ ಆಯೋಗ/ವಿಶೇಷ ತನಿಖಾ ತಂಡದ ನೇತೃತ್ವ ವಹಿಸಿರುವವರು ಯಾರು ; ಇವರಿಗೆ ತನಿಖೆ ಮಾಡಿ ವರದಿ ಸಲ್ಲಿಸಲು ಆದೇಶಿಸಲಾದ ಅಂಶಗಳು ಯಾವುವು ;

(ಆ) ಎಷ್ಟು ತನಿಖಾ ತಂಡ/ವಿಚಾರಣಾ ಆಯೋಗಗಳು ಸರ್ಕಾರಕ್ಕೆ ವರದಿ ಸಲ್ಲಿಸಿವೆ ; ವರದಿ ಸಲ್ಲಿಸಿದ ದಿನಾಂಕ/ವರ್ಷದ ಬಗ್ಗೆ ಮಾಹಿತಿ ನೀಡುವುದು ;

(ಇ) ಸರ್ಕಾರ ಎಷ್ಟು ವರದಿಗಳನ್ನು ಅಂಗೀಕರಿಸಿದೆ ; ಸಲ್ಲಿಸಲಾದ ಎಷ್ಟು ವರದಿಗಳನ್ನು ಪರಿಶೀಲಿಸಿದೆ ; ಅವುಗಳ ಕುರಿತಂತೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ಮಾಹಿತಿ ನೀಡುವುದು ?

## ಅರ್ಕಾವತಿ ನದಿ ಪುನಃಶ್ಚೇತನ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೭ (೧೦೫೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಶಕಗಳ ಹಿಂದೆ ಬೆಂಗಳೂರು ಹಾಗೂ ಸುತ್ತಮುತ್ತಲ ಗ್ರಾಮಗಳಿಗೆ ಪ್ರಮುಖ ಜಲಮೂಲವಾಗಿದ್ದ ಅರ್ಕಾವತಿ ನದಿಯು, ಅವೈಜ್ಞಾನಿಕ ನಗರೀಕರಣದಿಂದಾಗಿ ಸಂಪೂರ್ಣ ಮಲೀನಗೊಂಡು ವಿಷವನ್ನೇ

ತುಂಬಿಕೊಂಡು ಹರಿಯುತ್ತಿದ್ದು, ಈ ನದಿಯ ಪುನಃಶ್ಚೇತನ ಮಾಡಲೇಬೇಕಾದ ತುರ್ತು ಅನಿವಾರ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅರ್ಕಾವತಿ ನದಿ ಮಾಲಿನ್ಯ ತಡೆಗಟ್ಟಿ ಪುನರುಜ್ಜೀವನಕ್ಕೆ ಕ್ರಮ ಕೈಗೊಂಡು ಈ ನದಿಗೆ ಮರುಜೀವ ನೀಡುವ ಕೆಲಸ ಇದುವರೆಗೂ ಪ್ರಾರಂಭವಾಗದಿರಲು ಕಾರಣಗಳೇನು ;

(ಇ) ಅರ್ಕಾವತಿ ನದಿಯ ಪುನಃಶ್ಚೇತನಕ್ಕೆ ಸಂಬಂಧಿಸಿದಂತೆ ಉನ್ನತ ಮಟ್ಟದ ತಜ್ಞರ ಸಮಿತಿಗಳಿಂದ ಇದುವರೆಗೆ ಒಟ್ಟು ಎಷ್ಟು ವರದಿಗಳು ಸಲ್ಲಿಕೆಯಾಗಿವೆ ;

(ಈ) ಉನ್ನತ ಮಟ್ಟದ ತಜ್ಞರ ಸಮಿತಿಗಳಿಂದ ಸಲ್ಲಿಕೆಯಾಗಿರುವ ವರದಿಗಳಲ್ಲಿ ಅರ್ಕಾವತಿ ನದಿಯ ಪುನಃಶ್ಚೇತನಕ್ಕೆ ಸಂಬಂಧಿಸಿದಂತೆ, ಸೂಚಿಸಿರುವ ಸಲಹೆ, ಪರಿಹಾರೋಪಾಯಗಳನ್ನು ಅನುಷ್ಠಾನಕ್ಕೆ ತರಲು ಸರ್ಕಾರ ಇದುವರೆಗೆ ಯಾವುದೇ ಕ್ರಮ ವಹಿಸದಿರಲು ಕಾರಣಗಳೇನು ;

(ಉ) ಯಾವ ಕಾಲಮಿತಿಯೊಳಗೆ ಈಗಾಗಲೇ ಉನ್ನತ ಮಟ್ಟದ ತಜ್ಞರ ಸಮಿತಿಗಳು ಸೂಚಿಸಿರುವ ಎಲ್ಲಾ ಸಲಹೆ, ಶಿಫಾರಸ್ಸು ಮತ್ತು ಪರಿಹಾರೋಪಾಯಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ ಅರ್ಕಾವತಿ ನದಿಯನ್ನು ಪುನಃಶ್ಚೇತನಗೊಳಿಸಿ, ಅದಕ್ಕೆ ಮರುಜೀವ ನೀಡಲಾಗುವುದು ?

## ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೮ (೧೦೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ೨.೩೭ ಲಕ್ಷಕ್ಕೂ ಅಧಿಕ ಹುದ್ದೆಗಳು ತೆರವಾಗಿದ್ದು, ಕಳೆದ ಹಲವಾರು ವರ್ಷಗಳಿಂದ ಭರ್ತಿಯಾಗದೆ ಹಾಗೇ ಖಾಲಿ ಇರುವ ಕಾರಣದಿಂದಾಗಿ ಸಾರ್ವಜನಿಕರು ಸರ್ಕಾರಿ ಸೇವೆಗಳನ್ನು ಪಡೆದುಕೊಳ್ಳಲು ಇಲ್ಲವೇ ತಮ್ಮ ಕೆಲಸ ಕಾರ್ಯಗಳಿಗಾಗಿ ಸರ್ಕಾರಿ ಕಛೇರಿಗಳಿಗೆ ಅಲೆದಾಡಬೇಕಾದ ಪರಿಸ್ಥಿತಿ ಸೃಷ್ಟಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಮಂಜೂರಾದ, ತೆರವಾಗಿರುವ ಮತ್ತು ಪ್ರಸ್ತುತ ಭರ್ತಿಯಾಗಿರುವ ಹುದ್ದೆಗಳ ವಿವರಗಳೇನು ;

(ಇ) ಪ್ರಸ್ತುತ ಎಲ್ಲಾ ಇಲಾಖೆಗಳಲ್ಲಿ ನೌಕರರ ಕೊರತೆಯಿಂದಾಗಿ ಸರ್ಕಾರಿ ಕೆಲಸ ಕಾರ್ಯಗಳು ಆಮೆಗತಿಯಲ್ಲಿ ಸಾಗುತ್ತಿರುವುದರ ಜೊತೆಗೆ ಪ್ರಸ್ತುತ ಇರುವ ಸಿಬ್ಬಂದಿಗಳ ಮೇಲೆ ಭರಿಸಲು ಅಸಾಧ್ಯವಾದ ಕಾರ್ಯದೊತ್ತಡ ಇರುವುದರಿಂದ ಅವರನ್ನು ಮಾನಸಿಕ ಮತ್ತು ದೈಹಿಕ ಸಮಸ್ಯೆಗಳಿಗೆ ದೂಡಿದ್ದು, ಇದನ್ನು ತಪ್ಪಿಸಲು ಸರ್ಕಾರ ಸಕಾಲದಲ್ಲಿ ಮತ್ತು ನಿಯಮಿತವಾಗಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮ ವಹಿಸದಿರಲು ಕಾರಣಗಳೇನು ;

(ಈ) ಸರ್ಕಾರದ ಈ ವಿಳಂಬ ನೀತಿಯಿಂದಾಗಿ ವಿದ್ಯಾವಂತ ಯುವಜನರು ಸರ್ಕಾರಿ ಉದ್ಯೋಗ ಪಡೆಯುವ ಕನಸು ನುಚ್ಚುನೂರಾಗುತ್ತಿರುವುದರ ಜೊತೆಗೆ ಸರ್ಕಾರಿ ಕೆಲಸಗಳಲ್ಲಿ ಅನಗತ್ಯ ವಿಳಂಭಕ್ಕೂ ಕಾರಣವಾಗುತ್ತಿದ್ದು, ಇದನ್ನು ತಪ್ಪಿಸಲು ಪ್ರಸ್ತುತ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಪೂರ್ಣ ಪ್ರಮಾಣದಲ್ಲಿ ಒಂದೇ ಬಾರಿಗೆ ತುಂಬಲು ಸರ್ಕಾರ ಈ ಕೂಡಲೇ ಅಗತ್ಯ ಕ್ರಮವಹಿಸುವುದೇ ;

(ಉ) ಸರ್ಕಾರಿ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಸ್ಪಷ್ಟ ಮಾರ್ಗಸೂಚಿಯನ್ನು ರೂಪಿಸಿ, ನಿಯಮಿತವಾಗಿ ಮತ್ತು ಕಾಲಾನುಕಾಲಕ್ಕೆ ನೇಮಕ ಪ್ರಕ್ರಿಯೆಯನ್ನು ನಡೆಸುವ ಶಾಶ್ವತ ನೀತಿಯನ್ನು ಜಾರಿಗೆ ತರಲು ಸರ್ಕಾರ ಈಗಲಾದರೂ ಮುಂದಾಗುವುದೇ ?

## ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಕಠಿಣ ಕ್ರಮ ಜರುಗಿಸುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩೯ (೧೦೬೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದುಬೈ, ಥಾಯ್ಲೆಂಡ್, ದಕ್ಷಿಣ ಆಫ್ರಿಕಾ, ನೈಜೀರಿಯಾ ಮುಂತಾದ ವಿದೇಶಗಳಲ್ಲಿ ಕಡಿಮೆ ಬೆಲೆಗೆ ದೊರೆಯುವ ಡ್ರಗ್ಸ್ ರಫ್ತು ಮಾಡಿಕೊಂಡು ಬೆಂಗಳೂರು ನಗರದಲ್ಲಿ ಮಾರಾಟ ಮಾಡುತ್ತಿರುವ ಪ್ರಕರಣಗಳು ವರದಿಯಾಗಿದ್ದು, ಹಲವಾರು ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳು ಈ ರೀತಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ನಿರಂತರವಾಗಿ ಭಾಗಿಯಾಗುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ವಿದೇಶಗಳಲ್ಲಿ ಕಡಿಮೆ ಬೆಲೆಗೆ ದೊರೆಯುವ ಡ್ರಗ್ಸ್ ರಫ್ತು ಮಾಡಿಕೊಂಡು ಬೆಂಗಳೂರು ನಗರದಲ್ಲಿ ಸಾರ್ವಜನಿಕರಿಗೆ. ಐಟಿ ಕಂಪನಿಯ ಉದ್ಯೋಗಿಗಳಿಗೆ, ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಹೋಟೆಲ್ ಮತ್ತು ಪಬ್‌ಗಳಿಗೆ ಹೆಚ್ಚಿನ ಬೆಲೆಗೆ ಅಕ್ರಮವಾಗಿ ಮಾರಾಟ ಮಾಡುತ್ತಿದ್ದು, ಸದರಿ ಪ್ರಕರಣಗಳಲ್ಲಿ ಡ್ರಗ್ಸ್ ಪೆಡ್ಲರ್ಸ್‌ಗಳು ಬಹು ವ್ಯವಸ್ಥಿತವಾಗಿ ಮತ್ತು ಹೈಟೆಕ್ ಮಾದರಿಯಲ್ಲಿ ತಮ್ಮ ಜಾಲ ಹೆಣೆದಿರುವುದು ಕಂಡು ಬಂದಿದ್ದು, ಸರ್ಕಾರ ಅತ್ಯಂತ ಕಠಿಣ ಕಾನೂನು ಕ್ರಮಗಳನ್ನು ಅಂತಹವರ ವಿರುದ್ದ ಜರುಗಿಸಲು ಈಗಾಗಲೇ ಅಗತ್ಯ ಕ್ರಮ ವಹಿಸಿದೆಯೇ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ತೊಡಗಿರುವ ಎಷ್ಟು ಜನ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಪ್ರಕರಣಗಳು ದಾಖಲಾಗಿವೆ ಹಾಗೂ ಅವರ ವಿರುದ್ಧ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಈ) ನಾಗರಿಕ ಸಮಾಜಕ್ಕೆ ಪಿಡುಗು ಮತ್ತು ಸವಾಲಾಗಿ ಪರಿಣಮಿಸಿರುವ ಈ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ದ ಅತ್ಯಂತ ಕಠಿಣ ಕ್ರಮಗಳನ್ನು ಕೈಗೊಂಡು ದಿನೇದಿನೇ ವಿವಿಧ ಮಾದರಿಯಲ್ಲಿ ವ್ಯಾಪಕವಾಗಿ ಹರಡುತ್ತಿರುವ ಡ್ರಗ್ಸ್ ಜಾಲಕ್ಕೆ ಶಾಶ್ವತವಾಗಿ ಕಡಿವಾಣ ಹಾಕಲು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಅಣೆಕಟ್ಟುಗಳ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೦ (೧೦೬೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಅಣೆಕಟ್ಟುಗಳ ಸಂಖ್ಯೆ ಎಷ್ಟು ಮತ್ತು ಯಾವುವು ; ಅವುಗಳು ನಿರ್ಮಾಣಗೊಂಡ ಕಾಲಾವಧಿ ಯಾವುದು ; (ಜಿಲ್ಲಾವಾರು ಪ್ರತ್ಯೇಕ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಸದರಿ ಪ್ರತಿಯೊಂದು ಅಣೆಕಟ್ಟುಗಳ ಸುರಕ್ಷತೆ, ಪುನರುಜ್ಜೀವನ, ಸುಧಾರಣೆ ಮತ್ತು ನಿರ್ವಹಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಮತ್ತು ವಿನಿಯೋಗಿಸಿರುವ ಅನುದಾನದ ವಿವರಗಳೇನು : (ಪ್ರತಿ ಅಣೆಕಟ್ಟಿನ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಸದರಿ ಅಣೆಕಟ್ಟುಗಳ ಮೂಲ ಜಲ ಸಂಗ್ರಹಣಾ ಸಾಮರ್ಥ್ಯವೆಷ್ಟು; ಹಾಗೂ ಪ್ರಸ್ತುತ ಜಲ ಸಂಗ್ರಹಣಾ ಸಾಮರ್ಥ್ಯವೆಷ್ಟು ; (ಪ್ರತಿ ಅಣೆಕಟ್ಟಿನ ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಈ) ಸದರಿ ಅಣೆಕಟ್ಟುಗಳ ಮೂಲ ಜಲ ಸಂಗ್ರಹಣಾ ಸಾಮರ್ಥ್ಯವನ್ನು ಕಾಪಾಡಲು/ಮರು ಸ್ಥಾಪಿಸಲು ಅವುಗಳಲ್ಲಿ ತುಂಬಿರುವ ಹೂಳನ್ನು ನಿಗದಿತ ಅವಧಿಯೊಳಗೆ ಮತ್ತು ಕಾಲಕಾಲಕ್ಕೆ ತೆಗೆಯಲು ಅನುಸರಿಸುತ್ತಿರುವ ಕ್ರಮಗಳೇನು ;

(ಉ) ಪ್ರಸ್ತುತ ರಾಜ್ಯದ ಎಷ್ಟು ಅಣೆಕಟ್ಟುಗಳು ಪೂರ್ಣ ಪ್ರಮಾಣದಲ್ಲಿ ಮೂಲ ಜಲ ಸಂಗ್ರಹಣಾ ಸಾಮರ್ಥ್ಯವನ್ನು ಪಡೆದಿವೆ ; ಮೂಲ ಜಲ ಸಂಗ್ರಹಣಾ ಸಾಮರ್ಥ್ಯವು ತಗ್ಗಿದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಊ) ಕಳೆದ ಮೂರು ವರ್ಷಗಳಲ್ಲಿ ಹೂಳು ತುಂಬಿರುವ ಕಾರಣದಿಂದಾಗಿ ಮೂಲ ಜಲ ಸಂಗ್ರಹಣಾ ಸಾಮರ್ಥ್ಯವನ್ನು ತಗ್ಗಿಸಿಕೊಂಡಿರುವ ಅಣೆಕಟ್ಟುಗಳ ಮೂಲ ಜಲ ಸಂಗ್ರಹಣಾ ಸಾಮರ್ಥ್ಯವನ್ನು ಮರು ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ದಕ್ಷಿಣ ಕನ್ನಡ ಜಿಲ್ಲೆಯ ಪೊಲೀಸ್ ಠಾಣೆಗಳ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪೧ (೧೦೬೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಠಾಣೆಗಳು ಎಷ್ಟು : ಸದರಿ ಠಾಣೆಗಳಿಗೆ ಮಂಜೂರಾಗಿರುವ ಕಾರ್ಯನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ವಿವರಗಳನ್ನು ನೀಡುವುದು ;

(ಆ) ಕಳೆದ ೨ ವರ್ಷಗಳಲ್ಲಿ ಜಿಲ್ಲೆಯಲ್ಲಿ ಹೊಸದಾಗಿ ಎಷ್ಟು ಪೊಲೀಸ್ ಠಾಣೆಗಳನ್ನು ಸೃಜಿಸಲಾಗಿದೆ: ಅಥವಾ ಮೇಲ್ದರ್ಜೆಗೇರಿಸಲಾಗಿದೆ ;

(ಇ) ಹೊಸದಾಗಿ ಸೃಜಿಸಿದ ಅಥವಾ ಮೇಲ್ದರ್ಜೆಗೇರಿಸಲಾದ ಎಲ್ಲಾ ಪೊಲೀಸ್ ಠಾಣೆಗಳಿಗೆ ಅಗತ್ಯ ಕಛೇರಿಗಳು ಹಾಗೂ ಮೂಲ ಸೌಕರ್ಯಗಳನ್ನು ಈಗಾಗಲೇ ಸಂಪೂರ್ಣವಾಗಿ ಕಲ್ಪಿಸಲಾಗಿದೆಯೇ ;

(ಈ) ಹೊಸದಾಗಿ ಸೃಜಿಸಿದ ಅಥವಾ ಮೇಲ್ದರ್ಜೆಗೇರಿಸಲಾದ ಎಲ್ಲಾ ಪೊಲೀಸ್ ಠಾಣೆಗಳಿಗೆ ಪೂರ್ಣ ಪ್ರಮಾಣದಲ್ಲಿ ಸಿಬ್ಬಂದಿಗಳು ಹಾಗೂ ಅಧಿಕಾರಿಗಳನ್ನು ಈಗಾಗಲೇ ನಿಯುಕ್ತಿಗೊಳಿಸಲಾಗಿದೆಯೇ ;

(ಉ) ಹೊಸದಾಗಿ ಸೃಜಿಸಿದ ಅಥವಾ ಮೇಲ್ದರ್ಜೆಗೇರಿಸಲಾದ ಪೊಲೀಸ್ ಠಾಣೆಗಳಲ್ಲಿ ಹಾಲಿ ಖಾಲಿ ಇರುವ ಹುದ್ದೆಗಳಿಗೆ ಯಾವ ಕಾಲಮಿತಿಯೊಳಗೆ ಸಿಬ್ಬಂದಿ ಮತ್ತು ಅಧಿಕಾರಿಗಳನ್ನು ನಿಯುಕ್ತಿಗೊಳಿಸಲಾಗುವುದು ?

## ರಾಜ್ಯದಲ್ಲಿರುವ ಅಣೆಕಟ್ಟುಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೯೪೨ (೧೧೦೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅಣೆಕಟ್ಟುಗಳು ಎಷ್ಟು ; ಯಾವ ಯಾವ ಅಣೆಕಟ್ಟುಗಳು ಯಾವ ಯಾವ ವರ್ಷದಲ್ಲಿ ಪ್ರಾರಂಭವಾಗಿರುತ್ತದೆ ; ಎಷ್ಟು ಅಚ್ಚುಕಟ್ಟು ಪ್ರದೇಶಕ್ಕೆ ಇವುಗಳ ಅನುಕೂಲವಾಗುತ್ತದೆ ; ಇವುಗಳ ಪೂರ್ಣ ವಿವರಗಳನ್ನು ಒದಗಿಸುವುದು ;

(ಆ) ರಾಜ್ಯದಲ್ಲಿರುವ ೨೫ ವರ್ಷ ಮೀರಿದ ಹಳೆಯ ಅಣೆಕಟ್ಟುಗಳು ಎಷ್ಟು : ಇವುಗಳ ಸುರಕ್ಷತೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯ ಸರ್ಕಾರ ಹೊಸದಾಗಿ ನಿರ್ಮಿಸಲು ಉದ್ದೇಶಿಸಿರುವ ಅಣೆಕಟ್ಟುಗಳು ಎಷ್ಟು ; ಉದ್ದೇಶ ಇದ್ದಲ್ಲಿ. ಇದರಿಂದ ಎಷ್ಟು ಅಚ್ಚುಕಟ್ಟು ಪ್ರದೇಶಗಳಿಗೆ ನೀರಾವರಿ ನೀಡಬಹುದು ;

(ಈ) ರಾಜ್ಯ ಸರ್ಕಾರ ಯಾವ ಯಾವ ಅಣೆಕಟ್ಟುಗಳನ್ನು ಅಭಿವೃದ್ಧಿಪಡಿಸಲು ಮತ್ತು ಅಣೆಕಟ್ಟನ್ನು ಎತ್ತರಿಸುವ ಉದ್ದೇಶ ಹೊಂದಿರುತ್ತದೆ ಮತ್ತು ಇದರ ಅಂದಾಜು ವೆಚ್ಚ ಎಷ್ಟು: (ವಿವರಗಳನ್ನು ಒದಗಿಸುವುದು)

(ಉ) ಕೇಂದ್ರ ಸರ್ಕಾರ ಕಳೆದ ೩ ವರ್ಷಗಳಲ್ಲಿ ರಾಜ್ಯದ ನೀರಾವರಿ ಅಣೆಕಟ್ಟುಗಳನ್ನು ಅಭಿವೃದ್ಧಿಪಡಿಸಲು ನೀಡಿರುವ ಅನುದಾನಗಳು ಎಷ್ಟು ? (ವಿವರಗಳನ್ನು ಒದಗಿಸುವುದು)

## ಬೆಂಗಳೂರಿನ ಬಿ.ಎಸ್.ಎನ್.ಎಲ್ ಎಂಪ್ಲಾಯಿಸ್ ಅಂಡ್ ಸಿಟಿಜನ್ಸ್ ಹೌಸ್ ಬಿಲ್ಡಿಂಗ್ ಸೊಸೈಟಿ ಕಾರ್ಯಚಟುವಟಿಕೆಗಳ ಬಗ್ಗೆ

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೯೪೩ (೧೧೦೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಬಿ.ಎಸ್.ಎನ್.ಎಲ್ ಎಂಪ್ಲಾಯಿಸ್ ಅಂಡ್ ಸಿಟಿಜನ್ಸ್ ಹೌಸ್ ಬಿಲ್ಡಿಂಗ್ ಸೊಸೈಟಿ ನಿಯಮಿತ ಯಾವಾಗ ನೋಂದಾವಣೆಯಾಗಿರುತ್ತದೆ ; ಸದರಿ ಸಹಕಾರ ಸಂಘದಲ್ಲಿ ಇರುವ ಸಾಮಾನ್ಯ ಸದಸ್ಯರು ಸಹ ಸದಸ್ಯರ ಸಂಖ್ಯೆ ಎಷ್ಟು ;

(ಆ) ಸದರಿ ಸಹಕಾರ ಸಂಘದ ಬೈಲಾ ಅನ್ವಯ ಕಾರ್ಯ ವ್ಯಾಪ್ತಿ ಎಷ್ಟು ; ಸದರಿ ಸಂಘದಲ್ಲಿ ಯಾರಿಗೆ ಯಾವ ಯಾವ ಮಾನದಂಡಗಳ ಮೇಲೆ ಸದಸ್ಯತ್ವ ನೀಡಲಾಗುತ್ತದೆ. ಸಂಘದ ಇತ್ತೀಚಿನ ಬೈಲಾ ಪ್ರತಿಯನ್ನು ಒದಗಿಸುವುದು ;

(ಇ) ಸದರಿ ಸಹಕಾರ ಸಂಘದಲ್ಲಿ ನಿವೇಶನ ಹಂಚಿಕೆಯನ್ನು ವಾಣಿಜ್ಯ ಚಟುವಟಿಕೆಯಾಗಿ ನಡೆಸುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಸದಸ್ಯರಲದವರಿಗೆ ನಿವೇಶನಗಳನ್ನು ಹಂಚಲು ಬೈಲಾದಲ್ಲಿ ಅವಕಾಶ ಇರುತ್ತದೆಯೇ ; ಸಹಕಾರ ಕಾಯ್ದೆ ಮತ್ತು ನಿಯಮಗಳ ಅನ್ವಯ ಸಂಘದ ನಿವೇಶನಗಳನ್ನು ವಾಣಿಜ್ಯ ಚಟುವಟಿಕೆ ಮುಖಾಂತರ ಜಾಹೀರಾತುಗಳನ್ನು ನೀಡಿ ಹಂಚಲು ಅವಕಾಶ ಇದೆಯೇ ;

(ಈ) ಸದರಿ ಸಹಕಾರ ಸಂಘದ ಆಡಿಟ್ ಪ್ರತಿ ವರ್ಷ ನಡೆಸಲಾಗಿದೆಯೇ; ನಡೆಸಿದ್ದಲ್ಲಿ, ಅದರ ಪ್ರತಿಗಳನ್ನು ಒದಗಿಸುವುದು ;

(ಉ) ನಿವೇಶನ ಹಂಚಿಕೆಯ ಸಂಬಂಧ ಈ ಸಹಕಾರ ಸಂಘದ ಮೇಲೆ ಇಲಾಖೆಗೆ ದೂರುಗಳು ಬಂದಿದೆಯೇ ; ಬಂದಿದ್ದಲ್ಲಿ, ಇದರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳು ಏನು ; ಸದಸ್ಯರು ಅಲ್ಲದವರಿಗೆ ಎಷ್ಟು ನಿವೇಶನಗಳನ್ನು ಹಂಚಲಾಗಿದೆ ಫಲಾನುಭವಿಗಳ ಸದಸ್ಯತ್ವ ಸಂಖ್ಯೆ ಸಮೇತ ವಿವರಗಳನ್ನು ಒದಗಿಸುವುದು ?

## ಕರ್ನಾಟಕ ವಿಧಿ ವಿಜ್ಞಾನ ಪ್ರಯೋಗಾಲಯಗಳ ನಿರ್ದೇಶನಾಲಯದ ಕಾರ್ಯಚಟುವಟಿಕೆಗಳ ಬಗ್ಗೆ

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೯೪೪ (೧೧೦೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿಧಿ ವಿಜ್ಞಾನ ಪ್ರಯೋಗಾಲಯಗಳ ನಿರ್ದೇಶನಾಲಯ ಯಾವಾಗ ಅಸ್ತಿತ್ವಕ್ಕೆ ಬಂದಿರುತ್ತದೆ ಇದರ ಮೂಲ ಉದ್ದೇಶಗಳು ಏನು; ಕಾರ್ಯ ಚಟುವಟಿಕೆಗಳ ಕ್ಷೇತ್ರ ಎಷ್ಟು ;

(ಆ) ವಿಧಿ ವಿಜ್ಞಾನ ಪ್ರಯೋಗಾಲಯಗಳ ನಿರ್ದೇಶನಾಲಯ ಎಷ್ಟು ವಿಭಾಗಗಳಲ್ಲಿ ಕಾರ್ಯ ನಿರ್ವಹಿಸುತ್ತಿದೆ; ಈ ವಿಭಾಗವು ಸಂಚಾರಿ ನ್ಯಾಯ ವಿಜ್ಞಾನ ಪ್ರಯೋಗಾಲಯಗಳನ್ನು ಹೊಂದಿದೆಯೇ ; ಹೊಂದಿದ್ದಲ್ಲಿ ಅದರ ವಿವರಗಳನ್ನು ನೀಡುವುದು ;

(ಇ) ವಿಧಿ ವಿಜ್ಞಾನ ಪ್ರಯೋಗಾಲಯಗಳ ನಿರ್ದೇಶನಾಲಯ ಎಷ್ಟು ವಿಭಾಗಗಳನ್ನು ಹೊಂದಿರುತ್ತದೆ ; ವಿಭಾಗಗಳ ವಿವರಗಳನ್ನು ನೀಡುವುದು ;

(ಈ) ಕರ್ನಾಟಕ ವಿಧಿ ವಿಜ್ಞಾನ ಪ್ರಯೋಗಾಲಯಗಳ ನಿರ್ದೇಶನಾಲಯಕ್ಕೆ ಹಂಚಿಕೆಯಾದ ಸಿಬ್ಬಂದಿ ಎಷ್ಟು ; ಹಂಚಿಕೆಯ ಸಿಬ್ಬಂದಿಯಲ್ಲಿ ಪ್ರಸ್ತುತ ಇರುವ ಸಿಬ್ಬಂದಿ ಹಾಗೂ ಖಾಲಿ ಇರುವ ಸಿಬ್ಬಂದಿ

ಎಷ್ಟು ನಿಯೋಜನೆಯ ಮೇಲೆ ಇರುವ ಸಿಬ್ಬಂದಿ ಎಷ್ಟು ಖಾಲಿ ಇರುವ ಸಿಬ್ಬಂದಿಯನ್ನು ತುಂಬಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿರುತ್ತದೆ ;

(ಉ) ಕರ್ನಾಟಕದ ವಿಧಿ ವಿಜ್ಞಾನ ಪ್ರಯೋಗಾಲಯ ಎನ್.ಎ.ಬಿ.ಎಲ್ ಮಾನ್ಯತೆಯನ್ನು ಹೊಂದಿದೆಯೇ; ಹೊಂದಿದ್ದಲ್ಲಿ, ಇದರಿಂದ ಯಾವ ಯಾವ ವಿಭಾಗದಲ್ಲಿ ಅವರು ಸಾಕ್ಷಿ ನೀಡಲು ಮತ್ತು ಪ್ರಯೋಗ ಮಾಡಲು ಅವಕಾಶವಿರುತ್ತದೆ ; ಈ ಪ್ರಯೋಗಾಲಯ ಸೈಬರ್ ಪ್ರಯೋಗಾಲಯ ಹೊಂದಿರುತ್ತದೆಯೇ ; ಹೊಂದಿದ್ದಲ್ಲಿ, ಇದರ ಪ್ರಯೋಜನಗಳೇನು ?

## ಸನ್ನದುಗಳ ಮಂಜೂರಾತಿ ಮತ್ತು ನವೀಕರಣ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೯೪೫ (೧೧೦೮) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಅಬಕಾರಿ ಇಲಾಖೆಯ ಸರಳೀಕರಣ ಮತ್ತು ಸುಧಾರೀಕರಣಕ್ಕೆ ತೆಗೆದುಕೊಂಡಿರುವ ಕ್ರಮಗಳೇನು ; ಅಬಕಾರಿ ಸೇವೆಗಳನ್ನು ಸರಳೀಕರಣಗೊಳಿಸಲು ಸರ್ಕಾರ ಜಾರಿಗೊಳಿಸಿರುವ ತಂತ್ರಾಂಶಗಳು ಯಾವುವು ;

(ಆ) ಅಬಕಾರಿ ಇಲಾಖೆಯು ಹೊಸ ಸನ್ನದುಗಳನ್ನು ಮಂಜೂರಾತಿ ಮಾಡಲು ಮತ್ತು ಸನ್ನದುಗಳ ನವೀಕರಣ ಮಾಡಲು ಆನ್ಲೈನ್ ಅರ್ಜಿಗಳಿಗೆ ಅವಕಾಶ ಕಲ್ಪಿಸಿದೆಯೇ ; ಕಲ್ಪಿಸಿದ್ದಲ್ಲಿ, ಇದರ ವಿವರಗಳನ್ನು ಒದಗಿಸುವುದು ;

(ಇ) ರಾಜ್ಯ ಸರ್ಕಾರವು ಅಬಕಾರಿ ಇಲಾಖೆಯ ಸಂಪನ್ಮೂಲ ಕ್ರೋಢಿಕರಣಕ್ಕೆ ತಜ್ಞರ ಸಮಿತಿಯನ್ನು ರಚಿಸಿರುತ್ತದೆಯೇ; ರಚಿಸಿದ್ದಲ್ಲಿ, ಯಾವಾಗ ಈ ಸಮಿತಿಯನ್ನು ರಚಿಸಲಾಗಿರುತ್ತದೆ ; ಸಮಿತಿಯಲ್ಲಿ

ಇರುವ ತಜ್ಞರುಗಳ ವಿವರಗಳನ್ನು ಹಾಗೂ ತಜ್ಞರ ಸಮಿತಿ ನೀಡಿರುವ ವರದಿಯ ಪ್ರತಿಯನ್ನು ಒದಗಿಸುವುದು ;

(ಈ) ರಾಜ್ಯದ ಅಬಕಾರಿ ಇಲಾಖೆಯಲ್ಲಿ ಸಿ.ಎಲ್ ೭ ಸನ್ನದು ಮಂಜೂರಾತಿ ಮಾಡಲು ಇರುವ ಪ್ರಕ್ರಿಯೆಗಳ ವಿಧಾನಗಳೇನು; (ವಿವರಗಳನ್ನು ಒದಗಿಸುವುದು) ಪ್ರಸ್ತುತ ರಾಜ್ಯದಲ್ಲಿ ಇರುವ ಸಿ.ಎಲ್ ಸನ್ನದುಗಳು ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಉ) ರಾಜ್ಯದಲ್ಲಿ ಇರುವ ಮೈಕ್ರೋ ಬ್ರಿವರಿ ಸನ್ನದುಗಳು ಎಷ್ಟು ಇವುಗಳನ್ನು ಮಂಜೂರು ಮಾಡಲು ಇರುವ ಮಾನದಂಡಗಳೇನು ? (ಮಂಜೂರಾಗಿರುವ ದಿನಾಂಕ ಮತ್ತು ಸನ್ನದುಗಳ ಪೂರ್ಣ ವಿವರಗಳನ್ನು ಒದಗಿಸುವುದು)

## ಕಾನೂನು ಶಾಲೆಗಳ ಕಾರ್ಯಚಟುವಟಿಕೆಗಳ ಕುರಿತು

**ಶ್ರೀ ರಮೇಶ್ ಬಾಬು (ನಾಮನಿರ್ದೇಶನ ಹೊಂದಿದವರು) :–**

೯೪೬ (೧೧೩೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇರುವ ಒಟ್ಟು ಕಾನೂನು ಶಾಲೆಗಳು ಎಷ್ಟು : ಇವುಗಳಲ್ಲಿ ಮೂರು ವರ್ಷದ ಪದವಿ ಮತ್ತು ೫ ವರ್ಷದ ಪದವಿ ನೀಡುತ್ತಿರುವ ಕಾಲೇಜುಗಳು ಯಾವುವು ; (ಪೂರ್ಣ ವಿವರಗಳನ್ನು ಒಗಿಸುವುದು)

(ಆ) ಕರ್ನಾಟಕದಲ್ಲಿ ಯಾವ ಯಾವ ಕಾನೂನು ಕಾಲೇಜುಗಳಿಗೆ ಸಂಜೆ ಕಾಲೇಜುಗಳನ್ನು ನಡೆಸಲು ಅನುಮತಿ ನೀಡಲಾಗಿದೆ ; ನೀಡಿದ್ದಲ್ಲಿ, ಇವುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಪೂರ್ಣ ವಿವರಗಳನ್ನು ಒದಗಿಸುವುದು)

(ಇ) ಸರ್ಕಾರ ಅರೆ ಸರ್ಕಾರಿ ಅಥವಾ ಖಾಸಗಿ ಸಂಸ್ಥೆಗಳಲ್ಲಿ ಕೆಲಸ ಮಾಡುತ್ತಿರುವ ನೌಕರರು ಅನುಮತಿ ಇಲ್ಲದೆ ಪೂರ್ಣಾವಧಿ ಸಮಯದಲ್ಲಿ ಅಥವಾ ಕೆಲಸದ ಸಮಯದಲ್ಲಿ ಕಾನೂನು ಕೆಲಸಗಳಲ್ಲಿ ವ್ಯಾಸಂಗ ಮಾಡಲು ಅವಕಾಶವಿದೆಯೇ ; ಇದ್ದಲ್ಲಿ ವಿವರಗಳನ್ನು ಒದಗಿಸುವುದು ;

(ಈ) ಸರ್ಕಾರದ ಅಥವಾ ಕೆಲಸ ಮಾಡುತ್ತಿರುವ ಸಂಸ್ಥೆಗಳ ಅನುಮತಿ ಇಲ್ಲದೇ ಕೆಲಸದ ಸಮಯದಲ್ಲಿ ಅನಧಿಕೃತವಾಗಿ ಕಾನೂನು ಪದವಿ ಪಡೆದಿದ್ದಲ್ಲಿ ಅಥವಾ ಕಾನೂನು ಪದವಿ ವ್ಯಾಸಂಗ ಮಾಡುತ್ತಿದ್ದಲ್ಲಿ ಅಂತಹ ಪದವಿ ಊರ್ಜಿತವಾಗುತ್ತದೆಯೇ ;

(ಉ) ಕಾನೂನುಬಾಹಿರವಾಗಿ ಕಾನೂನು ಪದವಿ ಪಡೆದ ವಿದ್ಯಾರ್ಥಿಗಳು ಬಾರ್ ಕೌನ್ಸಿಲ್‌ನಲ್ಲಿ ನೋಂದಾವಣೆ ಮಾಡಿಕೊಳ್ಳಲು ಕಾನೂನಿನಲ್ಲಿ ಅವಕಾಶ ಇದೆಯೇ ; ಇಲ್ಲದೆ ಇದ್ದಲ್ಲಿ, ಅವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗುತ್ತದೆ ;

(ಊ) ಸರ್ಕಾರದ ಅಥವಾ ಕೆಲಸ ಮಾಡುತ್ತಿರುವ ಸಂಸ್ಥೆಗಳ ಅನುಮತಿ ಇಲ್ಲದೆ ಕಾನೂನು ಪದವಿ ವ್ಯಾಸಂಗ ಮಾಡಲು ಅನುಮತಿ ನೀಡಿರುವ ಕಾಲೇಜುಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ; ಕೈಗೊಂಡಿದ್ದಲ್ಲಿ, ಅಂತಹ ಕಾಲೇಜುಗಳ ಮತ್ತು ವಿದ್ಯಾರ್ಥಿಗಳ ಪೂರ್ಣ ವಿವರಗಳನ್ನು ನೀಡುವುದು ?

## ಬೆಂಗಳೂರು ನಗರಗಳಲ್ಲಿ ಸಂಚಾರ ದಟ್ಟಣೆ ಮತ್ತು ನಿರ್ವಹಣೆ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೪೭ (೧೦೪೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮತ್ತು ಇತರ ಪ್ರಮುಖ ನಗರಗಳಲ್ಲಿ ಗರಿಷ್ಠ ಸಮಯದಲ್ಲಿ ಸರಾಸರಿ ಪ್ರಯಾಣದ ವೇಗ ಎಷ್ಟು : ಕಳೆದ ೩ ವರ್ಷಗಳಲ್ಲಿ ಅದು ಹೇಗೆ ಬದಲಾಗಿದೆ: ಮಾಹಿತಿ ನೀಡುವುದು ;

(ಆ) ಪದೇ ಪದೇ ಸಂಚಾರ ದಟ್ಟಣೆ ದೂರುಗಳು ಬಂದರೂ ಪ್ರಮುಖ ಚಾಕ್ ಪಾಯಿಂಟ್ ಗಳಲ್ಲಿ ಸಂಚಾರ ಪೋಲಿಸರ ನಿಯೋಜನೆ ಸಾಕಾಗುತ್ತಿಲ್ಲದಿರುವುದಕ್ಕೆ ಕಾರಣವೇನು ;

(ಇ) ಸಿಗ್ನಲ್‌ಗಳು ಯು–ಟರ್ನ್‌ಗಳು ಮತ್ತು ಬ್ಯಾರಿಕೇಡ್ಸ್‌ಗಳ ನಿಯೋಜನೆಗೆ ಯಾವ ವೈಜ್ಞಾನಿಕ ಅಧ್ಯಯನಗಳು ಮಾರ್ಗದರ್ಶನ ನೀಡುತ್ತವೆ ;

(ಈ) ಪ್ರಸ್ತುತ ಎಷ್ಟು ಸಿಸಿಟಿವಿ ಮತ್ತು ಎಎನ್‌ಪಿಆರ್ ಕ್ಯಾಮೆರಾಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಎಷ್ಟು ಕಾರ್ಯನಿರ್ವಹಿಸುತ್ತಿಲ್ಲ ; ಮಾಹಿತಿ ನೀಡುವುದು ;

(ಉ) ತಪ್ಪು ಅಥವಾ ನಕಲು ಸಂಚಾರ ದಂಡಗಳನ್ನು ತಡೆಯಲು ಸರ್ಕಾರದ ಹಂತದಲ್ಲಿ ಯಾವ ಕ್ರಮ ಕೈಗೊಳ್ಳಲಾಗುವುದು ;

(ಊ) ಸಂಚಾರ ದಂಡದಿಂದ ಬರುವ ಆದಾಯವನ್ನು ರಸ್ತೆ ಸುರಕ್ಷತೆ ಮತ್ತು ಪಾದಚಾರಿ ಮೂಲಸೌಕರ್ಯಕ್ಕೆ ಮರುಹೂಡಿಕೆ ಮಾಡಲಾಗುತ್ತಿದೆಯೇ ?

## ಸೈಬರ್ ಅಪರಾಧಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೪೮ (೧೦೪೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳು ವ್ಯಾಪಕವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು : (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಇಲ್ಲಿಯವರೆಗೆ ಇದನ್ನು ನಿಯಂತ್ರಿಸಲು ತಾಂತ್ರಿಕವಾಗಿ ಸಶಕ್ತ ಪ್ರತ್ಯೇಕ ವಿಭಾಗಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ರಾಜ್ಯದಲ್ಲಿ ವಾಹನ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೪೯ (೧೦೪೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಾಹನ ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ. ಸಂಚಾರ ನಿಯಮ ಉಲ್ಲಂಘನೆಗಳಿಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಸಾರ್ವಜನಿಕರಿಗೆ ಸಂಚಾರಿ ನಿಯಮಗಳ ಬಗ್ಗೆ ಅರಿವು ಮೂಡಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ ;

(ಇ) ಕಳೆದ ಮೂರು ವರ್ಷಗಳಿಂದ ಸಂಚಾರಿ ನಿಯಮ ಉಲ್ಲಂಘನೆಗೆ ವಿಧಿಸಿರುವ ದಂಡದ ಮೊತ್ತವೆಷ್ಟು; ಸಂಪೂರ್ಣ ಮಾಹಿತಿ ನೀಡುವುದು ;

(ಈ) ಶೇಖಡ ಎಷ್ಟು ಪ್ರಮಾಣದ ದಂಡ ವಸೂಲಾತಿ ಮಾಡಲಾಗಿದೆ ;

(ಉ) ದಂಡ ವಸೂಲಾತಿ ಮೊತ್ತವನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗುತ್ತಿದೆ ; ಬಳಕೆಯಾಗಿರುವ ಮೊತ್ತದ ವಿವರಗಳೇನು ? (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

## ಬೆಂಗಳೂರಿನಲ್ಲಿ ಮಳೆಯ ನಂತರ ಪ್ರವಾಹ ಉಂಟಾಗುತ್ತಿರುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೫೦ (೧೦೪೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿ ಮಧ್ಯಮ ಮಳೆಯ ನಂತರ ಬೆಂಗಳೂರಿನಲ್ಲಿ ಪ್ರವಾಹ ಉಂಟಾಗುತ್ತಿರುವುದರಿಂದ ಸರ್ಕಾರದಿಂದ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ;

(ಆ) ಎಷ್ಟು ಮಳೆ ನೀರಿನ ಚರಂಡಿಗಳು ಅತಿಕ್ರಮಣಗೊಂಡಿವೆ ಮತ್ತು ಎಷ್ಟು ಭೂಮಿಯನ್ನು ತೆರವುಗೊಳಿಸಲಾಗಿದೆ ;

(ಇ) ಮುಂದಿನ ಮಾನ್ಸೂನ್ ಮೊದಲು ಸರ್ಕಾರ ಯಾವ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ ?

## ನ್ಯಾಯಮೂರ್ತಿ ಕೆಂಪಣ್ಣ ಆಯೋಗದ ವರದಿಯನ್ನು ಅಂಗೀಕರಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೧ (೯೯೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರಚಿಸಿರುವ ಅರ್ಕಾವತಿ ಬಡಾವಣೆಯಲ್ಲಿ ಜಮೀನನ್ನು ಡಿನೋಟಿಫೈ / ರೀಡೂ ಮಾಡುವ ಕುರಿತು ಸರ್ವೋಚ್ಚ ನ್ಯಾಯಾಲಯ ನೀಡಿದ್ದ ಸೂಚನೆ ಏನು ; ಎಷ್ಟು ಎಕರೆ ಜಮೀನನ್ನು ಡಿನೋಟಿಫೈ / ರೀಡೂ ಮಾಡಲಾಗಿದೆ ; ನ್ಯಾಯಾಲಯದ ಸೂಚನೆ ಮೀರಿ ಎಷ್ಟು ಪ್ರಕರಣಗಳಲ್ಲಿ ಜಮೀನು ರೀಡೂ ಆಗಿದೆ ; (ವಿವರ ನೀಡುವುದು)

(ಆ) ನ್ಯಾಯಾಲಯದ ಸೂಚನೆಯನ್ನು ಉಲ್ಲಂಘಿಸಿ ರೀಡೂ ಹೆಸರಿನಲ್ಲಿ ಜಮೀನನ್ನು ಡಿನೋಟಿಫೈ ಮಾಡಿರುವುದು ನಿಜವೇ ; ರೀಡೂ ಪ್ರಕರಣಕ್ಕೆ ಸಂಬಂಧಪಟ್ಟಂತೆ ನಿವೃತ್ತ ನ್ಯಾ. ಕೆಂಪಣ್ಣ ವಿಚಾರಣಾ ಆಯೋಗವನ್ನು ರಚಿಸಿದ್ದು ಯಾವಾಗ ; ಆಯೋಗ ಸರ್ಕಾರಕ್ಕೆ ತನ್ನ ವರದಿಯನ್ನು ಸಲ್ಲಿಸಿದ್ದು ಯಾವಾಗ ;

(ಇ) ವರದಿಯಲ್ಲಿರುವ ಪ್ರಮುಖ ಅಂಶಗಳೇನು ; ವರದಿಯನ್ನು ಸರ್ಕಾರ ಅಂಗೀಕರಿಸಿದೆಯೇ ; ವರದಿಯನ್ನು ಈವರೆಗೆ ಅಂಗೀಕರಿಸಿಲ್ಲದಿರಲು ಕಾರಣವೇನು ; ಯಾವುದೇ ಒಂದು ವರದಿಯನ್ನು ಅಂಗೀಕರಿಸಲು ಕಾಲಮಿತಿ ಇಲ್ಲವೇ ;

(ಈ) ನ್ಯಾ. ಕೆಂಪಣ್ಣ ವಿಚಾರಣಾ ಆಯೋಗದ ವರದಿ ಸಲ್ಲಿಸಲು ತೆಗೆದುಕೊಂಡ ಕಾಲಾವಕಾಶ ಎಷ್ಟು ; ವರದಿ ಸಲ್ಲಿಸಲು ಆಯೋಗಕ್ಕೆ ಆಗಿರುವ ವೆಚ್ಚ ಎಷ್ಟು ; ವರದಿಯನ್ನು ಅಂಗೀಕರಿಸುವ ಕುರಿತು ಸರ್ಕಾರದ ನಿಲುವೇನು ?

## ಭದ್ರಾ ಕಣಿವೆಯಿಂದ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೨ (೯೯೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಭದ್ರಾ ಉಪ ಕಣಿವೆಯಿಂದ ಲಿಫ್ಟ್ ಮೂಲಕ ತರಿಕೆರೆ–ಕಡೂರು–ಚಿಕ್ಕಮಗಳೂರು ತಾಲ್ಲೂಕುಗಳ ಕೆರೆಗಳನ್ನು ತುಂಬಿಸುವ ಮೊದಲನೇ ಹಂತದ ಕಾಮಗಾರಿ ಪೂರ್ಣಗೊಂಡಿದೆಯೇ ; ಇಲ್ಲದಿದ್ದರೆ, ಮೊದಲನೇ ಹಂತದಲ್ಲಿ ಇನ್ನೂ ಎಷ್ಟು ಕಾಮಗಾರಿಗಳು ನಿರ್ವಹಿಸಲು ಬಾಕಿ ಇದೆ ;

(ಆ) ಮೊದಲನೇ ಹಂತವನ್ನು ಯಾವಾಗ ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು ; (ವಿವರ ಒದಗಿಸುವುದು)

(ಇ) ಎರಡನೇ ಹಂತದ ಕಾಮಗಾರಿಯಲ್ಲಿ ಎಷ್ಟು ಪ್ರಗತಿ ಸಾಧಿಸಲಾಗಿದೆ ಹಾಗೂ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ;

(ಈ) ಮೂರನೇ ಹಂತದ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆಯೇ ; ಯಾರಿಗೆ ಗುತ್ತಿಗೆ ನೀಡಲಾಗಿದೆ ; ಮೂರನೇ ಹಂತದ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ? (ವಿವರ ಒದಗಿಸುವುದು)

## ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ರೂಪಿಸಿರುವ ಯೋಜನೆಗಳ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೩ (೯೯೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಗುರುತಿಸಿರುವ ಪ್ರವಾಸಿ ಸ್ಥಳಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೦೩ ವರ್ಷದಿಂದ ಈ ಪ್ರವಾಸಿ ಸ್ಥಳಗಳಿಗೆ ಭೇಟಿ ನೀಡಿರುವ ಪ್ರವಾಸಿಗರ ಸಂಖ್ಯೆ ಎಷ್ಟು ; ಬಂದಿರುವ ಆದಾಯ ಎಷ್ಟು ;

(ಇ) ಕಳೆದ ೦೩ ವರ್ಷದಿಂದ ಚಿಕ್ಕಮಗಳೂರು ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಪ್ರವಾಸೋದ್ಯಮ ಇಲಾಖೆಯಿಂದ ಒದಗಿಸಿರುವ

ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗಾಗಿ ಎಷ್ಟು ವೆಚ್ಚ ಭರಿಸಲಾಗಿದೆ ; (ವಿವರ ಒದಗಿಸುವುದು)

(ಈ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿ ಪಡಿಸಲು ಸರ್ಕಾರ ರೂಪಿಸಿರುವ ಯೋಜನೆಗಳೇನು ? (ವಿವರ ಒದಗಿಸುವುದು)

## ನಷ್ಟದಲ್ಲಿರುವ ಮತ್ತು ಆದಾಯದ ಕೊರತೆ ಎದುರಿಸುತ್ತಿರುವ ಸಹಕಾರಿ ಬ್ಯಾಂಕ್‌ಗಳ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೪ (೯೯೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸಹಕಾರಿ ಬ್ಯಾಂಕ್‌ಗಳಿವೆ ; ಈ ಪೈಕಿ ಆದಾಯದ ಕೊರತೆ ಎದುರಿಸುತ್ತಿರುವ ಮತ್ತು ನಷ್ಟದಲ್ಲಿರುವ ಸಹಕಾರಿ ಬ್ಯಾಂಕ್‌ಗಳು ಎಷ್ಟು ; ಎಷ್ಟು ಸಹಕಾರಿ ಬ್ಯಾಂಕ್‌ಗಳು ಮುಚ್ಚಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಸಹಕಾರಿ ಬ್ಯಾಂಕ್‌ಗಳ ನಷ್ಟಕ್ಕೆ ಕಾರಣಗಳೇನು ; ಎಷ್ಟು ಸಹಕಾರಿ ಬ್ಯಾಂಕ್‌ಗಳಲ್ಲಿ ಅವ್ಯವಹಾರಗಳು ನಡೆದಿವೆ ; (ಸಮಗ್ರ ವಿವರ ನೀಡುವುದು)

(ಇ) ಸೂಕ್ತ ದಾಖಲೆಗಳಿಲ್ಲದಿದ್ದರೂ ಸಾಲ ನೀಡಿ ನಷ್ಟಕ್ಕೆ ಒಳಗಾಗಿರುವ ಸಹಕಾರಿ ಬ್ಯಾಂಕ್‌ಗಳು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸಹಕಾರಿ ಬ್ಯಾಂಕ್‌ಗಳು ನೀಡಿರುವ ಒಟ್ಟಾರೆ ಸಾಲದ ಮೊತ್ತ ಎಷ್ಟು ; ಈ ಪೈಕಿ ಮರುಪಾವತಿ ಆಗದಿರುವ ಸಾಲದ ಮೊತ್ತ

ಎಷ್ಟು ; ಸಾಲ ವಸೂಲಿ ಮಾಡಲು ಸರ್ಕಾರ ಸೂಚನೆ ನೀಡಿದೆಯೇ ;

(ಉ) ಆದಾಯದ ಕೊರತೆ ಎದುರಿಸುತ್ತಿರುವ ಸಹಕಾರಿ ಬ್ಯಾಂಕ್‌ಗಳ ಆದಾಯ ವೃದ್ಧಿಗೆ ಮತ್ತು ನಷ್ಟದಲ್ಲಿರುವ ಸಹಕಾರಿ ಬ್ಯಾಂಕ್‌ಗಳನ್ನು ಲಾಭದ ಹಳಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಖಾಲಿ ಇರುವ ಅಧಿಕಾರಿ/ನೌಕರರನ್ನು ಮರು ವಿಂಗಡಣೆ ಮಾಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೫ (೯೯೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯಲ್ಲಿ ಮಂಜೂರಾಗಿರುವ ಅಧಿಕಾರಿ ಮತ್ತು ನೌಕರರ ಹುದ್ದೆಗಳೆಷ್ಟು ; ಈ ಪೈಕಿ ಭರ್ತಿಯಾಗಿರುವ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಅಗ್ನಿಶಾಮಕ ಇಲಾಖೆಯಲ್ಲಿ ಹಾಲಿ ಇರುವ ಅಧಿಕಾರಿ ಹಾಗೂ ಸಿಬ್ಬಂದಿಗಳ ಮರುವಿಂಗಡಣೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವ ಮಾನದಂಡಗಳನ್ನು ಆಧರಿಸಿ ಮರುವಿಂಗಡಣೆ ಮಾಡಲಾಗುವುದು ; (ವಿವರ ಒದಗಿಸುವುದು)

(ಇ) ಪೊಲೀಸರಿಗೆ ಪ್ರತಿ ತಿಂಗಳು ರೂ.೩೦೦೦/– ಕಷ್ಟ ಪರಿಹಾರ ಭತ್ಯೆ ನೀಡುತ್ತಿದ್ದು, ಅದೇ ರೀತಿ ಅಗ್ನಿಶಾಮಕ ಸಿಬ್ಬಂದಿಗೆ ನೀಡುತ್ತಿರುವ ಕಷ್ಟ ಪರಿಹಾರ ಭತ್ಯೆಯನ್ನು ರೂ.೩೦೦೦/– ಗಳಿಗೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದರೆ, ಯಾವಾಗ ಹೆಚ್ಚಿಸಲಾಗುವುದು ?

# ಪೊಲೀಸ್ ಅಧಿಕಾರಿಗಳು ಅಪರಾಧದಲ್ಲಿ ಭಾಗಿಯಾಗುತ್ತಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೬ (೯೯೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಪೊಲೀಸ್ ಇಲಾಖೆಯ ಎಷ್ಟು ಸಿಬ್ಬಂದಿ ಹಾಗೂ ಅಧಿಕಾರಿಗಳು ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ ; ಈ ಕುರಿತು ನಮೂದಾದ ಎಫ್ ಐ ಆರ್ ಸಂಖ್ಯೆ, ಪೊಲೀಸ್ ಅಧಿಕಾರಿ, ಸಿಬ್ಬಂದಿಗಳ ಹೆಸರು ಹಾಗೂ ಯಾವ ಯಾವ ಸೆಕ್ಷನ್‌ಗಳ ಅನ್ವಯ ಪ್ರಕರಣ ದಾಖಲಾಗಿದೆ ; ಅದರಲ್ಲಿ ಅರೆಸ್ಟ್ ಆದವರು ಎಷ್ಟು ; (ಜಿಲ್ಲಾವಾರು, ಪೊಲೀಸ್ ಠಾಣೆವಾರು ಸಮಗ್ರ ವಿವರ ನೀಡುವುದು)

(ಆ) ಕಾನೂನು ಸುವ್ಯವಸ್ಥೆ ಕಾಪಾಡಬೇಕಾದ ಪೊಲೀಸರೆ ಅಪರಾಧ ಪ್ರಕರಣಗಳಲ್ಲಿ ಭಾಗಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಇ) ಸರ್ಕಾರ ಈ ಅಪರಾಧ ಎಸಗಿದ ಪೊಲೀಸ್ ನೌಕರರನ್ನು ರಕ್ಷಿಸುವ ಮೂಲಕ ಅಥವಾ ವಿಚಾರಣೆ ವಿಳಂಬ ಮಾಡುವ ಮೂಲಕ ಮತ್ತಷ್ಟು ಪೊಲೀಸರಿಗೆ ಅಪರಾಧ ಎಸಗಲು ಪ್ರೋತ್ಸಾಹ ನೀಡಿದಂತಾಗಲಿಲ್ಲವೆ ; ಈ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಈ) ಪೊಲೀಸ್ ಮಹಾನಿರ್ದೇಶಕರ ಹಂತದ ಅಧಿಕಾರಿಯೇ ತನ್ನ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಸಿಬ್ಬಂದಿಗಳ ಜೊತೆ ಅಸಭ್ಯವಾಗಿ ವರ್ತಿಸಿರುವುದು ತನ್ನ ಅಧಿಕಾರ ಮತ್ತು ಹುದ್ದೆಯ ದುರ್ಬಳಕೆ ಎಂಬುದು ಸ್ಪಷ್ಟವಾದರೂ ಸದರಿ

ಅಧಿಕಾರಿಯ ಮೇಲೆ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯವೆಸಗಿದ ಕೇಸು ದಾಖಲಿಸದೆ ಕೇವಲ ಅಮಾನತು ಮಾಡಿರುವ ಕುರಿತು ಸರ್ಕಾರದ ನಿಲುವೇನು ?

## ಆರೋಗ್ಯಾಧಿಕಾರಿಗಳ ಕರ್ತವ್ಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೭ (೯೯೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿ.ಬಿ.ಎ ವ್ಯಾಪ್ತಿಯ ನಗರಸಭೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಆರೋಗ್ಯಾಧಿಕಾರಿಗಳ ಸಂಖ್ಯೆ ಎಷ್ಟು ; (ವಿಭಾಗವಾರು ವಿವರ ನೀಡುವುದು)

(ಆ) ಆರೋಗ್ಯಾಧಿಕಾರಿಗಳ ಕರ್ತವ್ಯ ಮತ್ತು ಜವಾಬ್ದಾರಿಗಳೇನು ; (ವಿವರ ನೀಡುವುದು)

(ಇ) ಆರೋಗ್ಯಧಿಕಾರಿಗಳು ವೈದ್ಯಕೀಯ ಶಿಕ್ಷಣವನ್ನು ಹೊರತು ಪಡಿಸಿ ಯಾವ ರೀತಿ ತರಬೇತಿಯನ್ನು ಪಡೆದಿರುತ್ತಾರೆ ; (ವಿವರ ನೀಡುವುದು)

(ಈ) ಆರೋಗ್ಯಾಧಿಕಾರಿಗಳು ಆಡಳಿತಾತ್ಮಕ ಹಾಗೂ ಕಾನೂನಾತ್ಮಕ ತರಬೇತಿಯನ್ನು ಪಡೆದಿರುತ್ತಾರೆಯೇ ; ಇಲ್ಲವಾದಲ್ಲಿ, ಕಾನೂನಾತ್ಮಕ ಮತ್ತು ಆಡಳಿತಾತ್ಮಕ ವಿಷಯಗಳನ್ನು ಒಳಗೊಂಡ ಟ್ರೇಡ್ ಲೈಸೆನ್ಸ್ ನೀಡುವ ಅಧಿಕಾರ ಯಾವ ನಿಯಮದ ಅನ್ವಯ ಜಿ.ಬಿ.ಎ ವ್ಯಾಪ್ತಿಯ ನಗರಸಭೆಗಳಲ್ಲಿ ಆರೋಗ್ಯಾಧಿಕಾರಿಗಳಿಗೆ ನೀಡಲಾಗಿದೆ ; (ವಿವರ ನೀಡುವುದು)

(ಉ) ಟ್ರೇಡ್ ಲೈಸೆನ್ಸ್ ಅರ್ಜಿಸಲ್ಲಿಸಿದ ಕೂಡಲೇ ಅದನ್ನು ತಿರಸ್ಕರಿಸುವ ಆರೋಗ್ಯಾಧಿಕಾರಿಗಳು ಮತ್ತು ಅದೇ ವ್ಯಕ್ತಿಯಿಂದ ಪುನಃ ಅರ್ಜಿ

ಸಲ್ಲಿಸಲು ಹೇಳಿ ಮತ್ತೆ ಅದೇ ಆರೋಗ್ಯಾಧಿಕಾರಿ ಲಂಚ ಪಡೆದು ಟ್ರೇಡ್ ಲೈಸೆನ್ಸ್ ಅನುಮತಿ ನೀಡುತ್ತಿರುವ ಕುರಿತು ಸಾರ್ವಜನಿಕ ವಲಯದಲ್ಲಿ ಚರ್ಚೆಯಾಗುತ್ತಿದ್ದು, ಈ ಕುರಿತು ಸರ್ಕಾರದ ನಿಲುವೇನು ?

## ಗ್ಯಾರಂಟಿ ಯೋಜನೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೮ (೧೦೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷದಲ್ಲಿ ಗ್ಯಾರಂಟಿ ಯೋಜನೆಗಳಿಗೆ ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ; ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು ; (ಗ್ಯಾರಂಟಿ ಯೋಜನೆವಾರು, ವೆಚ್ಚವಾರು ಹಾಗೂ ಜಿಲ್ಲಾವಾರು ವಿವರ ನೀಡುವುದು)

(ಆ) ಗ್ಯಾರಂಟಿ ಯೋಜನೆಗಳನ್ನು ಘೋಷಿಸುವಾಗ ಯಾವ ಯಾವ ಷರತ್ತು ಅಥವಾ ನಿಯಮಗಳನ್ನು ರೂಪಿಸಲಾಗಿತ್ತು ; (ವಿವರ ನೀಡುವುದು)

(ಇ) ಗ್ಯಾರಂಟಿ ಯೋಜನೆಯ ಉಸ್ತುವಾರಿ ಕಮಿಟಿಗೆ ಎಷ್ಟು ಜನರನ್ನು ನೇಮಕ ಮಾಡಲಾಗಿದೆ ; ಯಾವ ಯಾವ ಹುದ್ದೆಗಳಿಗೆ ನೇಮಕ ಮಾಡಲಾಗಿದೆ ; ಎಷ್ಟು ಮೊತ್ತ ವೆಚ್ಚ ಮಾಡಲಾಗುತ್ತಿದೆ ; (ಹುದ್ದೆ ಅಥವಾ ಜವಾಬ್ದಾರಿ ಹಾಗೂ ಹೆಸರಿನೊಂದಿಗೆ ವಿಧಾನಸಭಾ ಕ್ಷೇತ್ರದಿಂದ ಹಿಡಿದು ರಾಜ್ಯದ ಜವಾಬ್ದಾರಿಯವರೆಗೆ ಸಮಗ್ರ ವಿವರ ನೀಡುವುದು)

(ಈ) ಗ್ಯಾರಂಟಿ ಯೋಜನೆಗಳನ್ನು ರಾಜ್ಯದಲ್ಲಿ ವಾಸಿಸುವ ಕನ್ನಡಿಗರಿಗೆ ಮಾತ್ರ ಘೋಷಣೆ ಮಾಡಿರುವುದೇ ; ಅನ್ಯ ಭಾಷಿಕರಿಗೆ ಕನ್ನಡ ಕಲಿಕೆಯ ಷರತ್ತಿನೊಂದಿಗೆ ಫಲಾನುಭವಿಗಳಾಗುವ ಷರತ್ತು ವಿಧಿಸುವ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಉ) ಕನ್ನಡ ಮಾತನಾಡದ, ಕನ್ನಡ ಕಲಿಯದ, ಕನ್ನಡ ಭಾಷೆಯ ಬಗ್ಗೆ ಗೌರವ ಇಲ್ಲದವರಿಗೆ ಗ್ಯಾರಂಟಿ ಯೋಜನೆ ಫಲಾನುಭವಿಗಳನ್ನಾಗಿಸುವುದರಿಂದ ಸರ್ಕಾರಕ್ಕೆ ಲಾಭವೇನು ? (ವಿವರ ನೀಡುವುದು)

## ಆರ್ಥಿಕ ಇಲಾಖೆಯಲ್ಲಿ ಸ್ವೀಕರಿಸಲಾಗುವ ಕಡತಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫೯ (೧೦೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೬ ತಿಂಗಳಿನಲ್ಲಿ ಆರ್ಥಿಕ ಇಲಾಖೆಯಲ್ಲಿ ಸ್ವೀಕರಿಸಲಾದ ಒಟ್ಟು ಕಡತಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಆ) ಕಳೆದ ೦೬ ತಿಂಗಳಿನಲ್ಲಿ ಆರ್ಥಿಕ ಇಲಾಖೆಯ FRC ವಿಭಾಗದಲ್ಲಿ ಸ್ವೀಕರಿಸಲಾದ ಒಟ್ಟು ಕಡತಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಸ್ವೀಕರಿಸಿದ ದಿನಾಂಕ ಹಾಗೂ ಸದರಿ ಕಡತ ವಿಲೇ ಆದ ದಿನಾಂಕದೊಂದಿಗೆ ಸಮಗ್ರ ವಿವರವಾದ ಮಾಹಿತಿ ನೀಡುವುದು)

(ಇ) ಆರ್ಥಿಕ ಇಲಾಖೆಯಲ್ಲಿ ಒಂದು ಬಾರಿ ಸ್ವೀಕರಿಸಲಾದ ಕಡತವನ್ನು ಎಷ್ಟು ಅವಧಿಯೊಳಗಾಗಿ ವಿಲೇ ಮಾಡಬೇಕು ಎಂಬ ನಿಯಮ ಇದೆ ; ಕಳೆದ ೦೩ ವರ್ಷಗಳಿಂದ ಬಾಕಿ ಇರುವ ಕಡತಗಳ ಸಂಖ್ಯೆ ಎಷ್ಟು ; (ವರ್ಷವಾರು, ಇಲಾಖಾವಾರು ವಿವರ ನೀಡುವುದು)

(ಈ) ಆರ್ಥಿಕ ಇಲಾಖೆಯಲ್ಲಿ ಕಡತಗಳ ಪರಿಶೀಲನೆ ಮತ್ತು ಆದೇಶಗಳ ವಿಳಂಬದಿಂದಾಗಿ ರಾಜ್ಯದ ಅಭಿವೃದ್ಧಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಉ) ಆರ್ಥಿಕ ಇಲಾಖೆಯಲ್ಲಿ ಕಡತಗಳ ವಿಳಂಬ ನಿರ್ವಹಣೆಯಿಂದಾಗಿ ರಾಜ್ಯದ ಸಾಮಾನ್ಯ ಜನರ ನಿತ್ಯ ಜೀವನದ ಮೇಲೆ ಆಗುವ ಪರಿಣಾಮಗಳಿಗೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುತ್ತದೆ ? (ವಿವರ ನೀಡುವುದು)

## ಗಾರೆಬಾವಿ ಪಾಳ್ಯ ಕೆರೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೦ (೧೦೦೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಾರೆಬಾವಿ ಪಾಳ್ಯ ಕೆರೆ ಸಂಪೂರ್ಣವಾಗಿ ಕಳೆಗಳಿಂದ ಮುಚ್ಚಿ ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕೆರೆಯನ್ನು ಉಳಿಸಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮಗಳೇನು ; ಕೆರೆಯ ಮೂಲ ವಿಸ್ತೀರ್ಣವೆಷ್ಟು ಪ್ರಸ್ತುತ ಎಷ್ಟು ವಿಸ್ತೀರ್ಣದಲ್ಲಿ ಕೆರೆ ಇದೆ ; (ಸಮಗ್ರ ವಿವರ ನೀಡುವುದು)

(ಆ) ಕಳೆದ ೦೩ ವರ್ಷಗಳಲ್ಲಿ ಗಾರೆಬಾವಿ ಪಾಳ್ಯ ಕೆರೆ ಅಭಿವೃದ್ಧಿಗೆ ಸರ್ಕಾರ ಎಷ್ಟು ಮೊತ್ತ ವೆಚ್ಚ ಮಾಡಿದೆ ; ಯಾವ ಯಾವ ರೀತಿಯ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ಗಾರೆಬಾವಿ ಪಾಳ್ಯ ಕೆರೆ ಸಂಪೂರ್ಣವಾಗಿ ಭತ್ತಿ ಹೋಗದಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; ಸದರಿ ಭತ್ತಿಹೋದ ಕೆರೆಯನ್ನು ಖಾಸಗಿ ಬಿಲ್ಡರ್‌ರವರಿಗೆ ಪರಭಾರೆ ಅಥವಾ ಒತ್ತುವರಿಗೆ ಅವಕಾಶ ಕಲ್ಪಿಸಲಾಗಿದೆಯೇ ; ಇದಕ್ಕೆ ಎಷ್ಟು ಮೊತ್ತ ವೆಚ್ಚ ಮಾಡಲಾಗಿದೆ ? (ವಿವರ ನೀಡುವುದು)

## ಸರ್ಕಾರಿ ಅಧಿಕಾರಿಗಳ ವಿಚಾರಣೆಗಾಗಿ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೧ (೧೦೨೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನ್ಯಾಯಾಂಗದ ವ್ಯವಸ್ಥೆಯಡಿ ಕರ್ತವ್ಯನಿರತ ಸರ್ಕಾರಿ ಅಧಿಕಾರಿಗಳು ತಮ್ಮ ಅಧಿಕಾರದ ದುರ್ಬಳಕೆ ಮಾಡಿರುವ ಹಾಗೂ ಲಂಚ ಸ್ವೀಕರಿಸುವ ವೇಳೆಯಲ್ಲಿ ಸಿಕ್ಕಿಬಿದ್ದ ಸಂದರ್ಭಗಳಲ್ಲಿ ಇಲಾಖಾ ವಿಚಾರಣೆ/ಲೋಕಾಯುಕ್ತ ವರದಿ ನಂತರದಲ್ಲಿ ಅವರ ವಿರುದ್ಧ ವಿಚಾರಣೆ ನಡೆಸಲು ಫಾಸ್ಟ್ ಟ್ರ್ಯಾಕ್ ನ್ಯಾಯಾಲಯ/ವಿಶೇಷ ನ್ಯಾಯಾಲಯಗಳು ರಾಜ್ಯದಲ್ಲಿ ನಡೆಯುತ್ತಿವೆಯೇ ; (ಇದ್ದಲ್ಲಿ, ಅವುಗಳ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಆ) ಸರ್ಕಾರಿ ಅಧಿಕಾರಿಗಳ ಮೇಲೆ ಅಧಿಕಾರ ದುರುಪಯೋಗ, ಲೋಕಾಯುಕ್ತ ದೂರು ಮುಂತಾದ ಅಧಿಕಾರಕ್ಕೆ ಸಂಬಂಧಿಸಿದ ವಿಚಾರಣೆಗಳನ್ನು ನಡೆಸಲು ಫಾಸ್ಟ್ ಟ್ರ್ಯಾಕ್ ನ್ಯಾಯಾಲಯ/ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇಲ್ಲವಾದಲ್ಲಿ, ಯಾವ ಕಾಲಮಿತಿಯಲ್ಲಿ ಇದನ್ನು ಮಾಡಲಾಗುವುದು ? (ಮಾಹಿತಿ ಒದಗಿಸುವುದು)

## ತುಂಗಭದ್ರಾ ಜಲಾಶಯದ ಕ್ರಸ್ಟ್ ಗೇಟ್ ಅಳವಡಿಕೆಯ ಅನುದಾನದ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೬೨ (೧೦೩೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಂಗಭದ್ರಾ ಜಲಾಶಯದ ೩೩ ಕ್ರಸ್ಟ್ ಗೇಟ್‌ಗಳ ಅಳವಡಿಕೆಯ ಕಾರ್ಯ ಪ್ರಗತಿಯಲ್ಲಿರುವುದು ನಿಜವೇ ; ಹಾಗಿದ್ದಲ್ಲಿ, ಈ ಕಾರ್ಯ ಯಾವ ಹಂತದಲ್ಲಿದೆ ; ಈ ಕ್ರಸ್ಟ್ ಗೇಟ್ ಅಳವಡಿಕೆ ಕಾರ್ಯಕ್ರಮಕ್ಕೆ ಭಾಗವಹಿಸುವ ರಾಜ್ಯಗಳು ನೀಡಬೇಕಾಗಿದ್ದ ಅನುದಾನ ಎಷ್ಟು ; ಈಗಾಗಲೇ ಅನುದಾನವನ್ನು ತುಂಗಭದ್ರಾ ಜಲಾಶಯ ಮಂಡಳಿಗೆ ನೀಡಿರುವ ರಾಜ್ಯಗಳು ಯಾವುವು ; ಎಷ್ಟು ಎಷ್ಟು ಅನುದಾನಗಳನ್ನು ಯಾವ ದಿನಾಂಕಗಳಲ್ಲಿ ನೀಡಲಾಗಿದೆ ; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಆ) ಕರ್ನಾಟಕ ರಾಜ್ಯದ ಪಾಲನ್ನು ರಾಜ್ಯ ಸರ್ಕಾರವು ಮೊದಲ ಕಂತಾಗಿ ನೀಡಿದ್ದ ೧೦.೦೦ ಕೋಟಿಗಳನ್ನು ನೀಡಿ ವಾಪಸ್ಸು ಪಡೆದಿರುವುದು ನಿಜವೇ ಹಾಗಿದ್ದಲ್ಲಿ, ಯಾವ ಕಾರಣದಿಂದ ವಾಪಸ್ ಪಡೆಯಾಲಾಗಿದೆ ; (ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಇ) ನೀಡಿರುವ ಹಣವನ್ನು ವಾಪಸ್ ಪಡೆಯಲಾಗಿಲ್ಲದಿದಲ್ಲಿ, ಈ ಗೊಂದಲ ಉಂಟಾಗಲು ಕಾರಣವೇನು ? (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ಜಿಬಿಎ ವ್ಯಾಪ್ತಿಯ ಕಟ್ಟಡಗಳಿಗೆ ಸಿಸಿ, ಓಸಿ ಮತ್ತು ಉಪಸಂಖ್ಯೆ ನೀಡುವ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೩ (೧೦೫೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ೨೦೨೩ನೇ ಸಾಲಿನಿಂದ ಇಲ್ಲಿಯವರೆಗೆ ಕಟ್ಟಡಗಳಿಗೆ ಉಪಸಂಖ್ಯೆ (Sub-Number) ಮತ್ತು ಸಿಸಿ ಮತ್ತು ಓಸಿ ನೀಡುವಂತೆ ಬಂದ ಒಟ್ಟು ಅರ್ಜಿಗಳೆಷ್ಟು ;

ವಿಲೇವಾರಿ ಮಾಡಿದ ಅರ್ಜಿಗಳೆಷ್ಟು ಹಾಗೂ ಅವುಗಳಿಂದ ಸರ್ಕಾರಕ್ಕೆ ಬಂದ ಆದಾಯವೆಷ್ಟು ಹಾಗೂ ವಿಲೇವಾರಿಗೆ ಬಾಕಿ ಇರುವ ಅರ್ಜಿಗಳಷ್ಟು ;

(ಆ) ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಕಟ್ಟಡಗಳಿಗೆ ಉಪಸಂಖ್ಯೆ, ಸಿಸಿ ಮತ್ತು ಓಸಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಟ್ಟಡಗಳಿಗೆ ಉಪಸಂಖ್ಯೆ ನೀಡದಂತೆ ಹೊರಡಿಸಿದ ಆದೇಶ/ಸುತ್ತೋಲೆ ಮಾರ್ಗಸೂಚಿಗಳ ಪ್ರತಿಗಳನ್ನು ನೀಡುವುದು ;

(ಇ) ಹಿಂದಿನ ವರ್ಷಗಳಲ್ಲಿ ೨೦೨೩ ಮತ್ತು ೨೦೨೫ನೇ ಸಾಲಿನಲ್ಲಿ ನಿರ್ಮಿತವಾದ ಕಟ್ಟಡಗಳಿಗೆ ಉಪಸಂಖ್ಯೆ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ;

(ಈ) ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಜಾರಿಗೆ ತರಲಾಗುವುದು; ಇಲ್ಲದಿದ್ದಲ್ಲಿ, ಅಂತಹ ಕಟ್ಟಡಗಳ ಮೇಲೆ ಸರ್ಕಾರ ಕೈಗೊಳ್ಳುವ ಮುಂದಿನ ಕ್ರಮಗಳೇನು ಎನ್ನುವುದರ ಸಂಪೂರ್ಣ ಮಾಹಿತಿ ನೀಡುವುದು ?

## ಸರ್ಕಾರಿ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳ ಕುರಿತು

**ಶ್ರೀ ಶರವಣ ಟಿ.ಎ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬೪ (೧೦೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಎಲ್ಲಾ ಇಲಾಖೆಗಳ ಹಲವು ವೃಂದಗಳಿಗೆ ವೃಂದ ಮತ್ತು ನೇಮಕಾತಿ (C&R) ನಿಯಮಗಳನ್ನು ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಇಲಾಖೆಗಳ ವೃಂದಗಳಿಗೆ ವೃಂದ ಮತ್ತು ನೇಮಕಾತಿ (C&R) ಮಾಡುವುದು ಬಾಕಿ ಇದೆ ; ಬಾಕಿ ಇರಲು ಕಾರಣಗಳೇನು ;

(ಆ) ವಿವಿಧ ಇಲಾಖೆಗಳ ಅಧಿಕಾರಿ ವರ್ಗಗಳ ಪದೋನ್ನತಿ ನಿಯಮಗಳು ಮತ್ತು ವೃಂದ ಬದಲಾವಣೆ ನಿಯಮಗಳಿಗೆ ತಿದ್ದುಪಡಿ ತರಲಾಗಿದೆಯೇ ;

(ಇ) ತಂದಿದ್ದಲ್ಲಿ, ಯಾವ ಅಂಶಗಳ ಆಧಾರದ ಮೇಲೆ ತಿದ್ದುಪಡಿ ಮಾಡಲಾಗಿದೆ ; ಅದರ ಸಂಪೂರ್ಣ ಮಾಹಿತಿ ನೀಡುವುದು ?

## ಕಲ್ಯಾಣ ಕರ್ನಾಟಕ ಪೂರ್ವದಲ್ಲಿ ಜಾರಿ ಇರುವ KSCS (RPP) Act ೧೯೭೩ ಹಾಗೂ RPP Rules ೧೯೭೮ರ ಸ್ಪಷ್ಟೀಕರಣ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೯೬೫ (೧೦೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) KSCS RPP Rules ೧೯೭೮ರಲ್ಲಿ ತಿಳಿಸಿರುವ ಪೂರ್ವಾನ್ವಯ ಮುಂಬಡ್ತಿಯ ಸಂದರ್ಭಗಳು ಯಾವುವು ; (ವಿವರಿಸುವುದು)

(ಆ) ಸದರಿ ಅಧಿನಿಯಮದ ಸೆಕ್ಷನ್ ೪ ರಲ್ಲಿ ಬಡ್ತಿಗಳು ಇತ್ಯಾದಿ ಹಂಚಿಕೆದಾರರು ಇದರಡಿ ನಿಜವಾದ ಮುಂಬಡ್ತಿಯ ಅರ್ಹತೆ ದಿನಾಂಕದಿಂದ ಕಾಲ್ಪನಿಕ ಜ್ಯೇಷ್ಠತೆ ನೀಡಿ ಹುದ್ದೆಗಳ ಮರು ಹಂಚಿಕೆ ಮಾಡುವ ಸೂಚನೆಯ ಸಂದರ್ಭಗಳು ಏನು ; (ವಿವರಿಸುವುದು)

(ಇ) ಸದರಿ ಅಧಿನಿಯಮ ಹಾಗೂ ಅದರಡಿ ಹೊರಡಿಸಿರುವ ನಿಯಮಗಳು ೩೭೧ ಜೆ ನಿಯಮಾನುಸಾರ ಸ್ಥಳೀಯ ವೃಂದದ ಹುದ್ದೆಗಳಿಗೂ ಅನ್ವಯಿಸಿರುವುದರಿಂದ ಸದರಿ ಅಧಿನಿಯಮ Section ೪ ಪ್ರಕಾರ ನಿಜವಾದ ಅರ್ಹತೆಯ ದಿನಾಂಕದಿಂದ ಕಲ್ಯಾಣ ಕರ್ನಾಟಕದ ಹುದ್ದೆಗಳಿಗೆ ಕಾಲ್ಪನಿಕ ಜ್ಯೇಷ್ಠತೆ ನೀಡಿ ಮರು ಜ್ಯೇಷ್ಠತೆ ನಿಗದಿ ಪಡಿಸಬಹುದೇ ; ಇಲ್ಲ ಎಂದಲ್ಲಿ, ಸೂಕ್ತ ಕಾರಣಗಳೇನು ;

(ಈ) ವಿವಿಧ ಇಲಾಖೆಗಳಲ್ಲಿ ಆಡಳಿತಾತ್ಮಕ ಸಮಸ್ಯೆಗಳನ್ನು ಸರಿಪಡಿಸಲು ೩೭೧ ಜೆ ನಿಯಮಾನುಸಾರ ಹೈ-ಕ ಕೇಡರ್ ಹುದ್ದೆಗಳಿಗೆ ಕಾಲ್ಪನಿಕ ಜ್ಯೇಷ್ಠತೆ ನೀಡಿ ಮುಂಬಡ್ತಿ ನೀಡಲು ೩೭೧ ಜೆ ಉಪ ಸಮಿತಿ ನಿರ್ದೇಶನ ನೀಡಿದ್ದು, ಅದರಂತೆ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು ;

(ಉ) ೩೭೧ ಜೆ ಉಪ ಸಮಿತಿಯ ನಿರ್ದೇಶನದಂತೆ ಕಲ್ಯಾಣ ಕರ್ನಾಟಕದ ಹುದ್ದೆಗಳನ್ನು ಮರು ಹಂಚಿಕೆ ಮಾಡಿ ಕಾಲ್ಪನಿಕ ಜ್ಯೇಷ್ಠತೆ ನೀಡಲು, KSCS (RPP) ACT ೧೯೭೩ ಸೆಕ್ಷನ್ ೩ ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮುಂಬಡ್ತಿ ಭವಿಷ್ಯವರ್ತಿಯಾಗಿ ಜಾರಿ ಆಗಲಿವೆ ಎಂದು ತಿಳಿಸಿರುವುದರಿಂದ ಹೈ-ಕ ಭಾಗದ ನೌಕರರಿಗೆ ಅನ್ಯಾಯ ಆಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗಮನಕ್ಕೆ ಬಂದಿದ್ದರೇ, ಈ ಬಗ್ಗೆ ಸರಿಪಡಿಸುವ ಅಗತ್ಯ ಕ್ರಮ ಮೇಲ್ಮನವಿ ಪ್ರಾಧಿಕಾರದ ಮುಂದೆ ಇದೆಯೇ ; (ಮಾಹಿತಿ ನೀಡುವುದು)

(ಊ) ಕಲ್ಯಾಣ ಕರ್ನಾಟಕದ ಹುದ್ದೆಗಳನ್ನು ೩೭೧ ಜೆ ನಿಯಮಾನುಸಾರ ಹಂಚಿಕೆ ಮಾಡದೆ ಆಗಿರುವ ಅನ್ಯಾಯ ಸರಿಪಡಿಸುವಲ್ಲಿ ನ್ಯಾಯ ಸಮ್ಮತ ಮುಂಬಡ್ತಿಯಿಂದ ವಂಚಿತರಾದವರಿಗೆ ನ್ಯಾಯ ಒದಗಿಸಲು ಸರ್ಕಾರವು ಕೈಗೊಂಡಿರುವ ಅಗತ್ಯ ಕ್ರಮಗಳೇನು ?

## ೨೦೧೧-೧೨ ನೇ ಸಾಲಿನ I.R.B ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿಯಲ್ಲಿ ಹೆಚ್ಚುವರಿಯಾಗಿ ಉಳಿದಿರುವ ೨೮ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೬೬ (೧೧೨೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಪೊಲೀಸ್ ಇಲಾಖೆಯ ನೇಮಕಾತಿ ಅಧಿಸೂಚನೆ ಸಂಖ್ಯೆ: ೧೦/ನೇಮಕಾತಿ-೪/ಡಿಐಜಿಪಿ/೨೦೧೧-೧೨, ದಿ: ೦೯.೦೧.೨೦೧೨ ರ ಪಿ.ಸಿ(ಐ.ಆರ್.ಬಿ)-೭೫೦ ರ ನೇಮಕಾತಿಗೆ ಸಂಬಂಧಿಸಿದಂತೆ ಹೆಚ್ಚುವರಿಯಾಗಿ ಉಳಿದಿರುವ ೨೮ ಅಭ್ಯರ್ಥಿಗಳಿಗೆ ಇದುವರೆಗೂ ನೇಮಕಾತಿ ಆದೇಶ ಪ್ರತಿ ನೀಡದೇ ಇರಲು ಕಾರಣವೇನು ;

(ಆ) ದಿನಾಂಕ: ೨೩.೦೨.೨೦೨೪ ರಂದು ಸದನದಲ್ಲಿ ಮಾನ್ಯ ಸಚಿವರು ಈ ೨೮ ಅಭ್ಯರ್ಥಿಗಳಿಗೆ ಅನ್ಯಾಯವಾಗಿರುವುದು ನಿಜವಾಗಿದ್ದು ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಸಚಿವ ಸಂಪುಟದ ಮುಂದೆ ತಂದು ಈ ಎಲ್ಲಾ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲು ಕ್ರಮ ಕೈಗೊಳ್ಳುತ್ತೇನೆ ಎಂದು ತಿಳಿಸಿದ್ದರೂ ಕೂಡ ಇಲ್ಲಿಯುವರೆಗೂ ನೇಮಕಾತಿ ಆದೇಶ ನೀಡದೆ ಇರಲು ಕಾರಣವೇನು ;

(ಇ) ಸರ್ಕಾರವು ಈ ವಿಷಯದನ್ವಯ ವಿಳಂಬ ಮಾಡದೆ ಯಾವ ಕಾಲಮಿತಿಯಲ್ಲಿ ಈ ೨೮ ಅಭ್ಯರ್ಥಿಗಳಿಗೆ ಆದೇಶ ಪ್ರತಿಯನ್ನು ನೀಡಲಾಗುತ್ತದೆ ? (ಸ್ಪಷ್ಟತೆಯನ್ನು ನೀಡುವುದು)

## ಈಗಾಗಲೇ ನೇಮಕಾತಿ ಹೊರಡಿಸಿರುವ ೩೮೪ ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೯೬೭ (೧೧೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಲ್ತಿಯಲ್ಲಿರುವ ೩೮೪ ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳನ್ನು ಹೊರತು ಪಡಿಸಿ, ಪ್ರಸ್ತುತ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಯಿಂದ ಅನುಮೋದನೆಯನ್ನು ಪಡೆಯಲಾಗಿದೆ ;

(ಇ) ೩೮೪ ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯು ಯಾವ ಹಂತದಲ್ಲಿದೆ ; ಈ ನೇಮಕಾತಿ ವಿಳಂಬಕ್ಕೆ ಕಾರಣವೇನು ; ಯಾವ ಕಾಲಮಿತಿಯಲ್ಲಿ ಈ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಈ) ಹೊಸದಾಗಿ ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಯನ್ನು ಕೈಗೊಳ್ಳುವ ಆಲೋಚನೆ ಏನಾದರೂ ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಎಷ್ಟು ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಲಾಗುವುದು ? (ಪೂರ್ಣ ಮಾಹಿತಿಯನ್ನು ಒದಗಿಸುವುದು)

## ಆರ್ಥಿಕ ಇಲಾಖೆಯು ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿಗಾಗಿ ಅನುಮೋದನೆ ನೀಡಿರುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೯೭೮ (೧೧೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರ್ಥಿಕ ಇಲಾಖೆಯಿಂದ ಒಟ್ಟು ಎಷ್ಟು ಹುದ್ದೆಗಳ ನೇಮಕಾತಿಗಾಗಿ ಅನುಮೋದನೆಯನ್ನು ನೀಡಲಾಗಿದೆ ; ಯಾವ ಹುದ್ದೆಗಳ ನೇಮಕಾತಿಗೆ (ಹುದ್ದೆಗಳ ಪದನಾಮಗಳ ಸಮೇತ) ಅನುಮೋದನೆಯನ್ನು ನೀಡಲಾಗಿದೆ ; (ಪೂರ್ಣ ಮಾಹಿತಿಯನ್ನು ಒದಗಿಸುವುದು)

(ಆ) ಪ್ರಸ್ತುತ ಚಾಲ್ತಿಯಲ್ಲಿರುವ ೩೮೪ ಕೆಎಎಸ್ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳನ್ನು ಹೊರತು ಪಡಿಸಿ, ಎಷ್ಟು ಕೆಎಎಸ್ ಗೆಜೆಟೆಡ್

ಪ್ರೊಬೇಷನರಿ ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಯು ಅನುಮತಿ ನೀಡಿದೆ ? (ಇಲಾಖೆ ಹಾಗೂ ಹುದ್ದೆಗಳವಾರು ವಿವರ ನೀಡುವುದು)

## ಹಕ್ಕು ಪತ್ರ ಹೊಂದಿರುವ ಬುಡಕಟ್ಟು ಜನಾಂಗದವರಿಗೆ ಗಂಗಾಕಲ್ಯಾಣ ಯೋಜನೆ ಸೌಲಭ್ಯ ಸಿಗುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೯೬೯ (೧೧೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಉತ್ತರ ಕನ್ನಡ ಜಿಲ್ಲೆಯಲ್ಲಿ ಹಕ್ಕು ಪತ್ರ ಹೊಂದಿರುವ ಪರಿಶಿಷ್ಟ ಪಂಗಡದ ಕುಟುಂಬಗಳಿಗೆ ಗಂಗಾಕಲ್ಯಾಣ ಯೋಜನೆಯಡಿ ಮಂಜೂರಾದ ಕೊಳವೆ ಬಾವಿಗಳು ಎಷ್ಟು ;

(ಆ) ಜಿಲ್ಲೆಯಲ್ಲಿ ಪಹಣಿ ಪತ್ರ ಇಲ್ಲದೆ ಕೇವಲ ಹಕ್ಕು ಪತ್ರ ಹೊಂದಿರುವ ಬುಡಕಟ್ಟು ಕುಟುಂಬಗಳಿಗೆ ಗಂಗಾಕಲ್ಯಾಣ ಯೋಜನೆ ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ; ಇಲ್ಲವಾದಲ್ಲಿ, ಕೈಗೊಳ್ಳಲಿರುವ ಕ್ರಮಗಳೇನು ?

## ಅರಣ್ಯ ಆಧಾರಿತ ಮೂಲ ಆದಿವಾಸಿ ಬುಡಕಟ್ಟುಗಳ ನೇರ ನೇಮಕಾತಿ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೯೭೦ (೧೧೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನ ಮಾರ್ಚ್‌ನಲ್ಲಿ ಆಯವ್ಯಯದಲ್ಲಿ ಘೋಷಿಸಿದಂತೆ ೧೩ ಅರಣ್ಯ ಆಧಾರಿತ ಮೂಲ ಆದಿವಾಸಿ ಬುಡಕಟ್ಟು ಸಮುದಾಯಗಳಿಗೆ ವಿಶೇಷ ನೇರ ನೇಮಕಾತಿ

ಮಾಡಲಾಗುವುದು ಎಂದು ಸರ್ಕಾರ ಘೋಷಿಸಿತ್ತು ಹಾಗಾದರೆ ವಿಶೇಷ ನೇರ ನೇಮಕಾತಿಗಳನ್ನು ಮಾಡಲಾಗಿದೆಯೇ ; ಮಾಹಿತಿ ಮತ್ತು ಆದೇಶ ಪ್ರತಿ ನೀಡುವುದು ;

(ಆ) ಇದು ಯಾವ ಯಾವ ಗ್ರೂಪ್‌ಗಳಿಗೆ ನೇಮಕಾತಿ ಅನ್ವಯಿಸುತ್ತದೆ ; ಪೂರ್ಣ ಮಾಹಿತಿ ನೀಡುವುದು ;

(ಇ) ನೇರ ನೇಮಕಾತಿಯು ಎಲ್ಲಾ ಗ್ರೂಪ್‌ನ ಹುದ್ದೆಗಳಿಗೆ ಅನ್ವಯಿಸದೆ ಕೇವಲ ಸಿ ಮತ್ತು ಡಿ ಗ್ರೂಪ್ ಹುದ್ದೆಗಳಿಗೆ ಮಾತ್ರ ಸೀಮಿತವಾಗಿರುವುದಕ್ಕೆ ಕಾರಣಗಳೇನು ? (ಮಾಹಿತಿ ನೀಡುವುದು)

## ಚಾಮರಾಜಪೇಟೆಯಿಂದ ಕೆಂಗೇರಿಯವರೆಗೆ ಮೇಲ್ಸೇತುವೆ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೯೭೧ (೧೦೨೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಹೃದಯ ಭಾಗವಾದ ಚಾಮರಾಜಪೇಟೆ ಮತ್ತು ಮೈಸೂರು ರಸ್ತೆಯಲ್ಲಿ ಪ್ರತಿನಿತ್ಯ ವಾಹನ ದಟ್ಟಣೆ ವಿಪರೀತವಾಗಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಭಾಗದಲ್ಲಿ ಸುಗಮ ಸಂಚಾರಕ್ಕಾಗಿ ಕಳೆದ ಎರಡು ವರ್ಷಗಳಲ್ಲಿ ಕೈಗೊಂಡಿರುವ ಪ್ರಮುಖ ಕ್ರಮಗಳೇನು ;

(ಆ) ಚಾಮರಾಜಪೇಟೆಯಲ್ಲಿನ ಅಸ್ತಿತ್ವದಲ್ಲಿರುವ ಮೇಲ್ಸೇತುವೆಯನ್ನು ಕೆಂಗೇರಿಯವರೆಗೆ ವಿಸ್ತರಿಸುವ ಯಾವ ಹೊಸದಾಗಿ ಸುದೀರ್ಘ ಮೇಲ್ಸೇತುವೆಯನ್ನು (Elevated Corridor) ನಿರ್ಮಿಸುವ ಯಾವುದೇ ವೈಜ್ಞಾನಿಕ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಈ ಯೋಜನೆಯ ಅಂದಾಜು ವೆಚ್ಚ ಹಾಗೂ ಪ್ರಸ್ತುತ ಹಂತದ ಮಾಹಿತಿ ನೀಡುವುದು ;

(ಇ) ಮೈಸೂರು ರಸ್ತೆಗೆ ಪರ್ಯಾಯವಾಗಿ ಕೆಂಗೇರಿಯನ್ನು ತಲುಪಲು ಮೆಟ್ರೋ ರೈಲಿನ ಹೊರತಾಗಿ, ಟನಲ್ ರಸ್ತೆ (Tunnel Road) ಅಥವಾ ರಾಜಕಾಲುವೆಗಳ ಪಕ್ಕದಲ್ಲಿ ಪರ್ಯಾಯ ರಸ್ತೆಗಳನ್ನು ಅಭಿವೃದ್ಧಿಪಡಿಸುವ ಮೂಲಕ ಸಂಚಾರ ದಟ್ಟಣೆ ಕಡಿಮೆ ಮಾಡುವ ಬಗ್ಗೆ ಸರ್ಕಾರವು ಯಾವುದಾದರೂ ವಿಶೇಷ ಕ್ರಿಯಾ ಯೋಜನೆಯನ್ನು ರೂಪಿಸಿದೆಯೇ ?

## ಬೆಂಗಳೂರು ಮೆಟ್ರೋ ರೈಲಿನ ನಿಗಮದಲ್ಲಿನ ಉದ್ಯೋಗ ಮತ್ತು ನೇಮಕಾತಿ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೯೭೨ (೧೦೨೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮೆಟ್ರೋ ರೈಲು ನಿಗಮದಲ್ಲಿ (BMRCL) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಒಟ್ಟು ಖಾಯಂ ಉದ್ಯೋಗಿಗಳ ಸಂಖ್ಯೆ ಎಷ್ಟು ; (ಇವರಲ್ಲಿ ಅಧಿಕಾರಿಗಳು (Officers) ಮತ್ತು ಸಿಬ್ಬಂದಿಗಳ (Staff) ವರ್ಗವಾರು ವಿವರ ನೀಡುವುದು)

(ಆ) ಈ ಉದ್ಯೋಗಿಗಳ ಪೈಕಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಗ್ರೂಪ್ 'ಎ', 'ಬಿ', 'ಸಿ' ಮತ್ತು 'ಡಿ' ವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) BMRCL ನಲ್ಲಿ ಉದ್ಯೋಗಿಗಳ ನೇಮಕಾತಿ ಮಾಡುವಾಗ ಸರ್ಕಾರದ ಮೀಸಲಾತಿ ನೀತಿ ಹಾಗೂ ರೋಸ್ಟರ್ ನಿಯಮಗಳನ್ನು (Roster Rules) ಸಮರ್ಪಕವಾಗಿ ಪಾಲಿಸಲಾಗುತ್ತಿದೆಯೇ ;

(ಈ) ಕಳೆದ ಐದು ವರ್ಷಗಳಲ್ಲಿ ಪ.ಜಾತಿ/ಎಸ್.ಸಿ./ಎಸ್.ಟಿ ವರ್ಗಕ್ಕೆ ಮೀಸಲಾದ ಹುದ್ದೆಗಳ ಪೈಕಿ ಭರ್ತಿಯಾಗದೆ ಬಾಕಿ ಇರುವ

(Backlog) ಹುದ್ದೆಗಳ ಸಂಖ್ಯೆ ಎಷ್ಟು ; ಈ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಹಾಗೂ ನಿಗಮವು ಕೈಗೊಂಡಿರುವ ಕ್ರಮಗಳೇನು ?

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೯೭೩ (೧೦೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಹದಿನೈದು ವರ್ಷಗಳಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪುನರ್‌ರಚನೆ/ಅಭಿವೃದ್ಧಿ/ಸುಧಾರಣೆ ಕುರಿತು ಯಾವುದಾದರೂ ಸಮಿತಿ ಅಥವಾ ಆಯೋಗಗಳನ್ನು ರಚಿಸಲಾಗಿದೆಯೇ ;

(ಆ) ರಚಿಸಿದ್ದಲ್ಲಿ, ಯಾವ ಸಮಿತಿ/ಆಯೋಗವನ್ನು ರಚಿಸಲಾಗಿತ್ತು, ಯಾವ ಉದ್ದೇಶದಿಂದ ರಚಿಸಲಾಗಿತ್ತು ;

(ಇ) ಈ ಸಮಿತಿ/ಆಯೋಗವು ಅಧ್ಯಯನ ಮಾಡಿ ವರದಿ ಸಲ್ಲಿಸಲು ಸರ್ಕಾರದಿಂದ ಎಷ್ಟು ವೆಚ್ಚ ಮಾಡಲಾಗಿದೆ ಹಾಗೂ ಸರ್ಕಾರಕ್ಕೆ ಈ ವರದಿಯನ್ನು ಯಾವಾಗ ಸಲ್ಲಿಸಲಾಗಿದೆ ;

(ಈ) ಈ ವರದಿಯನ್ನು ಅನುಷ್ಠಾನಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ, ಈ ಸಮಿತಿಯ ವರದಿಯ ಶಿಫಾರಸ್ಸುಗಳ ಅನುಷ್ಠಾನಕ್ಕೆ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)

## ಮಾದಕ ವಸ್ತುಗಳ ಜಾಲ ಮತ್ತು ಸೈಬರ್ ಅಪರಾಧಗಳ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೯೭೪ (೧೦೨೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಮಾದಕ ವಸ್ತುಗಳ ಜಾಲ (Drug Menace) ಮತ್ತು ಸೈಬರ್ ಅಪರಾಧಗಳು (Cyber Crimes) ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇವುಗಳ ತನಿಖೆಗಾಗಿ ರಾಜ್ಯಮಟ್ಟದಲ್ಲಿ ಪ್ರತ್ಯೇಕ ಹಾಗೂ ಅತ್ಯಾಧುನಿಕ 'ವಿಶೇಷ ತನಿಖಾ ದಳ' (Special Task Force) ರಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ದಾಖಲಾಗಿರುವ ಮಾದಕ ವಸ್ತುಗಳ ಪ್ರಕರಣಗಳ ಸಂಖ್ಯೆ ಎಷ್ಟು ; ಈ ಪ್ರಕರಣಗಳಲ್ಲಿ ವಶಪಡಿಸಿಕೊಳ್ಳಲಾದ ಮಾದಕ ವಸ್ತುಗಳ ಒಟ್ಟು ಪ್ರಮಾಣ ಮತ್ತು ಮಾರುಕಟ್ಟೆ ಮೌಲ್ಯ ಎಷ್ಟು ; ಇದರಲ್ಲಿ ಭಾಗಿಯಾಗಿ ಬಂಧಿತರಾದ ಮತ್ತು ಗಡಿಪಾರು ಮಾಡಲಾದ ಆರೋಪಿಗಳು ಎಷ್ಟು ; (ವಿದೇಶಿ ಪ್ರಜೆಗಳು ಸೇರಿದಂತೆ ಜಿಲ್ಲಾವಾರು ಪಟ್ಟಿಯನ್ನು ಒದಗಿಸುವುದು)

(ಇ) ಹೊರರಾಜ್ಯಗಳಿಂದ ಮಾದಕ ವಸ್ತುಗಳು ರಾಜ್ಯದೊಳಗೆ ಪ್ರವೇಶಿಸದಂತೆ ಗಡಿ ಭಾಗಗಳಲ್ಲಿ ಕೈಗೊಂಡಿರುವ ಮುನ್ನೆಚ್ಚರಿಕಾ ಕ್ರಮಗಳೇನು ; ಗಡಿ ಜಿಲ್ಲೆಗಳಲ್ಲಿ ಸಾಗಾಣಿಕೆ ತಡೆಯಲು ಪ್ರತ್ಯೇಕ ಕಣ್ಗಾವಲು ವ್ಯವಸ್ಥೆ ಅಥವಾ ತಂಡಗಳನ್ನು ನಿಯೋಜಿಸಲಾಗಿದೆಯೇ ? (ಇದಲ್ಲಿ, ಅದರ ಸಂಪೂರ್ಣ ವಿವರ ನೀಡುವುದು)

## ಬಿ.ಡಿ.ಎ ಬಡಾವಣೆಗಳಲ್ಲಿ ಎಸ್.ಸಿ/ಎಸ್.ಟಿ ಸಮುದಾಯಕ್ಕೆ ನೀಡುತ್ತಿರುವ ರಿಯಾಯಿತಿ ಮತ್ತು ನಿವೇಶನ/ಮನೆ ಹಂಚಿಕೆ ಬಗ್ಗೆ

**ಶ್ರೀ ಶಿವಕುಮಾರ್ ಕೆ. (ನಾಮನಿರ್ದೇಶನ ಹೊಂದಿದವರು) :–**

೯೭೫ (೧೦೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು (BDA) ಅಭಿವೃದ್ಧಿಪಡಿಸುವ ಬಡಾವಣೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಅರ್ಜಿದಾರರಿಗೆ ನಿವೇಶನ (Sites) ಮತ್ತು ಫ್ಲಾಟ್‌ಗಳ (Apartments) ಹಂಚಿಕೆಯಲ್ಲಿ ನೀಡುತ್ತಿರುವ ರಿಯಾಯಿತಿ ಎಷ್ಟು ; (ದರ ಮತ್ತು ಮೀಸಲಾತಿ ಪ್ರಮಾಣದ ವಿವರ ನೀಡುವುದು)

(ಆ) ಬಿ.ಡಿ.ಎ ಸ್ಥಾಪನೆಯಾದಾಗಿನಿಂದ ಈವರೆಗೆ ಎಷ್ಟು ಬಡಾವಣೆಗಳನ್ನು ನಿರ್ಮಿಸಲಾಗಿದೆ ಮತ್ತು ಈ ಪೈಕಿ ಎಸ್.ಸಿ/ಎಸ್.ಟಿ ಫಲಾನುಭವಿಗಳಿಗೆ ಹಂಚಿಕೆಯಾದ ಒಟ್ಟು ನಿವೇಶನ ಹಾಗೂ ಮನೆಗಳ ಸಂಖ್ಯೆ ಎಷ್ಟು ; (ಬಡಾವಣೆವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ಬೆಂಗಳೂರಿನ ಯಾವ ಯಾವ ಭಾಗಗಳಲ್ಲಿ ಬಿ.ಡಿ.ಎ ವತಿಯಿಂದ ಹೊಸ ಬಡಾವಣೆ ಅಥವಾ ಅಪಾರ್ಟ್‌ಮೆಂಟ್ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿವೆ ; ಈ ಯೋಜನೆಗಳಲ್ಲಿ ಪರಿಶಿಷ್ಟ ಜಾತಿ/ವರ್ಗದವರಿಗೆ ಕಾಯ್ದಿರಿಸಲಾದ ನಿವೇಶನ/ಮನೆಗಳ ಸಂಖ್ಯೆ ಎಷ್ಟು ;

(ಈ) ನಿಯಮಾನುಸಾರ ನೀಡಬೇಕಾದ ರಿಯಾಯಿತಿ ದರಗಳನ್ನು ಕೆಲವು ಯೋಜನೆಗಳಲ್ಲಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಿಯಾಯಿತಿ ನೀಡದಿರಲು ಕಾರಣಗಳೇನು ಮತ್ತು ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಎತ್ತಿನಹೊಳೆ ಯೋಜನೆಯ ಅನುದಾನದ ಕುರಿತು

**ಶ್ರೀ ಸೂರಜ್ ರೇವಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೭೬ (೧೧೦೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನಹೊಳೆ ಯೋಜನೆ ಅನುಮೋದನೆಯಾದ ವರ್ಷ ಮತ್ತು ಅನುಮೋದನೆಗೊಂಡ ಈ ಯೋಜನೆಯ ಕಾಮಗಾರಿಗಳು ಯಾವ ಸಾಲಿನಲ್ಲಿ ಪ್ರಾರಂಭವಾಯಿತು ;

(ಆ) ಈ ಯೋಜನೆಯಿಂದ ಯಾವ ಜಿಲ್ಲೆಯ ಯಾವ ಕೆರೆಗಳಿಗೆ ನೀರನ್ನು ಒದಗಿಸಲು ಯೋಜಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆಯ ಗ್ರಾವಿಟಿ ಕೆನಾಲ್ ಹಾಗೂ ಪೈಪ್‌ಲೈನ್ ಒಳಗೊಂಡಂತೆ ಒಟ್ಟು ಎಷ್ಟು ಕಿಲೋಮೀಟರ್ ಉದ್ದವಿರುತ್ತದೆ ; ಯಾವ ಜಿಲ್ಲೆಯಲ್ಲಿ ಎಷ್ಟು ಕಿಲೋಮೀಟರ್ ನಾಲಾ ಜಾಲವಿರುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಯೋಜನೆಯ ಕಾಮಗಾರಿಗಳ ಪ್ರಸ್ತುತ ಪ್ರಗತಿಯ ವಿವರವೇನು ; ಕುಂಠಿತಗೊಂಡಿರುವ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ಹಾಗೂ ಈ ಯೋಜನೆಯ ಸಕಲೇಶಪುರ ಹಾಗೂ ಅಲೂರು ವ್ಯಾಪ್ತಿಯಲ್ಲಿ ಬರುವ ನಾಲೆಯ ಹಲವು ಸರಪಳಿಗಳಲ್ಲಿ ಕಾಂಕ್ರೀಟ್ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರಿಪಡಿಸಲು ತೆಗೆದುಕೊಂಡ ಕ್ರಮಗಳೇನು ;

(ಉ) ಈ ಯೋಜನೆಯ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಭೂಸ್ವಾಧೀನಪಡಿಸಿಕೊಂಡ ಜಮೀನು ಎಷ್ಟು ; ಸ್ವಾಧೀನಪಡಿಸಿಕೊಂಡ ಜಮೀನುಗಳಿಗೆ ಭೂಪರಿಹಾರ ನೀಡಿರುವ ಒಟ್ಟು ಮೊತ್ತವೆಷ್ಟು ; ಈ ಯೋಜನೆಯ ಕಾಮಗಾರಿಗಳಿಗೆ ಈವರೆವಿಗೂ ಖರ್ಚಾಗಿರುವ (ಭೂ ಪರಿಹಾರ ಒಳಗೊಂಡಂತೆ) ಒಟ್ಟು ಮೊತ್ತವೆಷ್ಟು ; (ಮಾಹಿತಿ ನೀಡುವುದು)

(ಊ) ಈ ಯೋಜನೆಯ ಪರಿಷ್ಕೃತ ಅಂದಾಜು ಮೊತ್ತವೆಷ್ಟು ; ಈ ಯೋಜನೆಯ ಕೊನೆಯ ಭಾಗಕ್ಕೆ ನೀರನ್ನು ಯಾವ ಸಾಲಿನಲ್ಲಿ ಒದಗಿಸಲು ಅಂದಾಜಿಸಲಾಗಿದೆ ? (ಮಾಹಿತಿ ನೀಡುವುದು)

## ಅಕ್ರಮ ವಲಸೆ ಕಾರ್ಮಿಕರು/ಬಾಂಗ್ಲಾ ವಲಸಿಗರ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೭ (೧೦೩೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನ್ಯ ರಾಜ್ಯಗಳಿಂದ ರಾಜ್ಯಕ್ಕೆ ಬರುವ ವಲಸೆ ಕಾರ್ಮಿಕರ ನಿಯಂತ್ರಣಕ್ಕಾಗಿ ಸರ್ಕಾರ ಇದುವರೆಗೆ ಕೈಗೊಂಡ ಕ್ರಮಗಳೇನು ; ತಮಿಳುನಾಡು ರಾಜ್ಯದಲ್ಲಿ ವಲಸೆ ಕಾರ್ಮಿಕರ ಗಣತಿ ಮತ್ತು ನಿಯಂತ್ರಿತ ಸೌಲಭ್ಯ ಕಲ್ಪಿಸಲು ಕೈಗೊಳ್ಳುವ ಸರ್ವೆ ಕುರಿತಂತೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದೇ ರೀತಿಯ ಸರ್ವೆಯನ್ನು ರಾಜ್ಯದಲ್ಲೂ ಕೈಗೊಳ್ಳುವ ಯೋಜನೆ ಸರ್ಕಾರದ ಮುಂದೆ ಇದೆಯೇ ;

(ಆ) ವಿಶೇಷವಾಗಿ ನೆರೆ ದೇಶ ಬಾಂಗ್ಲಾದೇಶದಿಂದ ಬಂದು, ಅನಧಿಕೃತವಾಗಿ ಬೆಂಗಳೂರು ಮತ್ತು ರಾಜ್ಯದ ಇನ್ನಿತರ ಜಿಲ್ಲೆಗಳಲ್ಲಿ ನೆಲೆಸಿರುವ ಅಕ್ರಮ ವಲಸಿಗರನ್ನು ಗುರುತಿಸಲು ವಿಶೇಷ ಕಾರ್ಯಾಚರಣೆ ಸರ್ಕಾರದ ವತಿಯಿಂದ ನಡೆಸಲಾಗಿದೆಯೇ ;

(ಇ) ನೈಜೀರಿಯಾ ಮತ್ತು ದಕ್ಷಿಣ ಆಫ್ರಿಕಾ ದೇಶಗಳಿಂದ ಬಂದು, ವೀಸಾ ಅವಧಿ ಮುಗಿದಿದ್ದರೂ ಬೆಂಗಳೂರಿನಲ್ಲಿ ನೆಲೆಸಿ ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾದ ವಿದೇಶಿಗರನ್ನು ಗುರುತಿಸಿ ಡಿಪೋರ್ಟ್ ಮಾಡುವ ಕುರಿತು ಇದುವರೆಗೂ ಕೈಗೊಂಡ ಕ್ರಮಗಳು ಏನು ;

(ಈ) ಕೇರಳ ರಾಜ್ಯದಲ್ಲಿ ವಲಸೆ ಕಾರ್ಮಿಕರ ಮಕ್ಕಳ ಶಿಕ್ಷಣ ಕುರಿತಂತೆ ರೋಷನಿ ಎಂಬ ಯೋಜನೆ ಇದ್ದು, ದಕ್ಷಿಣ ಭಾರತದ ಇತರ ರಾಜ್ಯಗಳಲ್ಲಿಯೂ ಈ ರೀತಿ ಯೋಜನೆಗಳಿದ್ದು, ರಾಜ್ಯದಲ್ಲೂ ಈ ರೀತಿಯ ಯೋಜನೆಗಳು ಇವೆಯೇ ;

(ಉ) ವಲಸೆ ಕಾರ್ಮಿಕರಿಗೆ ರಾಜ್ಯದಲ್ಲಿ ಮತ ಚಲಾವಣೆ ಹಕ್ಕು ನೀಡಲಾಗಿದೆಯೇ ; ಅನ್ಯ ರಾಜ್ಯದ ಕಾರ್ಮಿಕರು ಈ ರಾಜ್ಯದಲ್ಲಿ ಕೆಲಸ ಪಡೆಯುವ ಮೂಲಕ ಸ್ಥಳೀಯ ಕಾರ್ಮಿಕರಿಗೆ ಉದ್ಯೋಗಾವಕಾಶ ಕಡಿಮೆ ಆಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಸ್ಥಳೀಯರಿಗೆ ಉದ್ಯೋಗ ನೀಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಡ್ಯಾಂಗಳ ನಿರ್ವಹಣೆಯ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೮ (೧೦೩೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಡ್ಯಾಂಗಳ ನಿರ್ವಹಣೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು ; (ಡ್ಯಾಂಗಳ ಪ್ರಕಾರ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿರುವ ಡ್ಯಾಂಗಳ ಕ್ರಸ್ಟ್ ಗೇಟ್‌ಗಳ ನಿರ್ವಹಣೆಗೆ ತಗಲುತ್ತಿರುವ ವೆಚ್ಚವೆಷ್ಟು ; ಕ್ರಸ್ಟ್ ಗೇಟುಗಳು ಕೆಲಸ ಮಾಡದೆ ಸ್ಥಗಿತಗೊಂಡ ಡ್ಯಾಂಗಳು ಎಷ್ಟು ;

(ಇ) ಇಲ್ಲಿಯವರೆಗೆ ರೈತರಿಗೆ ಎಷ್ಟು ಕೆಎಂಸಿ ನೀರು ಬಿಡುಗಡೆ ಮಾಡಲಾಗಿದೆ ; ಅದರಿಂದ ಸುದುಪಯೋಗ ಪಡೆದ ರೈತರ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ಡ್ಯಾಂ ಪ್ರಕಾರ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಕ್ರಸ್ಟ್ ಗೇಟ್‌ಗಳನ್ನು ಬದಲಾವಣೆ ಮಾಡಬೇಕು ; ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ? (ಸಂಪೂರ್ಣ ವಿವರ ನೀಡುವುದು)

## ಪ್ರವಾಸೋದ್ಯಮ ಸ್ಥಳಗಳ ಅಭಿವೃದ್ಧಿ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭೯ (೧೦೩೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರ/ರಾಜ್ಯ ಸರ್ಕಾರ ಪ್ರವಾಸೋದ್ಯಮ ಅಭಿವೃದ್ಧಿಗೆ ನೀಡಿರುವ ಅನುದಾನ ಎಷ್ಟು; ಬಿಡುಗಡೆಯಾದ ಅನುದಾನದಲ್ಲಿ ರಾಜ್ಯದಲ್ಲಿ ಯಾವ ಕಾಮಗಾರಿ ನಡೆದಿದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ಕಲ್ಯಾಣ ಕರ್ನಾಟಕದ ಭಾಗದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಯಾವ ಯಾವ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ; ಸದರಿ ಯೋಜನೆಗಳು ಪೂರ್ಣಗೊಂಡಿದೆಯೇ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಪ್ರವಾಸೋದ್ಯಮ ಸ್ಥಳಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಶೌಚಾಲಯ, ರಸ್ತೆ ಮತ್ತು ಬೀದಿ ದೀಪಗಳ ವ್ಯವಸ್ಥೆ ಮಾಡಲಾಗಿದೆಯೇ ಮತ್ತು ಶೌಚಾಲಯ ಬೀದಿ ದೀಪಗಳ ನಿಯಂತ್ರಣ ಮಾಡಲಾಗುತ್ತಿದೆಯೇ ; (ಸಂಪೂರ್ಣ ಮಾಹಿತಿ ಪ್ರವಾಸಿ ಸ್ಥಳಗಳವಾರು ನೀಡುವುದು)

(ಈ) ಕಲಬುರಗಿ ಜಿಲ್ಲೆಯಲ್ಲಿ ಮುಂಬರುವ ದಿನಗಳಲ್ಲಿ ಯಾವ ಯಾವ ಸ್ಥಳಗಳನ್ನು ಸರ್ಕಾರ ಪ್ರವಾಸಿ ತಾಣವನ್ನಾಗಿ ಗುರುತಿಸಿದೆ ? (ಮಾಹಿತಿ ನೀಡುವುದು)

# ಅಕ್ರಮ ಮದ್ಯ ಮಾರಾಟಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೦ (೧೦೩೪) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೂತನ ಬಾರ್ ಅನುಮತಿಗೆ ಪರವಾನಿಗೆ ಪತ್ರವನ್ನು ನೀಡಲಾಗುತ್ತಿದೆಯೇ ; ನೀಡಿದ್ದಲ್ಲಿ, ಎಷ್ಟು ಪರವಾನಿಗೆ ಪತ್ರ ನೀಡಲಾಗಿದೆ ; (ಹೆಸರು ಮತ್ತು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಕೆಲವು ಗ್ರಾಮಾಂತರ ಭಾಗಗಳಲ್ಲಿ ಸಣ್ಣ ಪುಟ್ಟ ಅಂಗಡಿಗಳಲ್ಲಿ ಅಕ್ರಮವಾಗಿ ಪರವಾನಿಗೆ ಇಲ್ಲದೇ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಇಲ್ಲಿಯವರೆಗೆ ದಾಖಲಾದ ಪ್ರಕರಣಗಳು ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕೆಲವು ಮದ್ಯದ ಅಂಗಡಿಗಳಿಗೆ ಪರವಾನಿಗೆ ನೀಡುವ ಮುನ್ನ ಮದ್ಯದ ಅಂಗಡಿ ತೆರೆಯುವ ಮತ್ತು ಮುಚ್ಚುವ ಸಮಯವನ್ನು ನಿಗಧಿಪಡಿಸಿಲಾಗಿದೆಯೇ ; ಇದ್ದಲ್ಲಿ, ಸಮಯ ಪಾಲನೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತವರ ಮೇಲೆ ಪ್ರಕರಣ ದಾಖಲಾಗಿದೆಯೇ ; ದಾಖಲಾಗಿದ್ದಲ್ಲಿ, ಅಂತಹ ಪ್ರಕರಣಗಳ ವಿವರ ನೀಡುವುದು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಪರವಾನಿಗೆ ಇಲ್ಲದೆ ಅನಧಿಕೃತವಾಗಿ ನಡೆಸುತ್ತಿರುವ ಪಬ್ ಅಥವಾ ಮದ್ಯ ಮಾರಾಟ ಮಾಡುವ ಡಾಬಾಗಳು ಎಷ್ಟು; ಅಂತಹವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಸಿವಿಲ್ ಸೇವೆಯಲ್ಲಿ ಪರಿಶಿಷ್ಟ ಜಾತಿ/ಪಂಗಡ ನೇಮಕಾತಿ ಕುರಿತು

**ಶ್ರೀ ಸುನೀಲ್ ವಲ್ಯಾಮರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೧ (೧೦೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸಿವಿಲ್ ಸೇವೆ (ಪರಿಶಿಷ್ಟ ಜಾತಿ/ಪಂಗಡ ವಿಶೇಷ ನೇಮಕಾತಿ) ನಿಯಮಗಳು ೧೯೮೫ನ್ನು ಯಾವಾಗ ಜಾರಿಗೆ ತರಲಾಯಿತು ; ತರಲು ಕಾರಣಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಅಧಿನಿಯಮ ಜಾರಿಗೆ ಬಂದಾಗಿನಿಂದ ಇಲ್ಲಿಯವರೆಗೆ ಎಷ್ಟು ಜನ ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳನ್ನು ಯಾವ ಇಲಾಖೆಯಲ್ಲಿ ಯಾವ ಹುದ್ದೆಯಡಿ ನೇಮಕ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಬ್ಯಾಕ್–ಲಾಗ ಹುದ್ದೆ ಎಂದರೇನು ; ಇದನ್ನು ಯಾವ ರೀತಿ ವರ್ಗೀಕರಿಸಲಾಗುತ್ತದೆ ; ಈ ಹುದ್ದೆಗಳು ಪರಿಶಿಷ್ಟ ಜಾತಿ/ಪಂಗಡ/ ಹಿಂದುಳಿದ ವರ್ಗಗಳ ಮೀಸಲಾತಿಗಳಲ್ಲಿ ಬರುತ್ತದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ಕಾರಿ ವ್ಯವಹಾರಗಳ ಹಂಚಿಕೆ ನಿಯಮ ೧೯೭೭ರ ಅನ್ವಯ ಮೀಸಲಾತಿ ವಿಷಯಕ್ಕೆ ಸಂಬಂಧಪಟ್ಟಂತೆ ಸ್ವಲ್ಪ ಬದಲಾವಣೆ ಮಾಡಬೇಕಾದರೆ ಯಾರ ಅನುಮೋದನೆ ಪಡೆಯಬೇಕಾಗಿರುತ್ತದೆ ? (ವಿವರವಾದ ಮಾಹಿತಿ ನೀಡುವುದು)

# ಟೋಕ್ರೆ ಕೋಳಿ ಮತ್ತು ಕೋಳಿ ಡೋರ ಸಮುದಾಯದವರಿಗೆ ಪರಿಶಿಷ್ಟ ಪಂಗಡದ ಜಾತಿ ಪ್ರಮಾಣ ಪತ್ರ ನೀಡದಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೯೮೨ (೧೦೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಟೋಕ್ರೆ ಕೋಳಿ ಮತ್ತು ಕೋಳಿ ಡೋರ ಸಮುದಾಯವನ್ನು ೧೯೫೬ ರಿಂದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಕೇಂದ್ರ ಸರ್ಕಾರವು ಸೇರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ವಿಶೇಷವಾಗಿ ಉತ್ತರ ಕರ್ನಾಟಕದಲ್ಲಿ ಟೋಕ್ರೆ ಕೋಳಿ/ ಕೋಳಿ ಡೋರ ಇವರಿಗೆ ಜಾತಿ ಪ್ರಮಾಣ ಪತ್ರ ನೀಡದಿರಲು ಕಾರಣವೇನು ;

(ಇ) ಟೋಕ್ರೆ ಕೋಳಿ/ಕೋಳಿ ಡೋರ ಜಾತಿ ಪ್ರಮಾಣ ಪತ್ರ ತೆಗೆದುಕೊಂಡು ಸರ್ಕಾರಿ ಸೇವೆ ಮಾಡಿರುವ ನೌಕರದಾರರ ಪದೋನ್ನತಿ ಮತ್ತು ನಿವೃತ್ತಿ ಹೊಂದಿದವರ ಪಿಂಚಣಿಯನ್ನು ತಡೆ ಹಿಡಿಯಲು ಕಾರಣಗಳೇನು ;

(ಈ) ಕೇಂದ್ರ ಸರ್ಕಾರದ ಸ್ಪಷ್ಟ ಆದೇಶಗಳಿದ್ದರೂ ಈ ಜಾತಿಯವರಿಗೆ ಜಾತಿ ಪ್ರಮಾಣ ಪತ್ರ ಕೊಡುವುದನ್ನು ನಿಲ್ಲಿಸಿ ತೊಂದರೆ ಕೊಡುತ್ತಿರುವ ಅಧಿಕಾರಿಗಳ ಮತ್ತು ಇಲಾಖೆಯವರ ಮೇಲೆ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗುವುದು ?

## ಕಲಬುರಗಿ ಜಿಲ್ಲೆಯಲ್ಲಿರುವ ಕೆರೆಗಳ ಸುಧಾರಣೆ ಮಾಡಿ ನೀರನ್ನು ರೈತರ ಹೊಲಗಳಿಗೆ ಬಳಕೆ ಮಾಡುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೯೮೩ (೧೯೯೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿರುವ ೧೬೯ ಕೆರೆಗಳಲ್ಲಿ ಪ್ರತಿವರ್ಷ ಸಂಗ್ರಹವಾಗುವ ಎಷ್ಟು ನೀರು ಮತ್ತು ಎಷ್ಟು ಎಕರೆ ಭೂಮಿಗೆ ನೀರು ಪೂರೈಕೆ ಮಾಡಲಾಗುತ್ತಿದೆ ಹಾಗೂ ಅವುಗಳ ಸುಧಾರಣೆಗೆ ಕೈಗೊಂಡ ಕ್ರಮಗಳೇನು ;

(ಆ) ಈ ವರ್ಷ ಉತ್ತಮ ಮಳೆ ಬಂದು ಎಲ್ಲಾ ಕೆರೆಗಳು ನೀರಿನಿಂದ ತುಂಬಿದ್ದು, ಆ ನೀರನ್ನು ರೈತರು ಬಳಕೆ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಇ) ರೈತರ ಹೊಲಗಳು ನೀರಿನ ಕೊರತೆ ಎದುರಿಸುತ್ತಿರುವಾಗ ಇರುವ ಕೆರೆಗಳನ್ನು ಸುಧಾರಣೆ ಮಾಡಿ ರೈತರ ಬೆಂಬಲಕ್ಕೆ ಬರಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ? (ವಿವರ ನೀಡುವುದು)

## ಕಳಸಾ–ಬಂಡೂರಿ ಮತ್ತು ಮಹದಾಯಿ ಯೋಜನೆಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೪ (೧೧೧೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳಸಾ–ಬಂಡೂರಿ ಮತ್ತು ಮಹದಾಯಿ ಯೋಜನೆಗಳಿಗೆ ಅರಣ್ಯ ಇಲಾಖೆಯ ಅನುಮತಿ ದೊರೆತಿದ್ದರೂ ಸಹ, ಕೇಂದ್ರ ಸರ್ಕಾರವು ಗೆಜೆಟ್ ಅಧಿಸೂಚನೆ (Gazette Notification) ಹೊರಡಿಸಲು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರವು ಈವರೆಗೆ ಮಾಡಿರುವ ಖರ್ಚು ಎಷ್ಟು ಮತ್ತು ಕೇಂದ್ರದ ಅಸಹಕಾರದಿಂದಾಗಿ ಯೋಜನಾ ವೆಚ್ಚವು ಎಷ್ಟು ಪ್ರಮಾಣದಲ್ಲಿ ಏರಿಕೆಯಾಗುವ ಸಾಧ್ಯತೆಯಿದೆ ;

(ಇ) ರಾಜ್ಯದ ಕೃಷ್ಣಾ ಮೇಲ್ದಂಡೆ ಯೋಜನೆ (UKP–೩), ಭದ್ರಾ ಮೇಲ್ದಂಡೆ ಯೋಜನೆ ಮತ್ತು ಎತ್ತಿನಹೊಳೆ ಯೋಜನೆಗಳು ಹಣಕಾಸಿನ ಕೊರತೆ ಅಥವಾ ತಾಂತ್ರಿಕ ಕಾರಣಗಳಿಂದ ಕುಂಠಿತಗೊಂಡಿರುವುದು ನಿಜವೇ ;

(ಈ) ಕೇಂದ್ರ ಸರ್ಕಾರದಿಂದ ಬರಬೇಕಾದ ಅನುದಾನ ಮತ್ತು ಅರಣ್ಯ ಇಲಾಖೆಯ ಬಾಕಿ ಇರುವ ಅನುಮತಿಗಳನ್ನು ತ್ವರಿತವಾಗಿ ಪಡೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಉ) ಈ ನೀರಾವರಿ ಯೋಜನೆಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಿ ರೈತರ ಜಮೀನುಗಳಿಗೆ ನೀರು ಒದಗಿಸಲು ಸರ್ಕಾರದ ಮುಂದಿರುವ ಕಾಲಮಿತಿ (Action Plan) ಎಷ್ಟು?

## ಬೆಂಗಳೂರು ನಗರದಲ್ಲಿ ಡ್ರಗ್ಸ್ ಹಾವಳಿ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೫ (೧೧೧೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ತಿಂಗಳ ಅವಧಿಯಲ್ಲಿ ಬೆಂಗಳೂರು ನಗರದಲ್ಲಿ ಪೊಲೀಸರು ನಡೆಸಿರುವ ವಿಶೇಷ ಕಾರ್ಯಾಚರಣೆಯಲ್ಲಿ ಎಷ್ಟು ಜನ ಡ್ರಗ್ಸ್ ವ್ಯಸನಿಗಳನ್ನು ಗುರುತಿಸಲಾಗಿದೆ ಮತ್ತು ಎಷ್ಟು ಜನ ಮಾದಕ ವಸ್ತು ಮಾರಾಟಗಾರರನ್ನು (Peddlers) ಬಂಧಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಈ ಜಾಲದಲ್ಲಿ ವಿದ್ಯಾರ್ಥಿಗಳು ಹಾಗೂ ಐಟಿ–ಬಿಟಿ ಉದ್ಯೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶಾಲಾ–ಕಾಲೇಜುಗಳ ಸುತ್ತಮುತ್ತ ಮಾದಕ ವಸ್ತು ಮಾರಾಟ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ವರದಿಯಾಗಿರುವಂತೆ ಸುಮಾರು ೧೦ ಕೋಟಿ ರೂಪಾಯಿ ಬೆಲೆ ಬಾಳುವ ಮಾದಕ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಇಷ್ಟು ದೊಡ್ಡ ಮಟ್ಟದ ಜಾಲದ ಮೂಲವನ್ನು (Source) ಪತ್ತೆಹಚ್ಚಲು ಸರ್ಕಾರಕ್ಕೆ ಸಾಧ್ಯವಾಗಿದೆಯೇ ;

(ಈ) ಮಾದಕ ವ್ಯಸನಕ್ಕೆ ತುತ್ತಾದವರ ಪುನರ್ವಸತಿಗಾಗಿ ಮತ್ತು ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು ಗೃಹ ಇಲಾಖೆಯು ಶಿಕ್ಷಣ ಮತ್ತು ಆರೋಗ್ಯ ಇಲಾಖೆಯೊಂದಿಗೆ ಸೇರಿ ರೂಪಿಸಿರುವ ವಿಶೇಷ ಕಾರ್ಯಯೋಜನೆಗಳು ಯಾವುವು ?

## ಕೇಂದ್ರದ ಮುಂದೆ ಬಾಕಿ ಇರುವ ಅನುದಾನದ ಪ್ರಸ್ತಾವನೆಗಳ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೬ (೧೧೨೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸುಮಾರು ೨೪ ಇಲಾಖೆಗಳ ಪ್ರಸ್ತಾವಗಳು ಅನುದಾನ ಮತ್ತು ಅನುಮೋದನೆಗಾಗಿ ಕೇಂದ್ರದ ವಿವಿಧ ಸಚಿವಾಲಯಗಳ ಮುಂದೆ ವರ್ಷಗಳಿಂದ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಆ ಪ್ರಸ್ತಾವಗಳ ಪಟ್ಟಿ ಮತ್ತು ಅವುಗಳ ಒಟ್ಟು ಮೊತ್ತ ಎಷ್ಟು ;

(ಆ) ನೆರೆರಾಜ್ಯಗಳಾದ ಆಂಧ್ರಪ್ರದೇಶ ಮತ್ತು ಬಿಹಾರದ ಅಭಿವೃದ್ಧಿ ಯೋಜನೆಗಳಿಗೆ ತಲಾ ರೂ.೧ ಲಕ್ಷ ಕೋಟಿಗೂ ಅಧಿಕ ಹಣ ಬಿಡುಗಡೆ ಮಾಡಿರುವ ಕೇಂದ್ರ ಸರ್ಕಾರ, ಕರ್ನಾಟಕದ ಭದ್ರಾವತಿ ಉಕ್ಕಿನ ಕಾರ್ಖಾನೆ (VISL) ಪುನಃಶ್ಚೇತನ ಮತ್ತು **ಜಲಜೀವನ್** ಮಿಷನ್‌ನ ರೂ. ೪,೫೭೪ ಕೋಟಿ ಪಾಲನ್ನು ನೀಡುವಲ್ಲಿ ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಳೆದ ಎರಡು ವರ್ಷಗಳಿಂದ ೧೫ ನೇ ಹಣಕಾಸು ಆಯೋಗವು ಕರ್ನಾಟಕಕ್ಕೆ ಶಿಫಾರಸ್ಸು ಮಾಡಿರುವ ಆರೋಗ್ಯ ಅನುದಾನ ಬಿಡುಗಡೆಯಾಗದಿರಲು ಕಾರಣಗಳೇನು ; ಈ ವಿಳಂಬದಿಂದಾಗಿ ರಾಜ್ಯದ ಗ್ರಾಮೀಣ ಆರೋಗ್ಯ ಸೇವೆಗಳ ಮೇಲೆ ಉಂಟಾಗಿರುವ ಪರಿಣಾಮಗಳೇನು ;

(ಈ) ಜಿಎಸ್‌ಟಿ ಸಂಗ್ರಹದಲ್ಲಿ ರಾಜ್ಯ ಸರ್ಕಾರವು ದೇಶದಲ್ಲೇ ಮುಂಚೂಣಿಯಲ್ಲಿದ್ದರೂ, ರಾಜ್ಯಕ್ಕೆ ಬರಬೇಕಾದ ತೆರಿಗೆ ಪಾಲು ಮತ್ತು ವಿಪತ್ತು ಪರಿಹಾರ ನಿಧಿ ಹಂಚಿಕೆಯಲ್ಲಿ ಆಗುತ್ತಿರುವ ತಾರತಮ್ಯವನ್ನು ಸರಿಪಡಿಸಲು ರಾಜ್ಯವನ್ನು ಪ್ರತಿನಿಧಿಸುವ ಕೇಂದ್ರ ಸಚಿವರು ಮತ್ತು ಸಂಸದರೊಂದಿಗೆ ಸರ್ಕಾರ ನಡೆಸಿದ ಸಂವಹನಗಳ ವಿವರವೇನು ;

(ಉ) ಕೇಂದ್ರದ ಮಲತಾಯಿ ಧೋರಣೆಯಿಂದಾಗಿ ರಾಜ್ಯದ ಅಭಿವೃದ್ಧಿ ಕುಂಠಿತವಾಗುತ್ತಿರುವುದನ್ನು ಪ್ರತಿಭಟಿಸಲು ಅಥವಾ ಈ ಅನುದಾನವನ್ನು ತ್ವರಿತವಾಗಿ ಪಡೆಯಲು ಸರ್ಕಾರವು ಹಿರಿಯ ಸಚಿವರ ನಿಯೋಗವನ್ನು ಕೇಂದ್ರಕ್ಕೆ ಕರೆದೊಯ್ಯುವ ಪ್ರಸ್ತಾವನೆ ಹೊಂದಿದೆಯೇ ?

## ಅಪ್ರಾಪ್ತ ವಯಸ್ಕರ ವಾಹನ ಚಾಲನೆ ಪ್ರಕರಣಗಳ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮೭ (೧೧೨೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಅಪ್ರಾಪ್ತ ವಯಸ್ಕರು ಕಾನೂನುಬಾಹಿರವಾಗಿ ವಾಹನ ಚಾಲನೆ ಮಾಡುತ್ತಿರುವ ಪ್ರಕರಣಗಳು ವರ್ಷದಿಂದ ವರ್ಷಕ್ಕೆ ಗಣನೀಯವಾಗಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ಈ ರೀತಿಯ ದಾಖಲಾಗಿರುವ ಪ್ರಕರಣಗಳ ವಿವರವೇನು ; (ವರ್ಷವಾರು ಮಾಹಿತಿ ನೀಡುವುದು)

(ಇ) ಅಪ್ರಾಪ್ತರಿಗೆ ವಾಹನ ನೀಡುವ ಪೋಷಕರ ವಿರುದ್ಧ ದಾಖಲಾಗಿರುವ ಪ್ರಕರಣಗಳೆಷ್ಟು ಮತ್ತು ಅವರ ವಿರುದ್ಧ ಕೈಗೊಳ್ಳಲಾಗಿರುವ ಕಾನೂನು ಕ್ರಮಗಳೇನು ;

(ಈ) ಅಪ್ರಾಪ್ತರ ವಾಹನ ಚಾಲನೆಯಿಂದ ಸಂಭವಿಸುತ್ತಿರುವ ಅಪಘಾತಗಳನ್ನು ತಡೆಯಲು ಮತ್ತು ಸಂಚಾರಿ ನಿಯಮಗಳ ಬಗ್ಗೆ ಜಾಗೃತಿ ಮೂಡಿಸಲು ಸರ್ಕಾರ ರೂಪಿಸಿರುವ ವಿಶೇಷ ಕಾರ್ಯಚರಣೆಗಳ ಯೋಜನೆಗಳೇನು ?

## ಪ್ರವಾಸೋದ್ಯಮ ಸಾಮರ್ಥ್ಯವನ್ನು ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮದ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೯೮೮ (೧೧೩೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರವಾಸೋದ್ಯಮ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ಹೆಚ್ಚಿನ ಪ್ರವಾಸಿಗರು ಮತ್ತು ಹೂಡಿಕೆದಾರರನ್ನು ಆಕರ್ಷಿಸಲು ಸರ್ಕಾರ ಯಾವ ರೀತಿ ಕ್ರಮಕೈಗೊಂಡಿದೆ ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಪ್ರವಾಸೋದ್ಯಮ ಇಲಾಖೆಗೆ ಹೂಡಿಕೆದಾರರು ಎಷ್ಟು ಅನುದಾನವನ್ನು ನೀಡಿರುತ್ತಾರೆ ; ಈ ಅನುದಾನವನ್ನು ಯಾವುದಕ್ಕೆ ಬಳಸಲಾಗಿದೆ ; (ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ರಾಜ್ಯದಲ್ಲಿ ಪರಿಸರ ಪ್ರವಾಸೋದ್ಯಮವನ್ನು ಉತ್ತೇಜಿಸಲು ಎಷ್ಟು ಪ್ರವಾಸಿ ತಾಣಗಳಲ್ಲಿ INTERPRETATION CENTER ಗಳನ್ನು ತೆರೆಯಲಾಗಿದೆ ; ಪ್ರತಿ ಸೆಂಟರ್‌ಗೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; ಈ ಸೆಂಟರ್‌ನ ಕಾರ್ಯಚಟುವಟಿಕೆಗಳೇನು ?

## ರಾಜ್ಯದಲ್ಲಿರುವ ನೀರಾವರಿ ಕೆರೆಗಳನ್ನು ಮತ್ತು ಜಿನುಗು ಕೆರೆಗಳನ್ನು ತಪಾಸಣೆ ಮಾಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೯೮೯ (೧೧೩೬) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ನೀರಾವರಿ ಇಲಾಖೆಯ ನಿಯಂತ್ರಣದಲ್ಲಿ ಪ್ರಸ್ತುತ ಎಷ್ಟು ನೀರಾವರಿ ಕೆರೆಗಳಿವೆ ಹಾಗೂ ಎಷ್ಟು ಜಿನುಗು ಕೆರೆಗಳಿವೆ ;

(ಆ) ಈ ಕೆರೆಗಳನ್ನು ಸಂಬಂಧಪಟ್ಟ ವಿಭಾಗದ ಕಾರ್ಯಪಾಲಕ ಇಂಜಿನಿಯರ್/ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರಿಂದ ವರ್ಷದಲ್ಲಿ ಎರಡು ಬಾರಿ ತಪಾಸಣೆ ಮಾಡಲಾಗುತ್ತಿದೆಯೇ ;

(ಇ) ಹಾಗಿದ್ದಲ್ಲಿ, ಎಲ್ಲಾ ಕೆರೆಗಳನ್ನು ತಪಾಸಣೆ ಮಾಡಿರುವ ವಿವರ ನೀಡುವುದು ; ಇಲ್ಲದಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಯಾವ ರೀತಿ ಕ್ರಮಕೈಗೊಂಡಿದೆ ?

# ರಾಜ್ಯದ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಕ್ರೀಡಾ ಸಾಮಗ್ರಿಗಳನ್ನು ನೀಡುವ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೯೬೦ (೧೦೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಕ್ರೀಡಾ ಇಲಾಖೆಯಿಂದ ರಾಜ್ಯದ ಸರ್ಕಾರಿ ಶಾಲೆಗಳು/ಕಾಲೇಜು ವಿದ್ಯಾರ್ಥಿಗಳಿಗೆ ೨೦೨೩ನೇ ಸಾಲಿನಿಂದ ೨೦೨೬ನೇ ಸಾಲಿನವರೆಗೆ ಯಾವ ಯಾವ ಕ್ರೀಡಾ ಸಾಮಗ್ರಿಗಳನ್ನು ನೀಡಲಾಗಿದೆ ;

(ಆ) ರಾಜ್ಯದ ಸರ್ಕಾರಿ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಕ್ರೀಡಾ ಮನೋಭಾವಗಳನ್ನು ಹೆಚ್ಚಿಸುವ ಸಲುವಾಗಿ ಸರ್ಕಾರ ಈ ಸಾಲಿನಲ್ಲಿ ರಾಜ್ಯದ ಎಲ್ಲಾ ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಕ್ರೀಡಾ ಸಾಮಗ್ರಿಗಳನ್ನು ನೀಡಲು ಸರ್ಕಾರದ ವಿಶೇಷ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

# ಶಾಲಾ–ಕಾಲೇಜುಗಳ ವ್ಯಾಪ್ತಿಯಲ್ಲಿ ವೈನ್ ಸ್ಟೋರ್‌ಗಳು ನಡೆಯುತ್ತಿರುವ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೯೬೧ (೧೦೪೯) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಕಾಲೇಜಿನ ವ್ಯಾಪ್ತಿಯಲ್ಲಿ ನಿಯಮಾವಳಿ ಮೀರಿ ವೈನ್ ಸ್ಟೋರ್‌ಗಳು ನಡೆಯುತ್ತಿರುವ ಬಗ್ಗೆ ಸರ್ಕಾರದಲ್ಲಿ ಯಾವುದಾದರು ಮಾಹಿತಿ ಇದೆಯೇ ; (ಇದ್ದಲ್ಲಿ, ವಿವರ ನೀಡುವುದು)

(ಆ) ಇಲ್ಲವೇ, ಶಾಲಾ ಕಾಲೇಜುಗಳನ್ನು ವೈನ್ ಸ್ಟೋರ್‌ಗಳ ಬಳಿಯೇ ನಿರ್ಮಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಇ) ಶಾಲಾ ಕಾಲೇಜುಗಳನ್ನು ಆರಂಭಿಸುವ ಮುನ್ನ ಅಬಕಾರಿ ಇಲಾಖೆಯಿಂದಲೂ ನಿರಾಕ್ಷೇಪಣಾ ಪತ್ರ ನೀಡುವ ಪ್ರಕ್ರಿಯೆ ಜಾರಿಯಲ್ಲಿದೆಯೇ ; ಇಲ್ಲವಾದಲ್ಲಿ, ಈ ಬಗ್ಗೆ ಸರ್ಕಾರ ಕ್ರಮಕೈಗೊಳ್ಳುವುದೇ ?

## ಅಬಕಾರಿ ಇಲಾಖೆಯ ಕಾನೂನು ಮತ್ತು ನಿಯಂತ್ರಣದ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨ (೧೦೭೪) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರ/ಗ್ರಾಮೀಣ ಪ್ರದೇಶದಲ್ಲಿ ಅಬಕಾರಿ ಕಾನೂನು ಉಲ್ಲಂಘನೆ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಅಕ್ರಮ/ಕಳ್ಳಮಧ್ಯ ಮಾರಾಟ ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳು ಯಾವುವು ; (ಸಂಪೂರ್ಣ ವಿವರ ಒದಗಿಸುವುದು)

(ಇ) ಕಳ್ಳಮದ್ಯ ಪತ್ತೆ ಮಾಡಲು ಮತ್ತು ಮಾರಾಟ ತಡೆಯಲು ರಾಜ್ಯದಲ್ಲಿ ಎಷ್ಟು ದಾಳಿಗಳನ್ನು ನಡೆಸಲಾಗಿದೆ ;

(ಈ) ಲೈಸೆನ್ಸಿಂಗ್ ಪ್ರಕ್ರಿಯೆಯಲ್ಲಿ ಜನರಿಗೆ ಎದುರಾಗುವ ತೊಂದರೆಗಳ ಕುರಿತು ಸರ್ಕಾರ ಚಿಂತಿಸಿದೆಯೇ ; (ಇದ್ದಲ್ಲಿ, ಮಾಹಿತಿ ಒದಗಿಸುವುದು)

## ಗೃಹ ಇಲಾಖೆಯ ಕಾನೂನು ಮತ್ತು ಸುವ್ಯವಸ್ಥೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩ (೧೦೭೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ದಾಖಲಾಗಿರುವ ಅಪರಾಧಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಸದರಿ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳ ವಿಚಾರಣೆ ಪೂರ್ಣಗೊಂಡಿವೆ ; ಬಾಕಿ ಉಳಿದ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಮಹಿಳೆಯರ ವಿರುದ್ಧದ ಅಪರಾಧಗಳನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ; ( ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಸೈಬರ್ ಅಪರಾಧಗಳ ನಿಯಂತ್ರಣಕ್ಕಾಗಿ ಸರ್ಕಾರ ಯಾವ ರೀತಿಯ ಕಠಿಣ ಕ್ರಮಗಳನ್ನು ಕೈಗೊಂಡಿದೆ ?

## ಖಾಲಿ ಇರುವ ಹುದ್ದೆಗಳ ಭರ್ತಿ ಕುರಿತು

**ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೪ (೯೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ವಿವಿಧ ಇಲಾಖೆಯಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ; (ಮಾಹಿತಿ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; ಯಾವಾಗ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಇ) ಹೊಸ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಅಗ್ನಿ ಶಾಮಕ ಇಲಾಖೆಯಲ್ಲಿ ಮಹಿಳೆಯರ ನೇಮಕಾತಿ ಕುರಿತು

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫ (೧೦೧೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಗ್ನಿಶಾಮಕ ಇಲಾಖೆ ಪ್ರಾರಂಭವಾಗಿ ೮೩ ವರ್ಷ ಕಳೆದರೂ ಇಲಾಖೆಯಲ್ಲಿ ಮಹಿಳೆಯರ ನೇಮಕಾತಿ ಮಾಡಿಕೊಳ್ಳದೇ ಇರುವುದು ನಿಜವೇ ; ಇದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಆ) ಅಗ್ನಿ ಶಾಮಕ ಇಲಾಖೆಯಲ್ಲಿ ಮಹಿಳೆಯರಿಗೆ ಅವಕಾಶ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಇದ್ದರೆ, ಯಾವ ಯಾವ ಹುದ್ದೆಗಳಲ್ಲಿ ಅವರನ್ನು ನೇಮಕ ಮಾಡಿಕೊಳ್ಳಲಾಗುವುದು ಮತ್ತು ಯಾವಾಗ ನೇಮಕ ಮಾಡಿಕೊಳ್ಳಲಾಗುವುದು ?

## ಯಾದಗಿರಿಯಲ್ಲಿ ಜಿಲ್ಲಾ ವಿಜ್ಞಾನ ಕೇಂದ್ರ ಪ್ರಾರಂಭಿಸುವ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೬ (೧೦೦೮) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ಜಿಲ್ಲಾ ಕೇಂದ್ರವೆಂದು ಘೋಷಣೆಯಾಗಿ ೧೪ ವರ್ಷಗಳಾಗಿದ್ದರೂ ಇಂದಿಗೂ ಜಿಲ್ಲಾ ವಿಜ್ಞಾನ ಕೇಂದ್ರ ಸ್ಥಾಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾದಗಿರಿ ಜಿಲ್ಲೆಯಲ್ಲಿ ಯಾವಾಗ ವಿಜ್ಞಾನ ಕೇಂದ್ರ ಸ್ಥಾಪಿಸಲಾಗುವುದು ;

(ಇ) ಯಾದಗಿರಿ ಜಿಲ್ಲೆಯಲ್ಲಿ ವಿಜ್ಞಾನ ಕೇಂದ್ರ ಸ್ಥಾಪಿಸಲು ಜಿಲ್ಲಾಡಳಿತದಿಂದ ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಈ) ವಿಜ್ಞಾನ ಕೇಂದ್ರ ಸ್ಥಾಪನೆಗೆ ಬೇಕಾಗುವ ಅನುದಾನ ಎಷ್ಟು? (ವಿವರ ನೀಡುವುದು)

## ಯಾದಗಿರಿಯಲ್ಲಿರುವ ಜಿಲ್ಲಾ ಕ್ರೀಡಾಂಗಣದ ಅಭಿವೃದ್ಧಿಯ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೯೭ (೧೦೦೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿಯಲ್ಲಿರುವ ಜಿಲ್ಲಾ ಕ್ರೀಡಾಂಗಣದಲ್ಲಿ ಕನಿಷ್ಠ ಮೂಲ ಸೌಲಭ್ಯಗಳಿಗೂ ಆಟಗಾರರು ಪರದಾಡುವ ಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕ್ರೀಡಾಂಗಣದ ಅಭಿವೃದ್ಧಿಗಾಗಿ ಇದುವರೆವಿಗೂ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ;

(ಇ) ಯಾದಗಿರಿ ಜಿಲ್ಲೆಯಲ್ಲಿರುವ ಕ್ರೀಡಾ ವಸತಿ ಶಾಲಾ ಮಕ್ಕಳಿಗೆ ಊಟ ಉಪಹಾರ ಸೇರಿದಂತೆ ಯಾವುದೇ ಸೌಲಭ್ಯಗಳು ಸಕಾಲದಲ್ಲಿ ಸಿಗುತ್ತಿಲ್ಲದಿರುವುದರ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಯಾದಗಿರಿ ಜಿಲ್ಲೆಯ ಬೂದಿಹಾಳ್–ಪೀರಾಪುರ ಏತ ನೀರಾವರಿ ಯೋಜನೆ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೯೮೮ (೧೦೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಾದಗಿರಿ ಜಿಲ್ಲೆಯ ಸುರಪುರ ಮತ್ತು ಹುಣಸಗಿ ತಾಲ್ಲೂಕಿನ ಸುಮಾರು ೨೫ಕ್ಕೂ ಹೆಚ್ಚು ಹಳ್ಳಿಗಳ ಜಮೀನಿಗೆ ನೀರುಣಿಸುವ ಬೂದಿಹಾಳ–ಪೀರಾಪುರ ಏತ ನೀರಾವರಿ ಯೋಜನೆಯ ಕಾಮಗಾರಿ ಯಾವಾಗ ಪ್ರಾರಂಭಿಸಲಾಯಿತು ಹಾಗೂ ಯೋಜನೆಗೆ ನಿಗದಿಪಡಿಸಿರುವ ಅನುದಾನ ಎಷ್ಟು ;

(ಆ) ಸದರಿ ಏತ ನೀರಾವರಿ ಯೋಜನೆಯು ಪ್ರಾರಂಭವಾಗಿ ಹಲವು ವರ್ಷಗಳೇ ಕಳೆದರೂ ಈವರೆಗೂ ರೈತರ ಜಮೀನುಗಳಿಗೆ ನೀರು ತಲುಪದಿರಲು ಕಾರಣವೇನು ;

(ಇ) ಈ ಯೋಜನೆಯು ಪ್ರಸ್ತುತ ಯಾವ ಹಂತದಲ್ಲಿದೆ ಮತ್ತು ರೈತರ ಭೂಮಿಗೆ ನೀರು ಹರಿಸಲು ಸರ್ಕಾರ ನಿಗದಿಪಡಿಸಿರುವ ಕಾಲಮಿತಿ ಎಷ್ಟು ?

## ರಾಜ್ಯದಲ್ಲಿ ಅನುದಾನಿತ ಸಂಸ್ಥೆ ಹಾಗೂ ನಿಗಮ ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೯೯೯ (೧೦೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಇಲಾಖೆ, ಅನುದಾನಿತ ಸಂಸ್ಥೆಗಳಲ್ಲಿ ಹಾಗೂ ನಿಗಮ ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ವೃಂದವಾರು, ಇಲಾಖಾವಾರು ಮತ್ತು ನಿಗಮವಾರು ಮಾಹಿತಿ ನೀಡುವುದು)

(ಆ) ಶಿಕ್ಷಣ ಇಲಾಖೆಯಲ್ಲಿ ಮತ್ತು ಪೊಲೀಸ್ ಇಲಾಖೆಯಲ್ಲಿ ಹೆಚ್ಚಿನ ಹುದ್ದೆಗಳು ಖಾಲಿ ಇರುವುದರಿಂದ ಶೈಕ್ಷಣಿಕ ದೃಷ್ಟಿಯಿಂದ ಹಾಗೂ ಆಡಳಿತಾತ್ಮಕ ದೃಷ್ಟಿಯಿಂದ ತೊಂದರೆಯಾಗುವುದಿಲ್ಲವೇ ;

(ಇ) ಹಾಗಿದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಯಾವ ಕ್ರಮ ಜರುಗಿಸಲಾಗಿದೆ ; ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ;

(ಈ) ಸರ್ಕಾರದ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಇದ್ದಲ್ಲಿ, ಕೆಲಸದ ಒತ್ತಡ ಹಾಗೂ ಗುಣಮಟ್ಟ ಕಡಿಮೆಯಾಗುವುದಿಲ್ಲವೇ ; ಇದನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ನೋಂದಣಿಯಾಗಿರುವ ಕಾರ್ಯನಿರತ ಪತ್ರಕರ್ತರ ಸಂಘಗಳ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೦೦೦ (೧೦೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೋಂದಣಿಯಾಗಿರುವ ಕಾರ್ಯನಿರತ ಪತ್ರಕರ್ತರ ಸಂಘಗಳು ಮತ್ತು ಪತ್ರಿಕೆಗಳ ಸಂಖ್ಯೆ ಎಷ್ಟು; ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ಕಾರ್ಯನಿರತ ಪತ್ರಿಕಾ ವರದಿಗಾರರಿಗೆ ಹಾಗೂ ಅವರ ಕುಟುಂಬದವರಿಗೆ ಇರುವ ಸೌಲಭ್ಯಗಳು ಯಾವುವು ;

(ಇ) ಕಾರ್ಯನಿರತ ಪತ್ರಕರ್ತರ ಕುಟುಂಬದ ಮಕ್ಕಳಿಗೆ ಉನ್ನತ ವ್ಯಾಸಂಗ ಹಾಗೂ ವಿದೇಶ ವ್ಯಾಸಂಗಕ್ಕೆ ಮತ್ತು ವಿದ್ಯಾಭ್ಯಾಸಕ್ಕೆ ವಿಶೇಷ ಶಿಷ್ಯ ವೇತನ ನೀಡುವ ಪ್ರಸ್ತಾಪ ಸರ್ಕಾರದ ಹಂತದಲ್ಲಿದೆಯೇ ;

(ಈ) ಇಲ್ಲದಿದ್ದಲ್ಲಿ, ಈ ಕುಟುಂಬಗಳಿಗೆ ವಿಶೇಷ ಅನುದಾನ, ವಸತಿ, ವಿದ್ಯಾರ್ಥಿ ವೇತನ ಇತ್ಯಾದಿ ಸೌಕರ್ಯಗಳನ್ನು ನೀಡುವ ಬಗ್ಗೆ ಸರ್ಕಾರದ ನಿಲುವೇನು ?

## ತುಮಕೂರು, ಕೋಲಾರ ಹಾಗೂ ಚಿತ್ರದುರ್ಗ ಪ್ರವಾಸಿ ತಾಣಗಳ ಕುರಿತು

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೦೦೧ (೧೦೪೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು, ಚಿತ್ರದುರ್ಗ, ಕೋಲಾರ, ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಪ್ರವಾಸಿ ತಾಣಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಜಿಲ್ಲೆಗಳಲ್ಲಿ ಇರುವ ಪ್ರವಾಸಿ ತಾಣಗಳೆಷ್ಟು; ಇವುಗಳ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸಿದ್ದಲ್ಲಿ, ರಾಜ್ಯ ಪ್ರವಾಸಿಗರ ಸಂಖ್ಯೆ ಹೆಚ್ಚಾಗಿ ಜನರ ಜೀವನ ಮತ್ತು ತಲಾ ಆದಾಯಕ್ಕೆ ಪ್ರೋತ್ಸಾಹ ಸಿಗುವಂತಾಗುವುದಿಲ್ಲವೇ ;

(ಈ) ಯಾವ ಯಾವ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಪಡಿಸಲಾಗಿದೆ ; ವಿನಿಯೋಗ ಮಾಡಿರುವ ಅನುದಾನ ಎಷ್ಟು ; ಪ್ರವಾಸಿಗರಿಗೆ ಯಾವ ಯಾವ ಸೌಲಭ್ಯ ಮತ್ತು ಸೌಕರ್ಯಗಳನ್ನು ಒದಗಿಸಲಾಗಿದೆ ? (ಮಾಹಿತಿ ನೀಡುವುದು)

## ರಾಜ್ಯದ ನೀರಾವರಿ ಯೋಜನೆಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೦೦೨ (೧೦೪೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ನೀರಾವರಿ ಯೋಜನೆಗಳಿಗೆ ಎಷ್ಟು ಹೆಕ್ಟೇರ್ ಕೃಷಿ ಭೂಮಿಗೆ ನೀರಾವರಿಯನ್ನು ನೀಡಲಾಗಿದೆ ; ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ಯಾವ ಯಾವ ನೀರಾವರಿ ಯೋಜನೆಯಿಂದ ಕುಡಿಯುವ ನೀರನ್ನು ಯಾವ ಯಾವ ನಗರಗಳಿಗೆ ವ್ಯವಸ್ಥೆ ಕಲ್ಪಿಸಲಾಗಿದೆ ; ಎಷ್ಟು ಪ್ರಮಾಣದ ನೀರನ್ನು ಕುಡಿಯುವ ಉದ್ದೇಶಕ್ಕೆ ಬಳಸಲಾಗುತ್ತಿದೆ ;

(ಇ) ಹಾಲಿ ಇರುವ ನೀರಿನ ಯೋಜನೆಗಳಲ್ಲಿ ಕೃಷಿಗೆ ಮತ್ತು ಕುಡಿಯುವ ನೀರಿನ ಯೋಜನೆಗೆ ನೀರು ಸಾಕಾಗುತ್ತದೆಯೇ ; ಇಲ್ಲದೇ ಇದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಕೆ.ಆರ್. ಸಾಗರದಿಂದ ಕಡಲತೀರವಿರುವ ಮಂಗಳೂರಿಗೆ ಸ್ಥಳಾಂತರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦೨ (ಎ) (೧೫೮೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದ ಕಡಲತೀರವು ೩ ಜಿಲ್ಲೆಗಳನ್ನು ಹೊಂದಿದ್ದು, ಸುಮಾರು ೩೨೦ ಕಿ.ಮೀ ನಷ್ಟು ಉದ್ದವಿರುತ್ತದೆ ; ಮಳೆಗಾಲದ ಸಮಯದಲ್ಲಿ ಸಾಕಷ್ಟು ಕಡಲ ಕೊರೆತ ಉಂಟಾಗಿ, ಪ್ರಾಣ ಹಾನಿ ಹಾಗೂ ಆಸ್ತಿಪಾಸ್ತಿಗಳಿಗೆ ಹಾನಿ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಸಮುದ್ರದಲ್ಲಿನ ಕೊರೆತದ ಕಾರಣಗಳನ್ನು ಕಂಡುಹಿಡಿಯಲು ಡಾಟಾಗಳನ್ನು ಸಂಗ್ರಹ ಮಾಡಲು ಮುಂಜಾಗ್ರತೆ ಕ್ರಮಕೈಗೊಳ್ಳಲು Karnataka Engineering Research Station (KERS) ನ ಎರಡು ಉಪವಿಭಾಗಗಳು ಮಂಗಳೂರು ಹಾಗೂ ಭಟ್ಕಳದಲ್ಲಿ ಕಾರ್ಯನಿರ್ವಹಿಸುತ್ತದೆ, ಆದರೆ ವಿಭಾಗ ಕಛೇರಿಯು Coastal Engineering Division, K.R. Sagar, ಮೈಸೂರಿನಲ್ಲಿ ಇರುತ್ತದೆ, ಈ ಮುಖ್ಯ ಕಛೇರಿಯುನ್ನು ಕೆ.ಆರ್.ಸಾಗರದಿಂದ ಕಡಲತೀರವಿರುವ ಮಂಗಳೂರಿಗೆ ಸ್ಥಳಾಂತರಿಸಲು ಸರ್ಕಾರ ಕ್ರಮಕೈಗೊಳ್ಳುವುದೇ ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–177/500 ಪ್ರತಿಗಳು/26–02–2026